23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 313 | ನವದೆಹಲಿ | ಬೆಲೆ ₹10 | ಮೇ 19 2026, ಮಂಗಳವಾರ

ಗ್ಯಾರಂಟಿ ಹಬ್ಬ

4ನೇ ವರ್ಷಕ್ಕೆ ಪಾದಾರ್ಪಣೆ

# ಸಮರ್ಪಣೆ ಸಂಕಲ್ಪ

## ಮೂರು ವರ್ಷದ ಸಾಧನೆಯ ಸಮರ್ಪಣೆ, ಮತ್ತಷ್ಟು ಜನಪರ ಸೇವೆಯ ಪ್ರತಿಜ್ಞೆ




## ಕುಟುಂಬಗಳಿಗೆ ಹಕ್ಕುಪತ್ರ /ದಾಖಲೆ/ಆದೇಶಪತ್ರ ಸಮರ್ಪಣೆ

**ಮೇ 19, ಮಂಗಳವಾರ**
**ಬೆಳಗ್ಗೆ 11:00 ಗಂಟೆಗೆ**

**ಸರ್ಕಾರಿ ಪದವಿಪೂರ್ವ**
**ಕಾಲೇಜು ಮೈದಾನ, ತುಮಕೂರು**

### ಕಂದಾಯ ಇಲಾಖೆಯ ಮೂರು ವರ್ಷದ ಸಾರ್ಥಕ ಸೇವೆ

| ರಾಜ್ಯದ ಸಾಧನೆಗಳು | ತುಮಕೂರು ಜಿಲ್ಲೆಯ 1,52,492 ಫಲಾನುಭವಿಗಳಿಗೆ |
|---|---|
| — ಇ-ಪೌತಿ ಅಭಿಯಾನ — 14.39 ಲಕ್ಷ ಪೌತಿಖಾತೆ ಸಾಧನೆ | ಇ-ಪೌತಿ - 1,06,000 |
| — ದರ್ಖಾಸ್ತು ಪೋಡಿ — 2.5 ಲಕ್ಷ ಮಂಜೂರಿದಾರರಿಗೆ ಪೋಡಿ ಪ್ರಗತಿ | ಕಂದಾಯ ಗ್ರಾಮ ಹಕ್ಕುಪತ್ರ - 20,666 |
| | ದರ್ಖಾಸ್ತು ಪೋಡಿ ಮತ್ತು ಪೋಡಿ ಮುಕ್ತ ಅಭಿಯಾನ - 25,826 |



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರನ್ನು ಮಾನ್ಯ ಗೃಹ ಸಚಿವರು, ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರುಗಳಾದ ಡಾ. ಜಿ. ಪರಮೇಶ್ವರ್ ಅವರು ಸಮಾವೇಶಕ್ಕೆ ಆಹ್ವಾನಿಸುತ್ತಿರುವುದು

ಕಂದಾಯ ಸೇವೆಗಳು ಈಗ
**ಸರಳ. ಸುಲಭ. ಸುಲಲಿತ.**




ಮಾನ್ಯ ಕಂದಾಯ ಸಚಿವರಾದ ಶ್ರೀ ಕೃಷ್ಣಭೈರೇಗೌಡ ಅವರಿಂದ
**ಜನ ಸೇವೆಯ ಸಮರ್ಪಣೆ**

ಭಾರತದ ಸಾರ್ವಭೌಮತ್ವ , ಅಖಂಡತೆ ಮತ್ತು ಏಕತೆಯನ್ನು ಎತ್ತಿ ಹಿಡಿಯುವುದು ಮತ್ತು ಕಾಪಾಡುವುದು.

www.revenuecommissionerate.karnataka.gov.in


**ನಿತ್ಯ ಪಂಚಾಂಗ 19.05.2026 ಮಂಗಳವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ -ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ತದಿಗೆ, ಮೃಗಶಿರ ನಕ್ಷತ್ರ,

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |



ಮಾಜಿ ಪ್ರಧಾನಿ ದೇವೇಗೌಡರ ಹುಟ್ಟುಹಬ್ಬದ ಪ್ರಯುಕ್ತ ಗ್ರೇಟರ್ ಬೆಂಗಳೂರು ನಗರದ ಜೆಡಿಎಸ್ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎಚ್.ಎಂ.ರಮೇಶ್‌ಗೌಡ ಶುಭ ಕೋರಿದರು.

# ಹಿರಿಯ ಮುತ್ಸದ್ದಿ ದೇವೇಗೌಡರಿಗೆ ಹುಟ್ಟುಹಬ್ಬದ ಶುಭ ಕೋರಿದ ಪ್ರಧಾನಿ

## ಗೌಡರ ನೀತಿಯ ಆಳವಾದ ತಿಳಿವಳಿಕೆಗೆ ಮೋದಿ ಶ್ಲಾಘನೆ



**ನವದೆಹಲಿ, ಮೇ 18:** ಮಾಜಿ ಪ್ರಧಾನಿ ಮತ್ತು ಜಾತ್ಯತೀತ ಜನತಾದಳ ಪಿತಾಮಹ ಎಚ್.ಡಿ. ದೇವೇಗೌಡರಿಗೆ ಪ್ರಧಾನಿ ನರೇಂದ್ರ ಮೋದಿ ಸೋಮವಾರ ಹುಟ್ಟುಹಬ್ಬದ ಶುಭಾಶಯ ತಿಳಿಸಿದ್ದಾರೆ.

ಅವರ ದಶಕಗಳ ಸೇವೆ ಮತ್ತು ಬದ್ಧತೆಯನ್ನು ಪ್ರಧಾನಿ ಶ್ಲಾಘಿಸಿದ್ದಾರೆ. ಸಾಮಾಜಿಕ ಜಾಲತಾಣದ ತಮ್ಮ ಖಾತೆಯಲ್ಲಿ ಹಾಕಿದ ಹೇಳಿಕೆಯಲ್ಲಿ ಮೋದಿ, "ಶ್ರೀ ಎಚ್.ಡಿ.ದೇವೇಗೌಡರಿಗೆ ಹುಟ್ಟುಹಬ್ಬದ ಶುಭಾಶಯಗಳು. ಅವರು ತಮ್ಮ ದೀರ್ಘ ಸಾರ್ವಜನಿಕ ಜೀವನದಲ್ಲಿ ನಮ್ಮ ರಾಷ್ಟ್ರಕ್ಕೆ ಅತ್ಯುತ್ತಮ ಕೊಡುಗೆ ನೀಡಿದ್ದಾರೆ. ನೀತಿ-ಸಂಬಂಧಿತ ವಿಷಯಗಳ ಬಗ್ಗೆ ಆಳವಾದ ತಿಳಿವಳಿಕೆ ಮತ್ತು ಅಂಚಿನಲ್ಲಿರುವವರಿಗೆ ಸೇವೆ ಸಲ್ಲಿಸುವ ಉತ್ಸಾಹಕ್ಕೆ ಅವರು ಹೆಸರುವಾಸಿಯಾಗಿದ್ದಾರೆ. ಅವರ ದೀರ್ಘ ಮತ್ತು ಆರೋಗ್ಯಕರ ಜೀವನಕ್ಕಾಗಿ ಪ್ರಾರ್ಥಿಸುತ್ತೇನೆ.

ಸೋಮವಾರ 93 ವರ್ಷ ತುಂಬಿದ ದೇವೇಗೌಡರು, ಜೂನ್ 1996 ರಿಂದ ಏಪ್ರಿಲ್ 1997 ರವರೆಗೆ ಭಾರತದ 11ನೇ ಪ್ರಧಾನಿಯಾಗಿ ಸೇವೆ ಸಲ್ಲಿಸಿದರು. ಕರ್ನಾಟಕದ ಪ್ರಮುಖ ನಾಯಕರಾಗಿದ್ದ ಅವರು 1950 ರ ದಶಕದಲ್ಲಿ ತಮ್ಮ ರಾಜಕೀಯ ಜೀವನವನ್ನು ಪ್ರಾರಂಭಿಸಿದರು ಮತ್ತು 1994 ರಲ್ಲಿ ಕರ್ನಾಟಕದ ಮುಖ್ಯಮಂತ್ರಿಯಾಗುವ ಮೊದಲು ವಿಧಾನಸಭೆ ಮತ್ತು ಪರಿಷತ್ತಿನ ಸದಸ್ಯರಾಗಿ ರಾಜ್ಯ ರಾಜಕೀಯದ ಮೂಲಕ ಏರಿದರು. ಕೃಷಿ, ನೀರಾವರಿ ಮತ್ತು ಗ್ರಾಮೀಣಾಭಿವೃದ್ಧಿಯತ್ತ ಗಮನಹರಿಸಿದ್ದಕ್ಕಾಗಿ ಹೆಸರುವಾಸಿಯಾಗಿದ್ದ ಅವರನ್ನು 1996ರಲ್ಲಿ ಯುನೈಟೆಡ್ ಫ್ರಂಟ್ ಸಮ್ಮಿಶ್ರ ಸರ್ಕಾರವನ್ನು ಮುನ್ನಡೆಸಲು ಅನಿರೀಕ್ಷಿತವಾಗಿ ಆಯ್ಕೆ ಮಾಡಲಾಯಿತು.

ಪ್ರಧಾನಿಯಾದ ನಂತರವೂ, ದೇವೇಗೌಡರು ರಾಷ್ಟ್ರೀಯ ರಾಜಕೀಯದಲ್ಲಿ ಸಕ್ರಿಯರಾಗಿದ್ದಾರೆ ಮತ್ತು ಪ್ರಸ್ತುತ ಕರ್ನಾಟಕದಿಂದ ರಾಜ್ಯಸಭಾ ಸಂಸದರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಅವರು ರಾಜ್ಯದಲ್ಲಿ ಪ್ರಮುಖ ಪ್ರಾದೇಶಿಕ ಪಕ್ಷವಾದ ಜೆಡಿಎಸ್ ಮುನ್ನಡೆಸುತ್ತಿದ್ದಾರೆ. ಪಕ್ಷಾತೀತ ನಾಯಕರು ಹಿರಿಯ ನಾಯಕನಿಗೆ ಅವರ ಹುಟ್ಟುಹಬ್ಬದಂದು ಶುಭಾಶಯಗಳನ್ನು ತಿಳಿಸಿದರು, ಸಮ್ಮಿಶ್ರ ಯುಗದ ರಾಜಕೀಯದಲ್ಲಿ ಅವರ ಪಾತ್ರ ಮತ್ತು ರೈತರ ಸಮಸ್ಯೆಗಳಿಗಾಗಿ ಅವರ ವಕಾಲತ್ತು ವಹಿಸಿದ್ದನ್ನು ನೆನಪಿಸಿಕೊಂಡರು.

### ಜನಹಿತಕ್ಕಾಗಿ ಹೋರಾಟ ಮುಂದುವರಿಕೆ: ಎಚ್.ಡಿ.ಡಿ. ಸಂಕಲ್ಪ

**ಮಾಜಿ ಪ್ರಧಾನಿಗೆ 94ನೇ ವರ್ಷದ ಸಂಭ್ರಮ**

**ಬೆಂಗಳೂರು, ಮೇ 18:** ಮಾಜಿ ಪ್ರಧಾನಿ, ಎಚ್.ಡಿ. ದೇವೇಗೌಡರಿಗೆ 94ನೇ ವರ್ಷದ ಹುಟ್ಟುಹಬ್ಬದ ಸಂಭ್ರಮ. ಬೆಂಗಳೂರಿನ ಜೆ.ಪಿ. ನಗರದಲ್ಲಿರುವ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪತ್ನಿ ಚೆನ್ನಮ್ಮ ಅವರೊಂದಿಗೆ ಪೂಜೆ ಸಲ್ಲಿಸುವುದರೊಂದಿಗೆ ಹುಟ್ಟುಹಬ್ಬವನ್ನು ಆಚರಿಸಿಕೊಂಡಿದ್ದಾರೆ. ಈ ವೇಳೆ ಕುಟುಂಬದ ಸದಸ್ಯರು, ಜೆಡಿಎಸ್ ಪಕ್ಷದ ಮುಖಂಡರು ಮತ್ತು ಹಿತೈಷಿಗಳು ಹಾಜರಿದ್ದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್. ಡಿ. ದೇವೇಗೌಡ, ವಯೋಸಹಜ ಆರೋಗ್ಯ ಸಮಸ್ಯೆಗಳಿದ್ದರೂ, ವ್ಹೀಲ್‌ಚೇರ್‌ನಲ್ಲೇ ಕುಳಿತು ಸಾರ್ವಜನಿಕರ ಹಿತಕ್ಕಾಗಿ ಹೋರಾಡುವುದನ್ನು ಮುಂದು ವರಿಸುವುದಾಗಿ ಜನ್ಮದಿನದಂದು ದೃಢ ಸಂಕಲ್ಪ ಮಾಡಿದ್ದೇನೆ. 93 ವರ್ಷ ಪೂರೈಸಿದ್ದೇನೆ ಎಂದು ಮನೆಯಲ್ಲಿ ಕುಳಿತುಕೊಳ್ಳುವುದಿಲ್ಲ. 68 ವರ್ಷಗಳ ರಾಜಕೀಯ ಜೀವನದುದ್ದಕ್ಕೂ ಹೋರಾಡಿದ್ದೇನೆ. ಜನರು ಅದನ್ನು ಎಷ್ಟು ಗುರುತಿಸುತ್ತಾರೆಂಬ ಬಗ್ಗೆ ಚಿಂತೆಯಿಲ್ಲ, ಆದರೆ ಜನರ ಹಿತಾಸಕ್ತಿಗಾಗಿ ಹೋರಾಡುವುದು ನನ್ನ ಮುಂದಿರುವ ವಿಷಯ, ನಾನು ನನ್ನ ಕೆಲಸವನ್ನು ಮಾಡುತ್ತೇನೆ ಎಂದರು.

### ಮೈತ್ರಿಯಲ್ಲಿ ಸಮಸ್ಯೆ ಉದ್ಭವಿಸಲ್ಲ

ಪ್ರಾದೇಶಿಕ ಪಕ್ಷವಾಗಿ ಜೆಡಿಎಸ್ ಎನ್‌ಡಿಎಯಲ್ಲಿ ಸಣ್ಣ ಮಿತ್ರಪಕ್ಷವಾಗಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಉತ್ತಮ ಸಂಬಂಧ ಹೊಂದಿರುವುದರಿಂದ 2028ರ ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಪಕ್ಷ ಬಿಜೆಪಿ ಜೊತೆಗಿನ ಮೈತ್ರಿಯಲ್ಲಿ ಯಾವುದೇ ಸಮಸ್ಯೆ ಇರುವುದಿಲ್ಲ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ದಕ್ಷಿಣ ಭಾರತದಲ್ಲಿ ಈಗ ಕೇರಳ, ಕರ್ನಾಟಕ ಮತ್ತು ತೆಲಂಗಾಣದಲ್ಲಿ ಕಾಂಗ್ರೆಸ್ ತನ್ನದೇ ಆದ ಸರ್ಕಾರಗಳನ್ನು ಹೊಂದಿದೆ. ಭವಿಷ್ಯದಲ್ಲಿ ಏನಾಗುತ್ತದೆ ಎಂದು ನೋಡೋಣ. ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಶಿಸ್ತಿನ ಸಿಪಾಯಿಗಳಂತೆ ಪ್ರಾಮಾಣಿಕತೆಯಿಂದ ಪಕ್ಷವನ್ನು ಬಲಪಡಿಸುವತ್ತ ಕೆಲಸ ಮಾಡಬೇಕು ಎಂದು ದೇವೇಗೌಡ ಕರೆ ನೀಡಿದರು.

### ಗಣ್ಯರ ಶುಭಾಶಯ

ಹಿರಿಯ ರಾಜಕಾರಣಿ ದೇವೇಗೌಡರಿಗೆ ಆಯುರಾರೋಗ್ಯ ಮತ್ತು ಮತ್ತಷ್ಟು ಕಾಲ ನಾಡಿನ ಜನರ ಸೇವೆ ಮಾಡುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭ ಕೋರಿದ್ದಾರೆ. ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ನಾಯಕ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್, ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವಾಸ್, ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್, ಕೇಂದ್ರ ಸಚಿವರಾದ ರಾಜನಾಥಸಿಂಗ್, ಪ್ರಹ್ಲಾದ್ ಜೋಶಿ, ಎಚ್.ಡಿ. ಕುಮಾರಸ್ವಾಮಿ, ಉಪೇಂದ್ರ ಯಾದವ್, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿ ವಿವಿಧ ಪಕ್ಷಗಳ ಮುಖಂಡರು, ಸಚಿವರು, ಶಾಸಕರು, ಸಂಸದರು ಮಾಜಿ ಪ್ರಧಾನಿ ದೇವೇಗೌಡರಿಗೆ ಜನ್ಮದಿನದ ಶುಭ ಕೋರಿದ್ದಾರೆ.

# ಗೃಹಲಕ್ಷ್ಮಿ ಯೋಜನೆಯ 30ನೇ ಕಂತು ಬಿಡುಗಡೆ



- 3 ವರ್ಷದಲ್ಲಿ 1,24,10,668 ಮಹಿಳೆಯರಿಗೆ ತಲಾ 60,000 ರೂ. ಪಾವತಿ
- ನುಡಿದಂತೆ ನಡೆಯುತ್ತಿರುವ ಸಿಎಂ, ಡಿಸಿಎಂ
- ಫಲಾನುಭವಿಗಳ ಪರವಾಗಿ ಸರ್ಕಾರಕ್ಕೆ ದಿನೇಶ್ ಗೂಳಿಗೌಡ ಧನ್ಯವಾದ

**ಬೆಂಗಳೂರು, ಮೇ 18:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮಿ ಯೋಜನೆಯ 30ನೇ ಕಂತಿನ ಹಣವನ್ನು ಬಿಡುಗಡೆ ಮಾಡಲಾಗಿದೆ. ಈ ಮೂಲಕ ರಾಜ್ಯದ 1,24,10,668 ಮಹಿಳೆಯರಿಗೆ ತಲಾ 60,000 ರೂ. ಹಣವನ್ನು ನೇರವಾಗಿ ಬ್ಯಾಂಕ್ ಖಾತೆಗೆ ಹಾಕುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ತಿಳಿಸಿದ್ದಾರೆ.

ಚುನಾವಣೆಗೆ ಮೊದಲು ನೀಡಿದ್ದ ಭರವಸೆಯಂತೆ ಮನೆಯ ಯಜಮಾನಿಯರಿಗೆ ಪ್ರತಿ ತಿಂಗಳು 2000 ರೂ.ಗಳಂತೆ ಕಳೆದ ಮೂರು ವರ್ಷದಲ್ಲಿ 60,000 ರೂ.ಗಳನ್ನು ಯಾವುದೇ ಭ್ರಷ್ಟಾಚಾರ, ಕಮೀಷನ್ ಇಲ್ಲದೇ ಡಿಬಿಟಿ ಮೂಲಕ ನೇರವಾಗಿ ಫಲಾನುಭವಿಗಳಿಗೆ ತಲುಪಿಸುತ್ತಿದೆ. ರಾಜ್ಯ ಗೃಹಲಕ್ಷ್ಮಿಯರ ಪರವಾಗಿ ಸರ್ಕಾರಕ್ಕೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಗೃಹಲಕ್ಷ್ಮಿ ಹಣ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಹೆಚ್ಚಿಸಲು ಸಹಕಾರಿಯಾಗಿದೆ. ಕುಟುಂಬದ ದಿನನಿತ್ಯದ ಖರ್ಚು, ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಆಹಾರ ವೆಚ್ಚಗಳಿಗೆ ನೆರವಾಗುತ್ತಿದೆ. ಗ್ರಾಮೀಣ ಹಾಗೂ ಬಡ ಕುಟುಂಬಗಳ ಜೀವನಮಟ್ಟ ಸುಧಾರಣೆಗೆ ಸಹಾಯವಾಗುತ್ತಿದೆ ಎಂದು ಹೇಳಿಕೆ ನೀಡಿದ್ದಾರೆ.

# ಆನೆಗಳ ಕಾದಾಟದ ನಡುವೆ ಸಿಲುಕಿ ಮಹಿಳೆ ದುರ್ಮರಣ

## ಕೊಡಗಿನ ದುಬಾರೆ ಸಾಕಾನೆ ಶಿಬಿರದಲ್ಲಿ ಅವಘಡ: ಚೆನ್ನೈ ಮೂಲದ ಜಿನ್ನು ಸಾವು



**ಕೊಡಗು, ಮೇ 18:** ಜಿಲ್ಲೆಯ ದುಬಾರೆ ಸಾಕಾನೆ ಶಿಬಿರಕ್ಕೆ ಬಂದಿದ್ದ ಮಹಿಳೆ, ಎರಡು ಆನೆಗಳ ನಡುವೆ ನಡೆದ ದಿಢೀರ್ ಕಾಳಗಕ್ಕೆ ಸಿಲುಕಿ ದಾರುಣವಾಗಿ ಮೃತಪಟ್ಟಿದ್ದಾರೆ. ತಮಿಳುನಾಡಿನ ಚೆನ್ನೈ ಮೂಲದ ತುಳಸಿ (ಜಿನ್ನು) (33) ಮೃತ ದುರ್ದೈವಿ.

ಸೋಮವಾರ ಮಧ್ಯಾಹ್ನ ಸುಮಾರು 12 ಗಂಟೆಯ ವೇಳೆಗೆ ಶಿಬಿರದಲ್ಲಿ ಎಂದಿನಂತೆ ಆನೆಗಳಿಗೆ ನದಿಯಲ್ಲಿ ಸ್ನಾನ ಮಾಡಿಸಸಲು ಆನೆಗಳಾದ 'ಮಾರ್ತಾಂಡ' ಮತ್ತು 'ಕಂಜನ್' ಎಂಬ ಎರಡು ಸಾಕಾನೆಗಳನ್ನು ಮಾವುತರು ನದಿಗೆ ಕರೆತಂದಿದ್ದರು. ಮಾವುತ ಗೌಸ್ ಅವರು ಮಾರ್ತಾಂಡ ಆನೆಯನ್ನು ನೀರಿಗೆ ಇಳಿಸುವ ಧಾವಂತದಲ್ಲಿ, ಆನೆ ಸ್ವಲ್ಪ ವೇಗವಾಗಿ ಪಕ್ಕದಲ್ಲೇ ಇದ್ದ ಕಂಜನ್ ಆನೆಗೆ ತಾಗಿದೆ. ಮಾರ್ತಾಂಡ ಆನೆ ತನ್ನ ಮೈಗೆ ತಾಗುತ್ತಿದ್ದಂತೆ ಕೆರಳಿದ ಕಂಜನ್ ಆನೆ ತೀವ್ರ ಆಕ್ರೋಶಗೊಂಡು ಎದುರಾಳಿ ಆನೆಯ ಮೇಲೆ ಮುಗಿಬಿದ್ದಿದೆ. ನದಿಯ ದಡದಲ್ಲೇ ಎರಡು ದೈತ್ಯ ಆನೆಗಳು ಪರಸ್ಪರ ಕಾದಾಡಲು ಆರಂಭಿಸುತ್ತಿದ್ದಂತೆ ಅಲ್ಲಿದ್ದ ಪ್ರವಾಸಿಗರು ಪ್ರಾಣಭಯದಿಂದ ದಿಕ್ಕಾಪಾಲಾಗಿ ಓಡಿದ್ದಾರೆ. ಈ ಗದ್ದಲದ ನಡುವೆ ಸಿಲುಕಿದ ಪ್ರವಾಸಿ ಮಹಿಳೆಗೆ ಆನೆಗಳು ಬಲವಾಗಿ ಡಿಕ್ಕಿ ಹೊಡೆದಿದ್ದು, ಕಾಲಡಿ ಸಿಲುಕಿ ಗಂಭೀರ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮಾವುತರಾದ ಗೌಸ್ ಮತ್ತು ವಿಜಯ್ ಅವರು ಆನೆಗಳನ್ನು ನಿಯಂತ್ರಿಸಲು ತಕ್ಷಣವೇ ಶ್ರಮಿಸಿದರೂ ಅಷ್ಟರಲ್ಲಾಗಲೇ ಅನಾಹುತ ಸಂಭವಿಸಿತ್ತು. ದುರ್ಘಟನೆಯಿಂದಾಗಿ ಸ್ಥಳದಲ್ಲಿ ನೆರೆದಿದ್ದ ಪ್ರವಾಸಿಗರಲ್ಲಿ ಆಕ್ರಂದನ ಮುಗಿಲು ಮುಟ್ಟಿತ್ತು. ಮೃತದೇಹವನ್ನು ಕೂಡಲೇ ಕುಶಾಲನಗರದ ಸರ್ಕಾರಿ ಆಸ್ಪತ್ರೆಗೆ ಕೊಂಡೊಯ್ಯಲಾಗಿದೆ. ನಿತ್ಯವೂ ಸಾವಿರಾರು ಜನ ಭೇಟಿ ನೀಡುವ ದುಬಾರೆ ಶಿಬಿರದಲ್ಲಿ, ಆನೆಗಳನ್ನು ಹತ್ತಿರದಿಂದ ನೋಡುವ ಪ್ರವಾಸಿಗರಿಗೆ ಸೂಕ್ತ ರಕ್ಷಣೆ ಇದೆಯೇ ಎಂಬ ಆತಂಕ ಈಗ ಮೂಡಿದೆ. ಇಂತಹ ಸೂಕ್ಷ್ಮ ಸಂದರ್ಭಗಳಲ್ಲಿ ಅರಣ್ಯ ಇಲಾಖೆ ಕಟ್ಟುನಿಟ್ಟಿನ ಸುರಕ್ಷತಾ ಅಂತರ ಕಾಯ್ದುಕೊಳ್ಳದಿರುವುದೇ ಈ ದುರಂತಕ್ಕೆ ಕಾರಣ ಎಂಬ ಆರೋಪ ಕೇಳಿಬಂದಿದ್ದು, ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ತನಿಖೆ ಆರಂಭಿಸಿದ್ದಾರೆ.

# ಆನೆಗಳ ಕಾದಾಟದ ನಡುವೆ ಮಹಿಳೆ ಸಾವು: ಖಂಡ್ರೆ ಕಂಬನಿ

## ಸಚಿವ ಈಶ್ವರ ಖಂಡ್ರೆ ಸಂತಾಪ ವನ್ಯಜೀವಿಗಳಿಂದ ನಿರ್ದಿಷ್ಟ ಅಂತರ ಕಾಯ್ದುಕೊಳ್ಳಲು ಆದೇಶ



**ಬೆಂಗಳೂರು, ಮೇ 18:** ಕೊಡಗು ಜಿಲ್ಲೆ ದುಬಾರೆ ಶಿಬಿರದಲ್ಲಿ ಎರಡು ಸಾಕಾನೆಗಳ ಕಾದಾಟದ ವೇಳೆ ಅನಿರೀಕ್ಷಿತವಾಗಿ ಆಯತಪ್ಪಿ ಬಿದ್ದ ಆನೆಯ ಕೆಳಗೆ ಸಿಲುಕಿ ಮಹಿಳೆ ಮೃತಪಟ್ಟಿದ್ದು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸಂತಾಪ ಸೂಚಿಸಿದ್ದಾರೆ.

ಇದು ಅತ್ಯಂತ ಆಘಾತಕರ ಘಟನೆ, ಆನೆಗಳನ್ನು ಸ್ನಾನ ಮಾಡಿಸುವಾಗ ನದಿಯ ಬಳಿ ನಿಂತು ನೋಡುತ್ತಿದ್ದ ತಮಿಳುನಾಡಿನ ಪ್ರವಾಸಿ ಮಹಿಳೆ ತುಳಸಿ (33) ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದು, ಇದು ಅತ್ಯಂತ ನೋವಿನ ಸಂಗತಿ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ, ಈ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ದೇವರು ನೀಡಲಿ ಎಂದು ಸಚಿವರು ಪ್ರಾರ್ಥಿಸಿದ್ದಾರೆ.

ಸಾಕಾನೆಗಳಾದ ಕಂಜನ್ ಮತ್ತು ಮಾರ್ತಾಂಡ ಆನೆಗಳು ಸ್ನಾನ ಮಾಡಿಸುತ್ತಿದ್ದ ವೇಳೆ ಪರಸ್ಪರ ಕಾದಾಟ ನಡೆಸಿದ್ದು, ಮಾವುತರು ನಿಯಂತ್ರಿಸುತ್ತಿದ್ದರೂ ಮುನ್ನುಗ್ಗಿದ ಕಂಜನ್ ಆನೆ, ಮಾರ್ತಾಂಡ ಆನೆಗೆ ಗುದ್ದಿದ್ದು, ಮಾರ್ತಾಂಡ ಆಯತಪ್ಪಿ ಕೆಳಗೆ ಬಿದ್ದಾಗ, ಈ ಮಹಿಳೆ ಆನೆಯ ಕೆಳಗೆ ಸಿಲುಕಿ ಮೃತಪಟ್ಟಿದ್ದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಇದು ಯಾರೂ ಊಹಿಸದಂತಹ ಘಟನೆಯಾಗಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಸಿ ಇಂತಹ ಅಚಾತುರ್ಯಗಳು ಆಗದ ರೀತಿಯಲ್ಲಿ ಕ್ರಮ ವಹಿಸಲು ಸೂಚಿಸಿರುವುದಾಗಿ ತಿಳಿಸಿದ್ದಾರೆ.

ರಾಜ್ಯದಲ್ಲಿರುವ ಎಲ್ಲ ಸಾಕಾನೆ ಶಿಬಿರಗಳಲ್ಲಿ ಪ್ರವಾಸಿಗರ ಸುರಕ್ಷತೆಗಾಗಿ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್.ಓ.ಪಿ.) ರೂಪಿಸುವಂತೆ ಮತ್ತು 100 ಅಡಿ ದೂರದಲ್ಲಿ ನಿಂತು ಆನೆಗಳ ಸ್ನಾನ ವೀಕ್ಷಿಸಲು ಅವಕಾಶ ನೀಡುವಂತೆ ಸಚಿವ ಈಶ್ವರ ಬಿ ಖಂಡ್ರೆ ಆದೇಶ ನೀಡಿದ್ದಾರೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಈ ಸಂಬಂಧ ಸೂಚನೆ ನೀಡಿರುವ ಅವರು, ದುಬಾರೆ ಸಾಕಾನೆ ಶಿಬಿರದಲ್ಲಿ ಎರಡು ಆನೆಗಳ ನಡುವೆ ನಡೆದ ಕಾದಾಟದ ವೇಳೆ ಮಹಿಳೆ ಮೃತಪಟ್ಟಿರುವ ಹಿನ್ನೆಲೆಯಲ್ಲಿ ಪ್ರವಾಸಿಗರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯ ಪ್ರತಿಪಾದಿಸಿದ್ದಾರೆ.

ಪರಿಸರ ಪ್ರವಾಸೋದ್ಯಮದ ಚಾರಣಪಥಗಳಲ್ಲಿ ಚಾರಣಿಗರ/ ಪ್ರವಾಸಿಗರ ಸುರಕ್ಷತೆ ದೃಷ್ಟಿಯಿಂದ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್.ಓ.ಪಿ.) ರೂಪಿಸಲಾಗಿದ್ದು, ಈ ಎಸ್.ಓ.ಪಿ. ಜಾರಿ ಖಚಿತಪಡಿಸಿ ಕೊಳ್ಳುವವರೆಗೆ ಚಾರಣಪಥಗಳ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ಈಗಾಗಲೇ ಸೂಚಿಸಲಾಗಿದೆ. ಅದೇ ಪ್ರಕಾರವಾಗಿ ಸಾಕಾನೆ ಶಿಬಿರಗಳಿಗೆ ಬರುವ ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ಎಸ್.ಓ.ಪಿ. ರೂಪಿಸಲು ನಿರ್ದೇಶನ ನೀಡಿದ್ದಾರೆ.

ರಾಜ್ಯದಲ್ಲಿರುವ ಎಲ್ಲ ಸಾಕಾನೆ ಶಿಬಿರದಲ್ಲಿ ನಾಳೆಯಿಂದಲೇ ಪ್ರವಾಸಿಗರು ಆನೆಯ ಬಳಿ ಹೋಗದಂತೆ, ಕನಿಷ್ಠ 100 ಅಡಿ ದೂರದಲ್ಲಿ ನಿಂತು ಆನೆ ಮೈತೊಳೆಯುವುದನ್ನು ವೀಕ್ಷಿಸುವಂತೆ ಮತ್ತು ಯಾವುದೇ ಕಾರಣಕ್ಕೂ ಆನೆಗಳ ಬಳಿ ಹೋಗಿ ಸೆಲ್ಫಿ, ಫೋಟೋ ತೆಗೆಸಿಕೊಳ್ಳಲು, ಮೈತೊಳೆಯಲು ಅವಕಾಶ ನೀಡದಂತೆ ಮತ್ತು ಬಾಳೆಹಣ್ಣು, ಬೆಲ್ಲ, ಕಬ್ಬು ಇತ್ಯಾದಿ ಯಾವುದೇ ಆಹಾರವನ್ನು ಪ್ರವಾಸಿಗರ ಕೈಯಿಂದ ತಿನ್ನಿಸದಂತೆ ಆದೇಶ ಹೊರಡಿಸಲೂ ಸೂಚಿಸಿದ್ದಾರೆ.

# ಭಾಷೆಯು ಕಲಿಕಾ ಆಸಕ್ತರ ಕಲ್ಪನಾಲೋಕವನ್ನು ವಿಸ್ತರಿಸಬೇಕು ದೆಹಲಿ ಕರ್ನಾಟಕ ಸಂಘದಲ್ಲಿ ಅರವಿಂದ ಚೊಕ್ಕಾಡಿ



**ನವದೆಹಲಿ, ಮೇ 18:** ದೆಹಲಿ ಕರ್ನಾಟಕ ಸಂಘವು ಸೋಮವಾರ ಶಿಕ್ಷಣ-ಭಾಷೆ-ಸಂಸ್ಕೃತಿ ವಿಷಯದ ಬಗ್ಗೆ ಸಂವಾದ ಕಾರ್ಯಕ್ರಮವನ್ನು ಸಂಘದ ವಿಚಾರ ಸಂಕಿರಣ ಭವನದಲ್ಲಿ ಆಯೋಜಿಸಲಾಗಿತ್ತು. ಸಂಘದ ಉಪಾಧ್ಯಕ್ಷ ವಸಂತ ಶೆಟ್ಟಿ ಬೆಳ್ಳಾರೆ ಸಂವಾದ ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಖ್ಯಾತ ಲೇಖಕ, ಚಿಂತಕ, ಶಿಕ್ಷಣ ತಜ್ಞ ಅರವಿಂದ ಚೊಕ್ಕಾಡಿಯವರನ್ನು ಸ್ವಾಗತಿಸಿದರು.

ಶಿಕ್ಷಣ-ಭಾಷೆ-ಸಂಸ್ಕೃತಿ ಪರಿಕಲ್ಪನೆಗಳ ಬಗ್ಗೆ ಸೊಗಸಾಗಿ ವಿಚಾರ ಮಂಡನೆಯನ್ನು ಮಾಡಿದ ಅರವಿಂದ ಚೊಕ್ಕಾಡಿಯವರು ವಿಚಾರದ ಕುರಿತು ಮೊದಲು ತಾತ್ವಿಕವಾಗಿ ಮಾತನಾಡಿ, ನಾಗರಿಕತೆಯ ವಿಕಾಸದಲ್ಲಿ ಇವುಗಳ ಮಹತ್ವದ ಪಾತ್ರ ಮತ್ತು ಸಮಕಾಲೀನ ಬದುಕಿನಲ್ಲಿ ಇರುವ ಪ್ರಸ್ತುತತೆಯ ಬಗ್ಗೆ ಸವಿವರವಾಗಿ ಮಾತನಾಡಿದರು. ಸಂಸ್ಕೃತಿಯನ್ನು ಜೀವನ ದೃಷ್ಟಿಕೋನವೆಂದು ಕರೆದ ಚೊಕ್ಕಾಡಿಯವರು, ಭಾಷೆಯು ಕಲಿಕಾ ಆಸಕ್ತರ ಕಲ್ಪನಾಲೋಕವನ್ನು ವಿಸ್ತರಿಸಬೇಕು ಮತ್ತು ಕಲಿಕೆಯ ಕುತೂಹಲವನ್ನೂ ಅವರಲ್ಲಿ ಹೆಚ್ಚಿಸಬೇಕು ಎಂದು ಅಭಿಪ್ರಾಯಪಟ್ಟರು. ಇವುಗಳಲ್ಲದೆ ಭಾಷಾ ಜಾಯಮಾನ ಮತ್ತು ಸಂಸ್ಕೃತಿಯ ಸಾಂಕೇತಿಕ ಮೌಲ್ಯಗಳ ಬಗ್ಗೆಯೂ ಚೊಕ್ಕಾಡಿಯವರು ಪರಿಣಾಮಕಾರಿಯಾಗಿ ತಮ್ಮ ವಿಚಾರಗಳನ್ನು ಮಂಡಿಸಿದರು.

ಗಣ್ಯರ ಉಪನ್ಯಾಸದ ನಂತರ ನೆರೆದಿದ್ದ ಸಭಿಕರಿಂದ ಪ್ರಶ್ನೋತ್ತರ ಕಾರ್ಯಕ್ರಮವನ್ನೂ ಕೂಡ ಆಯೋಜಿಸಲಾಗಿದ್ದು ಆರೋಗ್ಯಕರ ಚರ್ಚೆಗಳು ನಡೆದವು. ಅರವಿಂದ ಚೊಕ್ಕಾಡಿಯವರನ್ನು ಸಂಘದ ವತಿಯಿಂದ ಗೌರವಪೂರ್ವಕವಾಗಿ ಶಾಲು-ಸ್ಮರಣಿಕೆ ನೀಡಿ ಸನ್ಮಾನಿಸಿದ ನಂತರ ಅಧ್ಯಕ್ಷೀಯ ಭಾಷಣವನ್ನು ಮಾಡಿದ ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ರೇಣುಕುಮಾರ್ ಅವರು ಶಿಕ್ಷಣ-ಭಾಷೆ-ಸಂಸ್ಕೃತಿಗಳಂತಹ ಸಾಮಾಜಿಕ ಪರಿಕಲ್ಪನೆಗಳಿಗೆ ಅರವಿಂದ ಚೊಕ್ಕಾಡಿಯವರು ಹೊಸ ದೃಷ್ಟಿಕೋನವನ್ನು ನೀಡಿ ಸರಳ ಭಾಷೆಯಲ್ಲಿ, ಮನೋಜ್ಞವಾಗಿ ಪ್ರಸ್ತುತಪಡಿಸಿದ್ದಾರೆ ಎಂದು ಪ್ರಶಂಸಿಸಿದರು. ಸಂಘದ ಕಾರ್ಯದರ್ಶಿ ರಾಧಾಕೃಷ್ಣ ಅವರ ಧನ್ಯವಾದ ಸಮರ್ಪಣೆಯೊಂದಿಗೆ ಕಾರ್ಯಕ್ರಮವು ವಿಧ್ಯುಕ್ತವಾಗಿ ಮುಕ್ತಾಯವಾಯಿತು.

# ಆನೇಕಲ್‌ನಲ್ಲಿ ಅತಿದೊಡ್ಡ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ: ಮೇ 23ಕ್ಕೆ ಸಿಎಂ ಶಂಕುಸ್ಥಾಪನೆ

## 80 ಸಾವಿರ ಪ್ರೇಕ್ಷಕರ ಸಾಮರ್ಥ್ಯ, 943 ಕೋಟಿ ರೂ. ಅಂದಾಜು, ದೇಶದ 2ನೇ ದೊಡ್ಡ ಕ್ರೀಡಾಂಗಣ ಎಂಬ ಹೆಗ್ಗಳಿಕೆ



**ಬೆಂಗಳೂರು, ಮೇ 18:** ನಗರದ ಹೊರವಲಯದ ಆನೇಕಲ್‌ನಲ್ಲಿ ತಲೆ ಎತ್ತಲಿರುವ ನೂತನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೇ 23ರಂದು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. 80,000 ಆಸನಗಳ ಸಾಮರ್ಥ್ಯ ಹೊಂದಿರುವ ಈ ಬೃಹತ್ ಕ್ರೀಡಾಂಗಣವು, ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂ ನಂತರ ಭಾರತದ ಎರಡನೇ ಅತಿದೊಡ್ಡ ಕ್ರಿಕೆಟ್ ಕ್ರೀಡಾಂಗಣ ಎಂಬ ಹೆಗ್ಗಳಿಕೆಗೆ ಪಾತ್ರವಾಗಲಿದೆ. ಅಂದಾಜು 943 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಲಿರುವ ಈ ಯೋಜನೆಯು ಮುಂದಿನ ಮೂರು ವರ್ಷಗಳಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಒಂದೆಡೆ ಸಿಎಂ ಸಿದ್ದರಾಮಯ್ಯ ಅವರು ಭೂಮಿಪೂಜೆ ನೆರವೇರಿಸಿದರೆ, ಅದೇ ದಿನ ಕ್ರೀಡಾಂಗಣ ನಿರ್ಮಾಣದ ಜಾಗತಿಕ ಟೆಂಡರ್ ಪ್ರಕ್ರಿಯೆಯೂ ಮುಕ್ತಾಯಗೊಳ್ಳಲಿದೆ.ಹೊಸ ಕ್ರೀಡಾಂಗಣ ನಿರ್ಮಾಣಕ್ಕೆ ಪ್ರಮುಖ ಕಾರಣವೆಂದರೆ, ಕಳೆದ ವರ್ಷ ಜೂನ್ 2025ರಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಭೀಕರ ಕಾಲ್ತುಳಿತ. ಆ ದುರಂತದಲ್ಲಿ 11 ಮಂದಿ ಪ್ರಾಣ ಕಳೆದುಕೊಂಡಿದ್ದರು. ನಗರದ ಹೃದಯಭಾಗದಲ್ಲಿರುವ ಪ್ರಸ್ತುತ ಚಿನ್ನಸ್ವಾಮಿ ಕ್ರೀಡಾಂಗಣವು ಕೇವಲ 32,000 ಆಸನ ಸಾಮರ್ಥ್ಯವನ್ನು ಹೊಂದಿದ್ದು, ಹೈಪ್ರೊಫೈಲ್ ಅಂತಾರಾಷ್ಟ್ರೀಯ ಪಂದ್ಯಗಳು ಹಾಗೂ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಪಂದ್ಯಗಳಿಗೆ ಇದು ಸಾಕಾಗುತ್ತಿಲ್ಲ ಎಂಬ ಕೂಗು ಬಹಳ ದಿನಗಳಿಂದ ಕೇಳಿಬರುತ್ತಿತ್ತು. ಈ ಎಲ್ಲಾ ಕಾರಣಗಳಿಂದಾಗಿ ಹೊಸ ಕ್ರೀಡಾಂಗಣದ ಅನಿವಾರ್ಯತೆ ಸೃಷ್ಟಿಯಾಗಿತ್ತು.

ತಮಿಳುನಾಡು ಗಡಿಗೆ ಹೊಂದಿಕೊಂಡಿರುವ ಆನೇಕಲ್‌ನ ಸೂರ್ಯನಗರ 4ನೇ ಹಂತದಲ್ಲಿ ಕರ್ನಾಟಕ ಗೃಹ ಮಂಡಳಿಗೆ ಸೇರಿದ 75 ಎಕರೆ ವಿಶಾಲವಾದ ಜಾಗದಲ್ಲಿ ಈ ಕ್ರೀಡಾಂಗಣ ನಿರ್ಮಾಣವಾಗಲಿದೆ. ಕಳೆದ ವರ್ಷ ಅಕ್ಟೋಬರ್‌ನಲ್ಲಿಯೇ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣವನ್ನು ಒಳಗೊಂಡ ಬೃಹತ್ ಕ್ರೀಡಾ ಸಂಕೀರ್ಣ ನಿರ್ಮಾಣಕ್ಕೆ ಸರ್ಕಾರ ಅನುಮೋದನೆ ನೀಡಿತ್ತು.ಈ ಕುರಿತು ಮಾಹಿತಿ ನೀಡಿರುವ ಕೆಎಚ್‌ಬಿ ಆಯುಕ್ತ ದಯಾನಂದ ಕೆ.ಎ., "ಮೊದಲ ಹಂತದಲ್ಲಿ ಕ್ರಿಕೆಟ್ ಕ್ರೀಡಾಂಗಣವನ್ನು ನಿರ್ಮಾಣ ಮಾಡಲಾಗುವುದು. ವಿನ್ಯಾಸ, ಎಂಜಿನಿಯರಿಂಗ್, ಖರೀದಿ ಮತ್ತು ಕ್ರೀಡಾಂಗಣದ ನಿರ್ಮಾಣ ಹಾಗೂ ಸಂಬಂಧಿತ ಅಭಿವೃದ್ಧಿ ಕಾಮಗಾರಿಗಳಿಗಾಗಿ ಟೆಂಡರ್ ಆಹ್ವಾನಿಸಲಾಗಿದೆ" ಎಂದು ಸ್ಪಷ್ಟಪಡಿಸಿದ್ದಾರೆ.ಒಂದೆಡೆ ಕ್ರೀಡಾಂಗಣ ನಿರ್ಮಾಣದ ಸಿದ್ಧತೆ ನಡೆಯುತ್ತಿದ್ದರೆ, ಮತ್ತೊಂದೆಡೆ ಇದರ ಸ್ಥಳದ ಆಯ್ಕೆ ಬಗ್ಗೆ ನಗರ ಯೋಜಕರು ಮತ್ತು ಉದ್ಯಮ ರಂಗದ ಗಣ್ಯರು ತೀವ್ರ ಟೀಕೆ ವ್ಯಕ್ತಪಡಿಸಿದ್ದಾರೆ.

### ಕ್ರೀಡಾಂಗಣ ನಿರ್ಮಾಣಕ್ಕೂ ಮುನ್ನ ಮೂಲಸೌಕರ್ಯ ಕಲ್ಪಿಸಿ

ಆನೇಕಲ್ ನಗರದ ದಕ್ಷಿಣದ ತುದಿಯಲ್ಲಿದ್ದು, 80,000 ಪ್ರೇಕ್ಷಕರು ಒಮ್ಮೆಲೆ ಸೇರಿದರೆ ಅದನ್ನು ನಿಭಾಯಿಸುವಂತಹ ಕನಿಷ್ಠ ಮೂಲಸೌಕರ್ಯ ಅಲ್ಲಿಲ್ಲ ಎಂಬುದು ವಿಮರ್ಶಕರ ವಾದವಾಗಿದೆ. ಬಯೋಕಾನ್ ಅಧ್ಯಕ್ಷೆ ಕಿರಣ್ ಮಜುಂದಾರ್-ಶಾ ಅವರು ಏಪ್ರಿಲ್ 11 ರಂದು ಎಕ್ಸ್ (ಟ್ವಿಟರ್) ಖಾತೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಟ್ಯಾಗ್ ಮಾಡಿ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. "ಉತ್ತಮ ರಸ್ತೆ ಮತ್ತು ಮೆಟ್ರೋ ಸಂಪರ್ಕವಿಲ್ಲದೆ ಕ್ರೀಡಾಂಗಣ ನಿರ್ಮಿಸಿದರೆ, ಅದು ಬಿಳಿ ಆನೆಯಾಗಲಿದೆ. ಮೆಟ್ರೋ ಆನೇಕಲ್‌ಗಿಂತ ಬಹಳ ಹಿಂದೆಯೇ ಅಂತ್ಯಗೊಳ್ಳುತ್ತದೆ. ಅಲ್ಲಿನ ರಸ್ತೆ ಮೂಲಸೌಕರ್ಯ ತೀರಾ ಪ್ರಾಚೀನವಾಗಿದೆ. ಆದ್ದರಿಂದ ದಯವಿಟ್ಟು ಕ್ರೀಡಾಂಗಣ ನಿರ್ಮಿಸುವ ಮೊದಲು ಸಂಪರ್ಕ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿ" ಎಂದು ಅವರು ಆಗ್ರಹಿಸಿದ್ದಾರೆ.ಈ ಹೊಸ ಕ್ರೀಡಾಂಗಣವು ಕ್ರೀಡಾಭಿಮಾನಿಗಳಲ್ಲಿ ಉತ್ಸಾಹ ಮೂಡಿಸಿದರೂ, ಸಾರಿಗೆ ಮತ್ತು ಮೂಲಸೌಕರ್ಯದ ಕೊರತೆಯ ಸವಾಲುಗಳನ್ನು ಸರ್ಕಾರ ಹೇಗೆ ನಿಭಾಯಿಸಲಿದೆ ಎಂಬುದನ್ನು ಕಾದು ನೋಡಬೇಕಿದೆ

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 19 2026, ಮಂಗಳವಾರ

## ಒಳಪುಟಗಳಲ್ಲಿ

ಸ್ಮೈಲಿಂಗ್ ಬುದ್ಧನಿಗೆ 52 ವರ್ಷ ಇಂದಿರಾಗಾಂಧಿ ನಾಯಕತ್ವ ಶ್ಲಾಘಿಸಿದ ಮಲ್ಲಿಕಾರ್ಜುನ ಖರ್ಗೆ - ಪು.4

ದೇಶದ ಆರ್ಥಿಕ ವ್ಯವಸ್ಥೆ ಹಾಳಾಗಿದ್ದರೆ ಪ್ರಧಾನಿಯೇ ಕಾರಣ - ದೇಶದ ಜನರ ಕ್ಷಮೆಕೇಳಲಿ: ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್ ಆಗ್ರಹ - ಪು.5

ಮೋದಿ ಅಕ್ಕಿಗೆ ಸಿದ್ದರಾಮಯ್ಯನವರ ಚೀಲ: ಕಾಂಗ್ರೆಸ್‌ನಿಂದ ಸುಳ್ಳು ಪ್ರಚಾರ - ಪು.6

# ಭಾರತ–ನಾರ್ವೇ ಹಸಿರು ವ್ಯೂಹಾತ್ಮಕ ಪಾಲುದಾರಿಕೆ ಅನಾವರಣ

## ಇಂಧನ, ಆರ್ಕ್ಟಿಕ್ ಮತ್ತು ತಂತ್ರಜ್ಞಾನದಲ್ಲಿ ಸಂಬಂಧ ಬಲಪಡಿಸಲು ನರೇಂದ್ರ ಮೋದಿ, ಜೊನಾಸ್ ಗಹರ್ ಸ್ಟೋರ್ ಪಣ

**ನವದೆಹಲಿ, ಮೇ 18: ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ನಾರ್ವೇ ಪ್ರಧಾನಿ ಜೊನಾಸ್ ಗಹರ್ ಸ್ಟೋರ್ ಅವರೊಂದಿಗೆ ವ್ಯಾಪಕ ಚರ್ಚೆ ನಡೆಸಿದರು. ಈ ವೇಳೆ ಉಭಯ ನಾಯಕರು ಸ್ವಚ್ಛ ಇಂಧನ, ಕಡಲ ಭದ್ರತೆ, ಹವಾಮಾನ ಸ್ಥಿತಿಸ್ಥಾಪಕತ್ವ, ಆರ್ಕ್ಟಿಕ್ ಸಂಶೋಧನೆ, ತಂತ್ರಜ್ಞಾನ ಮತ್ತು ಜಾಗತಿಕ ಅಭಿವೃದ್ಧಿಯಲ್ಲಿ ಸಹಕಾರವನ್ನು ಆಳವಾಗಿಸುವ ಉದ್ದೇಶದಿಂದ ಮಹತ್ವಾಕಾಂಕ್ಷೆಯ ಹಸಿರು ವ್ಯೂಹಾತ್ಮಕ ಪಾಲುದಾರಿಕೆಯನ್ನು ಅನಾವರಣಗೊಳಿಸಿದರು.**


ಓಸ್ಲೋದಲ್ಲಿ ನಡೆದ ಸಭೆಯ ನಂತರ ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಮೋದಿ, ಜಾಗತಿಕ ಅನಿಶ್ಚಿತ ಪರಿಸ್ಥಿತಿ ಮತ್ತು ಸಂಘರ್ಷಗಳು ಹೆಚ್ಚುತ್ತಿರುವ ಸಮಯದಲ್ಲಿ ಭಾರತ ಮತ್ತು ನಾರ್ವೇ ದ್ವಿಪಕ್ಷೀಯ ಬಾಂಧವ್ಯದಲ್ಲಿ "ಹೊಸ ಸುವರ್ಣ ಯುಗ"ಕ್ಕೆ ಪ್ರವೇಶಿಸುತ್ತಿವೆ ಎಂದು ಹೇಳಿದರು.

ಕಳೆದ ವರ್ಷ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ ಸಂದರ್ಭದಲ್ಲಿ ಭಯೋತ್ಪಾದನೆಯ ವಿರುದ್ಧ ನಾರ್ವೇ ಭಾರತದೊಂದಿಗೆ ದೃಢವಾಗಿ ನಿಂತು ನಿಜವಾದ ಸ್ನೇಹದ ಮನೋಭಾವವನ್ನು ಪ್ರದರ್ಶಿಸಿತು. ಅದಕ್ಕಾಗಿ ಧನ್ಯವಾದ ಅರ್ಪಿಸುತ್ತೇನೆ" ಎಂದು ಹೇಳಿದರು.

ಬದಲಾಗುತ್ತಿರುವ ಜಾಗತಿಕ ಭೌಗೋಳಿಕ ರಾಜಕೀಯ ಪರಿಸ್ಥಿತಿಯನ್ನು ಎತ್ತಿ ತೋರಿಸಿದ ಮೋದಿ, ಉಕ್ರೇನ್ ಮತ್ತು ಪಶ್ಚಿಮ ಏಷ್ಯಾದ ಸಂಘರ್ಷಗಳ ಮಧ್ಯೆ ಭಾರತ ಮತ್ತು ಯುರೋಪ್ ವ್ಯೂಹಾತ್ಮಕ ತೊಡಗಿಸಿಕೊಳ್ಳುವಿಕೆಯನ್ನು ಬಲಪಡಿಸುತ್ತಿವೆ ಎಂದು ಹೇಳಿದರು. "ಭಾರತ ಮತ್ತು ನಾರ್ವೇ ಎರಡೂ ನಿಯಮ ಆಧಾರಿತ ವ್ಯವಸ್ಥೆ, ಸಂವಾದ ಮತ್ತು ರಾಜತಾಂತ್ರಿಕತೆಯನ್ನು ನಂಬುತ್ತವೆ. ಕೇವಲ ಮಿಲಿಟರಿ ಸಂಘರ್ಷದ ಮೂಲಕ ಯಾವುದೇ ಸಮಸ್ಯೆಯನ್ನು ಪರಿಹರಿಸಲು ಸಾಧ್ಯವಿಲ್ಲ ಎಂಬುದನ್ನು ಒಪ್ಪುತ್ತೇವೆ," ಎಂದು ಹೇಳಿದ ಅವರು, ಶಾಂತಿ ಮತ್ತು ಸಂಘರ್ಷಗಳ ಶೀಘ್ರ ಅಂತ್ಯಕ್ಕಾಗಿ ಪ್ರಯತ್ನಗಳನ್ನು ಬೆಂಬಲಿಸುವುದನ್ನು ಎರಡೂ ದೇಶಗಳು ಮುಂದುವರಿಸಲಿವೆ ಎಂದು ತಿಳಿಸಿದರು.

ಭಾರತ ಮತ್ತು ಯುರೋಪಿಯನ್ ಮುಕ್ತ ವ್ಯಾಪಾರ ಒಕ್ಕೂಟದ ನಡುವೆ ಕಳೆದ ವರ್ಷ ಏರ್ಪಟ್ಟ ಒಪ್ಪಂದಗಳು ಭಾರತ ಮತ್ತು ನಾರ್ವೇ ನಡುವೆ ಹಂಚಿಕೆಯ ಪ್ರಗತಿ ಮತ್ತು ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳುವ ನೀಲನಕ್ಷೆ"ಯಾಗಿವೆ ಎಂದರು.

ಸಂಶೋಧನೆ, ಶಿಕ್ಷಣ ಮತ್ತು ನಾವೀನ್ಯತೆ ಮಾತುಕತೆಗಳ ಸಮಯದಲ್ಲಿ ಸಹಕಾರದ ಮತ್ತೊಂದು ಪ್ರಮುಖ ಸ್ತಂಭವಾಗಿ ಹೊರಹೊಮ್ಮಿದವು. ಸುಸ್ಥಿರತೆ, ಸಾಗರ ಇಂಧನ, ಭೂವಿಜ್ಞಾನ ಮತ್ತು ಆರೋಗ್ಯ ರಕ್ಷಣೆಯಲ್ಲಿ ಸಂಶೋಧನಾ ಸಹಯೋಗವನ್ನು ಹೆಚ್ಚಿಸಲು ಉಭಯ ನಾಯಕರು ಒಪ್ಪಿಕೊಂಡರು, ಜೊತೆಗೆ ಎಂಜಿನಿಯರಿಂಗ್, ಕೃತಕ ಬುದ್ಧಿಮತ್ತೆ, ಸೈಬರ್ ತಂತ್ರಜ್ಞಾನ ಮತ್ತು ಡಿಜಿಟಲ್ ನಾವೀನ್ಯತೆಗಳಂತಹ ಕ್ಷೇತ್ರಗಳಲ್ಲಿ ವಿಶ್ವವಿದ್ಯಾಲಯಗಳು ಮತ್ತು ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಗಳನ್ನು ಜೋಡಿಸಲು ಇಬ್ಬರು ನಾಯಕರು ಒಪ್ಪಿಕೊಂಡರು. ಮೋದಿ ಅವರ ನಾರ್ವೇ ಭೇಟಿಯು ನಾರ್ಡಿಕ್ ಪ್ರದೇಶದೊಂದಿಗೆ ಭಾರತದ ವಿಸ್ತರಿಸುತ್ತಿರುವ ತೊಡಗಿಸಿಕೊಳ್ಳುವಿಕೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ, ವಿಶೇಷವಾಗಿ ಹಸಿರು ಪರಿವರ್ತನೆ, ಸುಧಾರಿತ ತಂತ್ರಜ್ಞಾನ, ಕಡಲ ಸಹಕಾರ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ಇದು ಪ್ರಮುಖವಾಗಿದೆ.



### ಮೋದಿಗೆ ನಾರ್ವೇ ದೇಶದ ಅತ್ಯುನ್ನತ ನಾಗರಿಕ ಗೌರವ

ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೋಮವಾರ ಓಸ್ಲೋದಲ್ಲಿ ನಾರ್ವೆಯ ಅತ್ಯುನ್ನತ ನಾಗರಿಕ ಗೌರವವಾದ 'ಗ್ರ್ಯಾಂಡ್ ಕ್ರಾಸ್ ಆಫ್ ದಿ ರಾಯಲ್ ನಾರ್ವೇಜಿಯನ್ ಆರ್ಡರ್ ಆಫ್ ಮೆರಿಟ್' ಪ್ರದಾನ ಮಾಡಲಾಯಿತು, ಇದು ಮೋದಿಯವರಿಗೆ ಲಭಿಸಿದ 32ನೇ ಅಂತರರಾಷ್ಟ್ರೀಯ ಮನ್ನಣೆಯಾಗಿದೆ. ರಾಜಮನೆತನದಲ್ಲಿ ರಾಜ ಹರಾಲ್ಡ್‌ಗಿ ಮತ್ತು ರಾಣಿ ಸೋಂಜಾ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಈ ಗೌರವವನ್ನು ನೀಡಲಾಯಿತು. ನಾರ್ವೆಯ ಹಿತಾಸಕ್ತಿಗಳು ಮತ್ತು ಅಂತರರಾಷ್ಟ್ರೀಯ ಸಂಬಂಧಗಳನ್ನು ಮುನ್ನಡೆಸುವಲ್ಲಿ ಅಸಾಧಾರಣ ಸೇವೆಗಾಗಿ ಮೀಸಲಾಗಿದೆ. 43 ವರ್ಷಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ನಾರ್ವೇಗೆ ನೀಡುತ್ತಿರುವ ಮೊದಲ ಭೇಟಿಯಾಗಿದೆ, ಕೊನೆಯದು 1983ರಲ್ಲಿ ಇಂದಿರಾ ಗಾಂಧಿ ಅವರ ಪ್ರವಾಸ. "ಈ ಗೌರವವು ಭಾರತದ ಜನರಿಗೆ ಸಮರ್ಪಿತವಾಗಿದೆ ಮತ್ತು ಇದು ಭಾರತ ಮತ್ತು ನಾರ್ವೆ ನಡುವಿನ ಶಾಶ್ವತ ಸ್ನೇಹಕ್ಕೆ ಗೌರವವಾಗಿದೆ. ಇದು ಜಾಗತಿಕ ಪ್ರಗತಿಗೆ ನಮ್ಮ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ" ಎಂದು ಪ್ರಧಾನಿ ತಮ್ಮ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

### ಹಿಮಾದ್ರಿ ಬೆಂಬಲಿಸಿದ್ದಕ್ಕೆ ಧನ್ಯವಾದ

ಆರ್ಕ್ಟಿಕ್ ಪ್ರದೇಶದಲ್ಲಿ ನಾರ್ವೆಯ ಪ್ರಾಮುಖ್ಯತೆಯನ್ನು ಗುರುತಿಸಿದ ಮೋದಿ, ಆರ್ಕ್ಟಿಕ್ ಮತ್ತು ಧ್ರುವ ಸಂಶೋಧನೆಯಲ್ಲಿ ಸುದೀರ್ಘ ಸಹಕಾರವನ್ನು ಎತ್ತಿ ತೋರಿಸಿದರು. ಭಾರತದ ಆರ್ಕ್ಟಿಕ್ ಸಂಶೋಧನಾ ಕೇಂದ್ರ "ಹಿಮಾದ್ರಿ" ಕಾರ್ಯಾಚರಣೆಯನ್ನು ಬೆಂಬಲಿಸಿದ್ದಕ್ಕಾಗಿ ಅವರು ನಾರ್ವೆಗೆ ಧನ್ಯವಾದ ಅರ್ಪಿಸಿದರು ಮತ್ತು ಇಸ್ರೋ ಮತ್ತು ನಾರ್ವೆ ಬಾಹ್ಯಾಕಾಶ ಸಂಸ್ಥೆ ನಡುವಿನ ಹೊಸ ಒಡಂಬಡಿಕೆ ಬಾಹ್ಯಾಕಾಶ ಸಹಕಾರಕ್ಕೆ ಹೊಸ ಮಾರ್ಗಗಳನ್ನು ತೆರೆಯುತ್ತದೆ ಎಂದು ಮೋದಿ ಘೋಷಿಸಿದರು. "ಈ ಎಲ್ಲಾ ಕ್ಷೇತ್ರಗಳಲ್ಲಿ ಆಳವಾದ ಸಹಕಾರದ ಮೂಲಕ, ನಮ್ಮ ವಿಜ್ಞಾನಿಗಳು ಹವಾಮಾನ ಬದಲಾವಣೆಯನ್ನು ಅರ್ಥಮಾಡಿಕೊಳ್ಳಲು, ಸೂಕ್ಷ್ಮ ಪರಿಸರ ವ್ಯವಸ್ಥೆಗಳನ್ನು ರಕ್ಷಿಸಲು ಮತ್ತು ಮಾನವಕುಲದ ಭವಿಷ್ಯವನ್ನು ಸುರಕ್ಷಿತಗೊಳಿಸಲು ಕೊಡುಗೆ ನೀಡುತ್ತಾರೆ" ಎಂದು ಮೋದಿ ಹೇಳಿದರು.

ಇಂಡೋ–ಪೆಸಿಫಿಕ್ ಸಾಗರಗಳ ಉಪಕ್ರಮಕ್ಕೆ ಸೇರಲು ನಾರ್ವೆ ತೆಗೆದುಕೊಂಡ ನಿರ್ಧಾರವನ್ನು ಸ್ವಾಗತಿಸಿದ ಪ್ರಧಾನಿ ಮೋದಿ, ಈ ಕ್ರಮವು ಸಮುದ್ರ ಆರ್ಥಿಕತೆ, ಕಡಲ ಭದ್ರತೆ ಮತ್ತು ಸಾಮರ್ಥ್ಯ ವೃದ್ಧಿಯಲ್ಲಿ ಉಭಯ ಕಡಲ ರಾಷ್ಟ್ರಗಳ ನಡುವಿನ ಸಹಕಾರವನ್ನು ಬಲಪಡಿಸುತ್ತದೆ ಎಂದು ಹೇಳಿದರು. ಆರ್ಕ್ಟಿಕ್‌ನಿಂದ ಬಾಹ್ಯಾಕಾಶದವರೆಗೆ, ಹಸಿರು ಹಡಗು ಸಾಗಣೆಯಿಂದ ನೀಲಿ ಆರ್ಥಿಕತೆಯವರೆಗೆ ಮತ್ತು ಇಂಧನ ಭದ್ರತೆಯಿಂದ ಆಹಾರ ಭದ್ರತೆಯವರೆಗೆ, ನಮ್ಮ ಸಹಕಾರವು ಹೊಸ ಗಡಿಗಳನ್ನು ಮುಟ್ಟುತ್ತಿದೆ," ಎಂದು ಮೋದಿ ಹೇಳಿದರು, ಉಭಯ ದೇಶಗಳ ನಡುವೆ "ವಿಶ್ವಾಸಾರ್ಹ, ಭವಿಷ್ಯದ ಮತ್ತು ದೀರ್ಘಕಾಲೀನ ಪಾಲುದಾರಿಕೆ" ಗೆ ಕರೆ ನೀಡಿದರು.

# ನಾಯಕತ್ವ ಬದಲಾದರೆ ಮುಖ್ಯಮಂತ್ರಿ ಸ್ಥಾನಕ್ಕೆ ಪರಮೇಶ್ವರ್ ಸೂಕ್ತ ವ್ಯಕ್ತಿ

**ತುಮಕೂರು, ಮೇ 18:** ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ನಾಯಕತ್ವ ಬದಲಾವಣೆಯ ಕುರಿತು ತೆರೆಮರೆಯಲ್ಲಿ ಚರ್ಚೆಗಳು ನಡೆಯುತ್ತಿರುವ ಬೆನ್ನಲ್ಲೇ ಜಿ.ಪರಮೇಶ್ವರ್ ಪರವಾದ ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರ ಹೇಳಿಕೆ ಭಾರಿ ಸಂಚಲನ ಮೂಡಿಸಿದೆ. ಮುಖ್ಯಮಂತ್ರಿ ಸ್ಥಾನ ಯಾರೊಬ್ಬರ ಸ್ವತ್ತಲ್ಲ ಎಂದು ಹೇಳುವ ಮೂಲಕ ಹೈಕಮಾಂಡ್ ಮಟ್ಟದಲ್ಲಿ ಹೊಸ ಚರ್ಚೆಗೆ ಮುನ್ನುಡಿ ಬರೆದಿದ್ದಾರೆ. ತುಮಕೂರಿನ ಮಧುಗಿರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕೆ.ಎನ್. ರಾಜಣ್ಣ, ಗೃಹ ಸಚಿವ ಜಿ. ಪರಮೇಶ್ವರ್ ಅವರ ಪರವಾಗಿ ಬಹಿರಂಗವಾಗಿಯೇ ಬ್ಯಾಟಿಂಗ್ ಮಾಡಿದ್ದು, ರಾಜ್ಯದಲ್ಲಿ ಒಂದು ವೇಳೆ ಸಿದ್ದರಾಮಯ್ಯ ಅವರ ನಾಯಕತ್ವ ಬದಲಾವಣೆಯ ಸನ್ನಿವೇಶ ಎದುರಾದರೆ, ಆ ಸ್ಥಾನಕ್ಕೆ ಜಿ. ಪರಮೇಶ್ವರ್ ಅವರೇ ಸೂಕ್ತ ವ್ಯಕ್ತಿ ಮತ್ತು ಅವರೇ ಮುಖ್ಯಮಂತ್ರಿಯಾಗಬೇಕು ಎಂದು ತನು–ಮನ–ಧನದಿಂದ ಬೆಂಬಲಿಸುವ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ. ಪರಮೇಶ್ವರ್ ಅವರನ್ನು ಮುಖ್ಯಮಂತ್ರಿ ಮಾಡಲು ಸಾಧನಾ ಸಮಾವೇಶ ಆಯೋಜಿಸಲಾಗುತ್ತಿದೆಯೇ ಎಂಬ ಮಾಧ್ಯಮಗಳ ಪ್ರಶ್ನೆಗೆ ನೇರವಾಗಿಯೇ ಉತ್ತರಿಸಿದ ರಾಜಣ್ಣ, "ಹೌದು, ನಾವು ಅದನ್ನೇ ಬಯಸುತ್ತೇವೆ" ಎಂದು ಒಪ್ಪಿಕೊಂಡರು. ಈ ಮೂಲಕ ಪರಮೇಶ್ವರ್ ಅವರನ್ನು ಮುಂದಿನ ಸಿಎಂ ರೇಸ್‌ನಲ್ಲಿ ಮುಂಚೂಣಿಗೆ ತರಲು ಒಂದು ಬಣ ಈಗಾಗಲೇ ಸದ್ದಿಲ್ಲದೆ ಸಿದ್ಧತೆ ನಡೆಸುತ್ತಿರುವುದನ್ನು ಪರೋಕ್ಷವಾಗಿ ಖಚಿತಪಡಿಸಿದ್ದಾರೆ. ಇದೇ ವೇಳೆ ಹಳೆಯ ರಾಜಕೀಯ ವಿದ್ಯಮಾನಗಳನ್ನು ನೆನಪಿಸಿದ ರಾಜಣ್ಣ, "ಕಳೆದ 2013ರ ವಿಧಾನಸಭಾ ಚುನಾವಣೆಯಲ್ಲಿ ಜಿ. ಪರಮೇಶ್ವರ್ ಅವರು ಗೆದ್ದಿದ್ದರೆ, ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಸ್ಥಾನವನ್ನು ಬಿಟ್ಟುಕೊಡುತ್ತಿದ್ದರಾ" ಎಂದು ಪ್ರಶ್ನಿಸುವ ಮೂಲಕ ಚರ್ಚೆಯನ್ನು ಮತ್ತಷ್ಟು ಕಾವೇರಿಸಿದ್ದಾರೆ. ಸಿಎಂ ಸ್ಥಾನ ಎಂಬುದು ಸಿದ್ದರಾಮಯ್ಯ ಅವರ ಮನೆ ಆಸ್ತಿಯಲ್ಲ ಮತ್ತು ಅದು ಯಾವುದೇ ರಾಜಕಾರಣಿಗಳ ಸ್ವಂತ ಆಸ್ತಿಯೂ ಅಲ್ಲ ಎಂದು ಅತ್ಯಂತ ಖಂಡತುಂಡವಾಗಿ ನುಡಿದಿದ್ದಾರೆ.



■ ಸಿಎಂ ಸ್ಥಾನ ಯಾರೊಬ್ಬರ ಸ್ವತ್ತಲ್ಲ: ಹೊಸ ಚರ್ಚೆ ನಾಂದಿ ಹಾಡಿದ ಕೆ.ಎನ್. ರಾಜಣ್ಣ

# ಹಣದುಬ್ಬರ ಏರಿಕೆ, ಬಡವರಿಗೆ ಹಕ್ಕು ಸಿಗುತ್ತಿಲ್ಲ

**ಬೆಂಗಳೂರು, ಮೇ 18:** ಇಂಧನ ಬೆಲೆ ಏರಿಕೆಗೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸರ್ಕಾರಕ್ಕೆ ದೂರದೃಷ್ಟಿಯ ಕೊರತೆಯಿದ್ದು, ದೇಶದಲ್ಲಿ ಹಣದುಬ್ಬರ ಏರಿಕೆಯಾಗುತ್ತಿದೆ. ಬಡವರಿಗೆ ಅವರ ಹಕ್ಕು ಸಿಗುತ್ತಿಲ್ಲ. ಇದರ ವಿರುದ್ಧ ಧ್ವನಿ ಎತ್ತುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೋಮವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆ ಮುಗಿಯುವವರೆಗೂ ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಿಸುವುದನ್ನು ವಿಳಂಬ ಮಾಡಿತು. ಬಿಜೆಪಿಯ ಭವಿಷ್ಯದ ಮೇಲೆ ಪರಿಣಾಮ ಬೀರುತ್ತದೆ ಎಂಬ ಭಯವೇ ಈ ವಿಳಂಬಕ್ಕೆ ಕಾರಣ. ಚುನಾವಣೆಗೆ ಮುನ್ನ ಮೋದಿ ಹೀಗೆ ಮಾಡಿದ್ದರೆ, ಅದರ ಪರಿಣಾಮ ಅವರಿಗೆ ತಿಳಿದಿರುತ್ತಿತ್ತು. ಬೆಲೆ ಏರಿಕೆಯು ಚುನಾವಣೆಯಲ್ಲಿ ತಮ್ಮ ಪಕ್ಷದ ಮೇಲೆ ಪರಿಣಾಮ ಬೀರುತ್ತದೆ ಎಂಬುದು ಅವರಿಗೆ ಗೊತ್ತಿತ್ತು. ಹೀಗಾಗಿ ಇಷ್ಟು ದಿನ ಈ ಮಾಹಿತಿಯನ್ನು ಮುಚ್ಚಿಟ್ಟಿದ್ದರು. ಈಗ, ಚುನಾವಣೆ ಮುಗಿದ ತಕ್ಷಣ, ಪೆಟ್ರೋಲ್, ಡೀಸೆಲ್ ಮತ್ತು ಅನಿಲ ಬೆಲೆಗಳನ್ನು ಹೆಚ್ಚಿಸಲಾಗಿದೆ ಎಂದು ಟೀಕಿಸಿದರು.

ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ, ಜಾಗತಿಕ ಕಚ್ಚಾ ತೈಲ ಬೆಲೆ ಏರಿಕೆಯಿಂದಾಗಿ ಇಂಧನ ಚಿಲ್ಲರೆ ವ್ಯಾಪಾರಿಗಳು ಹೆಚ್ಚುತ್ತಿರುವ ನಷ್ಟದ ನಡುವೆ, ನಾಲ್ಕು ವರ್ಷಗಳಿಗೂ ಹೆಚ್ಚು ಅವಧಿಯಲ್ಲಿ ಮೊದಲ ಬಾರಿಗೆ ಶುಕ್ರವಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಲೀಟರ್‌ಗೆ 3 ರೂ. ಹೆಚ್ಚಿಸಲಾಗಿದೆ. ಅಸ್ಸಾಂ, ಕೇರಳ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆಗಳು ಮುಗಿದ 16 ದಿನಗಳ ನಂತರ ಈ ಹೆಚ್ಚಳವಾಗಿದೆ ಎಂದು ಹೇಳಿದರು.



■ ಕೇಂದ್ರ ಸರ್ಕಾರ, ಪ್ರಧಾನಿ ಮೋದಿಗೆ ದೂರದೃಷ್ಟಿಯ ಕೊರತೆ: ಮಲ್ಲಿಕಾರ್ಜುನ ಖರ್ಗೆ

# ದೇಶದ ಮೊದಲ ಬುಲೆಟ್ ಟ್ರೈನ್ ಮಾದರಿ ಅನಾವರಣ

ನವದೆಹಲಿ, ಮೇ 18: ಜಪಾನ್, ಚೀನಾ, ಜರ್ಮನಿಯಲ್ಲಿ ಅತ್ಯಂತ ಜನಪ್ರಿಯವಾಗಿರುವ ಬುಲೆಟ್ ರೈಲು ಭಾರತದಲ್ಲೂ ಸಂಚಾರಕ್ಕೆ ಸಜ್ಜುಗೊಳ್ಳುತ್ತಿದ್ದು, ದೇಶದ ಮೊದಲ ಪ್ರಸ್ತಾವಿತ ಬುಲೆಟ್ ರೈಲಿನ ಚಿತ್ರವನ್ನು ರೈಲ್ವೆ ಸಚಿವರು ಸೋಮವಾರ ಅನಾವರಣಗೊಳಿಸಿದ್ದಾರೆ.



ದೆಹಲಿಯ ರೈಲ್ವೆ ಸಚಿವಾಲಯದ ಕಚೇರಿಯಲ್ಲಿ ದೇಶದ ಪ್ರತಿಷ್ಠಿತ ಮೊದಲ ಬುಲೆಟ್ ರೈಲಿನ ಪ್ರಸ್ತಾಪಿತ ರೈಲಿನ ಮಾದರಿಯನ್ನು ಪ್ರದರ್ಶಿಸಲಾಗಿದೆ. ರೈಲ್ವೆ ಸಚಿವಾಲಯದ ಗೇಟ್ ಸಂಖ್ಯೆ 4ರಲ್ಲಿ ಸಾರ್ವಜನಿಕರ ವೀಕ್ಷಣೆಗಾಗಿ ಬುಲೆಟ್ ರೈಲಿನ ಚಿತ್ರವನ್ನು ಅಳವಡಿಸಲಾಗಿದೆ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ. ದೇಶದ ಮೊದಲ ಬುಲೆಟ್ ರೈಲು ಆಗಸ್ಟ್ 15, 2027 ರಂದು ಮುಂಬೈ–ಅಹಮದಾಬಾದ್ ಮಾರ್ಗದಲ್ಲಿ ಕಾರ್ಯಾಚರಣೆಯನ್ನು ಪ್ರಾರಂಭಿಸಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಕಳೆದ ಜನವರಿಯಲ್ಲಿ ಹೇಳಿದ್ದರು.

# ಕೇರಳಂನಲ್ಲಿ ಕಾಂಗ್ರೆಸ್ ಸರ್ಕಾರ: ಮುಖ್ಯಮಂತ್ರಿಯಾಗಿ ವಿಡಿ ಸತೀಶನ್ ಪ್ರಮಾಣವಚನ ಸ್ವೀಕಾರ

**ತಿರುವನಂತಪುರಂ, ಮೇ 18:** ಕೇರಳಂ ನೂತನ ಮುಖ್ಯಮಂತ್ರಿಯಾಗಿ ವಿಡಿ ಸತೀಶನ್ ಅವರು ಪ್ರಮಾಣವಚನ ಸ್ವೀಕರಿಸಿದ್ದು, ಅವರ ಜೊತೆಗೆ 20 ಮಂದಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ತಿರುವನಂತಪುರಂನ ಸೆಂಟ್ರಲ್ ಸ್ಟೇಡಿಯಂನಲ್ಲಿ ನಡೆದ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ವಿ.ಡಿ. ಸತೀಶನ್ ಹಾಗೂ 20 ಮಂದಿ ಸಚಿವರಿಗೆ ರಾಜ್ಯಪಾಲ ಆರ್.ವಿ. ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರು ಪ್ರತಿಜ್ಞಾವಿಧಿ ಬೋಧಿಸಿದರು.

ಮುಖ್ಯಮಂತ್ರಿ ಹುದ್ದೆಯೊಂದಿಗೆ 11 ಮಂದಿ ಕಾಂಗ್ರೆಸ್ ಶಾಸಕರು ಕೇರಳ ನೂತನ ಸಂಪುಟದಲ್ಲಿ ಸ್ಥಾನ ಪಡೆದುಕೊಂಡಿದ್ದಾರೆ. ಇದರೊಂದಿಗೆ ಭಾರತೀಯ ಯೂನಿಯನ್ ಮುಸ್ಲಿಂ ಲೀಗ್‌ನ ಐವರು, ಕೇರಳ ಕಾಂಗ್ರೆಸ್ ಜೋಸೆಫ್, ಕ್ರಾಂತಿಕಾರಿ ಸಮಾಜವಾದಿ ಪಕ್ಷ, ಕೇರಳ ಕಾಂಗ್ರೆಸ್ ಮತ್ತು ಕಮ್ಯುನಿಸ್ಟ್ ಮಾರ್ಕ್ಸ್ವಾದಿ ಪಕ್ಷ ಗಳು ತಲಾ ಒಂದು ಸ್ಥಾನ ಪಡೆದಿವೆ.

ವಿ.ಡಿ.ಸತೀಶನ್ ಜೊತೆಗೆ ರಮೇಶ್ ಚೆನ್ನಿತ್ತಾಲ, ಸನ್ನಿ ಜೋಸೆಫ್, ಕೆ ಮುರಳೀಧರನ್, ಎ ಪಿ ಅನಿಲ್ ಕುಮಾರ್, ಪಿ.ಸಿ ವಿಷ್ಣುನಾಥ್, ಬಿಂದು ಕೃಷ್ಣ, ಎಂ ಲಿಜ್ಜು, ಟಿ ಸಿದ್ದಿಕ್, ರೋಜಿ ಎಂ. ಜಾನ್, ಕೆ.ಎ ತುಳಸಿ ಮತ್ತು ಒ.ಜೆ ಜನೀಶ್ ಕಾಂಗ್ರೆಸ್ ಸಚಿವರಾಗಿದ್ದಾರೆ. ಜೊತೆಗೆ ಪಿ.ಕೆ ಕುನ್ಹಾಲಿಕುಟ್ಟಿ, ಕೆ.ಎಂ ಶಾಜಿ, ಎನ್ ಶಂಷುದ್ದೀನ್, ಪಿ.ಕೆ ಬಶೀರ್ ಮತ್ತು ವಿ.ಇ ಅಬ್ದುಲ್ ಗಫೂರ್. ಮಾನ್ಸ್ ಜೋಸೆಫ್ , ಅನೂಪ್ ಜೇಕಬ್ , ಶಿಬು ಬೇಬಿ ಜಾನ್, ಮತ್ತು ಸಿಪಿ ಜಾನ್ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಕೇರಳ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಆರ್ಲೇಕರ್ ಅವರು ತಿರುವನಂತಪುರಂನ ಸೆಂಟ್ರಲ್ ಸ್ಟೇಡಿಯಂನಲ್ಲಿ ನಡೆದ ಸಮಾರಂಭದಲ್ಲಿ ಸತೀಶನ್ ಅವರಿಗೆ ಪ್ರಮಾಣವಚನ ಬೋಧಿಸಿದರು. ಸತೀಶನ್ ಅವರು ದೇವರ ಹೆಸರಿನಲ್ಲಿ ಪ್ರಮಾಣ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ವಾದ್ರಾ, ಮುಖ್ಯಮಂತ್ರಿ ಸಿದ್ದರಾಮಯ್ಯ, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಹಿಮಾಚಲ ಪ್ರದೇಶ ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಸುಖು ಮತ್ತು ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಪಸ್ಥಿತರಿದ್ದರು. ನಿರ್ಗಮಿತ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಬಿಜೆಪಿ ರಾಜ್ಯಾಧ್ಯಕ್ಷ ರಾಜೀವ್ ಚಂದ್ರಶೇಖರ್, ಸಿಪಿಐ ನಾಯಕರು ಮತ್ತು ಇತರ ನಾಯಕರು ಭಾಗವಹಿಸಿದ್ದರು.

ಸೆಂಟ್ರಲ್ ಸ್ಟೇಡಿಯಂನಲ್ಲಿ ಯುಡಿಎಫ್ ಸರ್ಕಾರದ ಪ್ರಮಾಣವಚನ ಸಮಾರಂಭದಲ್ಲಿ ಭಾರಿ ಜನಜಂಗುಳಿ ಉಂಟಾಗಿತ್ತು. ಒಂದು ದಶಕದ ನಂತರ ಯುಡಿಎಫ್ ಮತ್ತೆ ಅಧಿಕಾರಕ್ಕೆ ಬಂದಿರೋ ಸಂಭ್ರಮದಲ್ಲಿ ಹತ್ತಾರು ಸಾವಿರ ಕಾರ್ಯಕರ್ತರು ರಾಜಧಾನಿಗೆ ಹರಿದು ಬಂದಿದ್ದರು. ಇದರಿಂದಾಗಿ ಇಡೀ ಕಾರ್ಯಕ್ರಮದಲ್ಲಿ ಪರಿಸ್ಥಿತಿ ಕೈಮೀರಿ ಹೋಗಿದೆ. ಹೊಸದಾಗಿ ಆಯ್ಕೆಯಾದ ಶಾಸಕರು ಮತ್ತು ಪಕ್ಷದ ಪ್ರಮುಖ ನಾಯಕರಿಗೇ ಕೂರಲು ಸೀಟು ಸಿಗದಂತಹ ಗೊಂದಲದ ವಾತಾವರಣ ನಿರ್ಮಾಣವಾಯಿತು.

ವಿವಿಐಪಿಗಳಿಗಾಗಿ ಮೀಸಲಿಟ್ಟಿದ್ದ ಮುಂಭಾಗದ ಸಾಲುಗಳಿಗೆ ಕಾರ್ಯಕರ್ತರು ನುಗ್ಗಿ ಆಸನಗಳನ್ನು ಆಕ್ರಮಿಸಿಕೊಂಡರು. ವೇದಿಕೆ ಮುಂಭಾಗದ ಸಾಲಿನಲ್ಲಿ ಉಂಟಾಗಿರುವ ನೂಕುನುಗ್ಗಲು ತಪ್ಪಿಸಿ, ನಾಯಕರಿಗೆ ದಾರಿ ಮಾಡಿಕೊಡಲು ಪೊಲೀಸರು ಹರಸಾಹಸಪಟ್ಟರು, ಒಂದು ಅಂದಾಜಿನ ಪ್ರಕಾರ ಕಾರ್ಯಕ್ರಮದಲ್ಲಿ ಒಂದು ಲಕ್ಷ ಜನರು ಸೇರಿದ್ದರು ಎನ್ನಲಾಗಿದೆ.

ಕೇರಳದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ವಿ.ಡಿ. ಸತೀಶನ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಶುಭಾಶಯ ತಿಳಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, ಜನರ ಆಕಾಂಕ್ಷೆಗಳನ್ನು ಈಡೇರಿಸುವಲ್ಲಿ ಹೊಸದಾಗಿ ರಚನೆಯಾದ ಕೇರಳಂ ಸರ್ಕಾರಕ್ಕೆ ಕೇಂದ್ರ ಸರ್ಕಾರವು ಎಲ್ಲಾ ರೀತಿಯ ಬೆಂಬಲವನ್ನು ನೀಡುತ್ತದೆ ಎಂದು ಭರವಸೆ ನೀಡಿದ್ದಾರೆ.



# ಸುವೇಂದು ಅಧಿಕಾರಿ ಪಿಎ ಹತ್ಯೆ: ಪ್ರಮುಖ ಆರೋಪಿ ರಾಜ್‌ಕುಮಾರ್ ಸಿಂಗ್ ಸೆರೆ

**ಕೋಲ್ಕತ್ತ, ಮೇ 18:** ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರ ಪಿಎ ಕೊಲೆ ಪ್ರಕರಣದ ಪ್ರಮುಖ ಶೂಟರ್ ರಾಜ್‌ಕುಮಾರ್ ಸಿಂಗ್‌ನನ್ನು ಮುಜಫರ್‌ನಗರ ಪೊಲೀಸರ ಸಹಯೋಗದೊಂದಿಗೆ ಸಿಬಿಐ ತಂಡ ಬಂಧಿಸಿದೆ. ಆರೋಪಿಯ ಟ್ರಾನ್ಸಿಟ್ ರಿಮಾಂಡ್ ಪಡೆದುಕೊಂಡಿದ್ದು, ಮಂಗಳವಾರ ಕೋಲ್ಕತ್ತಾದ ವಿಶೇಷ ಸಿಬಿಐ ನ್ಯಾಯಾಲಯದ ಮುಂದೆ ಹಾಜರುಪಡಿಸಲಿದೆ. ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣಾ ಫಲಿತಾಂಶಗಳು ಪ್ರಕಟವಾದ ಎರಡು ದಿನಗಳ ನಂತರ, ಮೇ 6ರ ರಾತ್ರಿ ಸುವೇಂದು ಅಧಿಕಾರಿ ಅವರ ಪಿಎ ಚಂದ್ರನಾಥ್ ರಥ್ ಅವರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು. ರಥ್ ಕೋಲ್ಕತ್ತಾಗೆ ತೆರಳುತ್ತಿದ್ದಾಗ ಉತ್ತರ 24 ಪರಗಣ ಜಿಲ್ಲೆಯ ಮಧ್ಯಮಗ್ರಾಮದ ಡೋಲಾಟಲಾ ಪ್ರದೇಶದಲ್ಲಿ ಮೋಟಾರ್‌ಸೈಕಲ್‌ನಲ್ಲಿ ಬಂದ ದುಷ್ಕರ್ಮಿಗಳು ಗುಂಡು ಹಾರಿಸಿದ್ದರು. ಪ್ರಸ್ತುತ ಸಿಬಿಐ ಪ್ರಕರಣದ ತನಿಖೆ ನಡೆಸುತ್ತಿದೆ.

ರಥ್ ಹತ್ಯೆಯ ನಂತರ, ವಿಶೇಷ ತನಿಖಾ ತಂಡ ರಚಿಸಲಾಯಿತು. ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು ರಥ್ ಅವರ ಕುಟುಂಬಕ್ಕೆ ನ್ಯಾಯ ಸಿಗುವಂತೆ ಮಾಡುವುದಾಗಿ ಭರವಸೆ ನೀಡಿದರು. ಪ್ರಕರಣವನ್ನು ನಂತರ ಸಿಬಿಐಗೆ ಹಸ್ತಾಂತರಿಸಿದ್ದರು. ಮೊದಲಿಗೆ ಮಾಯಾಂಕ್ ರಾಜ್ ಮಿಶ್ರಾ, ವಿಕ್ಕಿ ಮೌರ್ಯ ಮತ್ತು ರಾಜ್‌ಸಿಂಗ್ ಎಂಬ ಮೂವರನ್ನು ಬಂಧಿಸಲಾಗಿತ್ತು. ಈಗ ರಾಜಕುಮಾರ್ ಸಿಂಗ್ ಬಂಧನದೊಂದಿಗೆ ಈ ಪ್ರಕರಣದಲ್ಲಿ ಇದುವರೆಗೆ ಒಟ್ಟು ನಾಲ್ವರನ್ನು ಬಂಧಿಸಲಾಗಿದೆ.

# ರೈಲ್ವೆ ವಿದ್ಯುದೀಕರಣದಲ್ಲಿ ಭಾರತಕ್ಕೆ 2ನೇ ಸ್ಥಾನ: ಪ್ರಲ್ಹಾದ್ ಜೋಶಿ

## ಬೆಂಗಳೂರು-ಮುಂಬೈ ಹೊಸ ರೈಲು ಸಂಚಾರ ಆರಂಭ

## ಹುಬ್ಬಳ್ಳಿ ನಿಲ್ದಾಣದಲ್ಲಿ ರೈಲನ್ನು ಸವಾಗತಿಸಿದ ಕೇಂದ್ರ ಸಚಿವ

**ಹುಬ್ಬಳ್ಳಿ, ಮೇ 18:** ಜಗತ್ತಿನಲ್ಲಿ ರೈಲ್ವೆ ವಿದ್ಯುದೀಕರಣದಲ್ಲಿ ಭಾರತ 2ನೇ ಸ್ಥಾನದಲ್ಲಿದೆ. ರೈಲ್ವೆ ಬಜೆಟ್‌ನಿಂದ ರೈಲ್ವೆ ಇಲಾಖೆಗೆ ಸಾಕಷ್ಟು ನೆರವು ದೊರೆಯುತ್ತಿರಲಿಲ್ಲ. ಪ್ರಸ್ತುತ ರೈಲ್ವೆ ಇಲಾಖೆಗೆ ರೂ. 2 ಲಕ್ಷ ಕೋಟಿಗೂ ಅಧಿಕ ಅನುದಾನ ದೊರೆಯುತ್ತಿದೆ. ಅಲ್ಲದೇ ಕರ್ನಾಟಕಕ್ಕೆ ಸುಮಾರು ರೂ. 7ರಿಂದ 8 ಸಾವಿರ ಕೋಟಿ ದೊರೆಯುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ಉತ್ತರ ಕರ್ನಾಟಕ ಭಾಗದ ಜನರಿಗೆ ಬಹಳ ವರ್ಷಗಳ ಬೇಡಿಕೆಯ ರೈಲು ಆರಂಭಗೊಂಡಿದೆ. ಬೆಂಗಳೂರು ಮತ್ತು ಮುಂಬೈ ನಡುವೆ ಹೊಸ ರೈಲು ಸೇವೆ ಭಾನುವಾರದಿಂದ ಆರಂಭವಾಗಿದ್ದು, ಹುಬ್ಬಳ್ಳಿಯ ಸಿದ್ಧಾರೂಢಸ್ವಾಮಿ ರೈಲುನಿಲ್ದಾಣದಲ್ಲಿ ಬೆಂಗಳೂರು ಮತ್ತು ಮುಂಬೈ ನಡುವೆ ಆರಂಭವಾದ ಹೊಸರೈಲನ್ನು ಸ್ವಾಗತಿಸಿ ಮಾತನಾಡಿದ ಅವರು, ಬೆಂಗಳೂರಿನಿಂದ ಹೊರಡುವ ಈ ರೈಲು ದಾವಣಗೆರೆ, ಹುಬ್ಬಳ್ಳಿ, ಧಾರವಾಡ ಮೂಲಕ ಮುಂಬೈಗೆ ತೆರಳಲಿದೆ. ಈ ಮಾರ್ಗ ತುಂಬಾ ದೂರವಾದರೂ ಸಹ 24 ಗಂಟೆಯಲ್ಲಿ ಪ್ರಯಾಣವನ್ನು ಮುಕ್ತಾಯಗೊಳಿಸಬಹುದು. ಧಾರವಾಡದಿಂದ ಬೆಳಗಾವಿಗೆ ನೇರ ಸಂಪರ್ಕ ರೈಲು ಆರಂಭಿಸಲು ಈಗಾಗಲೇ ಕೇಂದ್ರ ಸರ್ಕಾರ ರೂ.1000 ಸಾವಿರ ಕೋಟಿ ಹಣವನ್ನು ಒದಗಿಸಲು ಮುಂದಾಗಿದೆ. ಅಲ್ಲದೇ ಧಾರವಾಡ ಬೆಳಗಾವಿ ಹಾಗೂ ದಾವಣಗೆರೆ ತುಮಕೂರು ನಡುವಿನ ಭೂಸ್ವಾಧೀನ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ತುರ್ತಾಗಿ ಪೂರ್ಣಗೊಳಿಸಬೇಕು. ಇದರಿಂದ ಹುಬ್ಬಳ್ಳಿ ಬೆಂಗಳೂರು ನಡುವೆ ರೈಲು ಸಂಚಾರ ಸಮಯದಲ್ಲಿ ಕಡಿಮೆಯಾಗುವುದು ಎಂದು ತಿಳಿಸಿದರು.



ಭಾರತೀಯ ರೈಲ್ವೆಯಲ್ಲಿ ಪರಿವರ್ತನೆ ದೊಡ್ಡ ಪ್ರಮಾಣದಲ್ಲಿ ಆಗುತ್ತಿದೆ. ಭಾರತದಲ್ಲಿ 160 ಕ್ಕೂ ಅಧಿಕ ವಂದೇ ಭಾರತ್ ರೈಲುಗಳು ಸಂಚರಿಸುತ್ತಿವೆ. ಮೆಟ್ರೋದಲ್ಲಿ ಸಹ ಸಾಕಷ್ಟು ಪ್ರಗತಿ ಸಾಧಿಸಲಾಗುತ್ತಿದೆ. ಅಳ್ನಾವರ ರೈಲು ನಿಲ್ದಾಣವನ್ನು ಶೀಘ್ರದಲ್ಲೇ ಉದ್ಘಾಟಿಸ ಲಾಗುವುದು. ರಾಜ್ಯದಲ್ಲಿ 3,700 ಕಿ.ಮೀ. ರೈಲ್ವೆ ವಿದ್ಯುದೀಕರಣ ಮುಕ್ತಾಯಗೊಂಡಿದೆ. ಪ್ರಯಾಣಿಕರ ಓಡಾಟದ ಸಮಯವನ್ನು ಕಡಿಮೆ ಮಾಡುವುದು ಬಹಳ ಅಗತ್ಯವಿದೆ ಎಂದು ಕೇಂದ್ರ ಸಚಿವರು ಹೇಳಿದರು.

ರೈಲ್ವೆ ಇಲಾಖೆಯಲ್ಲಿ ಹೊಸ ಯೋಜನೆಗಳು ಕಾರ್ಯಗತವಾಗುತ್ತಿವೆ. ಹುಬ್ಬಳ್ಳಿ ಅಂಕೋಲಾ ರೈಲು ಮಾರ್ಗಕ್ಕೆ ಪ್ರಯತ್ನಿಸಲಾಗುತ್ತಿದೆ. ಅಂಕೋಲಾ ಬಂದರು ಅಭಿವೃದ್ಧಿಗೆ ಈ ರೈಲು ಮಾರ್ಗ ಸಹಕಾರಿಯಾಗಲಿದೆ. ಅಲ್ಲದೇ ಕೈಗಾರಿಕೆಗಳು ಅಭಿವೃದ್ಧಿ ಹೊಂದಲಿವೆ. ಭಾರತ ತಯಾರಿಕಾ ನೆಲೆ ಆಗಬೇಕು. ಎಲೆಕ್ಟ್ರಾನಿಕ್ ವಸ್ತುಗಳ ತಯಾರಿಕೆಯಲ್ಲಿ ಭಾರತ ಸ್ವಾವಲಂಬನೆ ಸಾಧಿಸಿದೆ. ನವೀಕರಿಸಬಹುದಾದ ಇಂಧನದಲ್ಲಿ ಭಾರತ ಪ್ರಪಂಚದಲ್ಲಿ 3ನೇ ಸ್ಥಾನದಲ್ಲಿದೆ. ಯುದ್ಧದ ಬಿಕ್ಕಟ್ಟಿನ ನಡುವೆ ಪೆಟ್ರೋಲ್, ಡೀಸೆಲ್ ಪೂರೈಕೆಯಲ್ಲಿ ಕೊರತೆಯಾಗಿದೆ. ಮುಂದಿನ ದಿನಗಳಲ್ಲಿ ಇಂಧನಗಳ ಸಮಸ್ಯೆಗಳು ದೂರವಾಗಲಿವೆ. ವಿಕಸಿತ ಭಾರತದ ಕನಸು ನನಸಾಗಲಿದೆ ಎಂದು ತಿಳಿಸಿದರು.

ಶಾಸಕರಾದ ಅರವಿಂದ ಬೆಲ್ಲದ, ಮಹೇಶ ಟೆಂಗಿನಕಾಯಿ, ಎಫ್.ಎಚ್.ಜಕ್ಕಪ್ಪನವರ, ಪ್ರದೀಪ ಶೆಟ್ಟರ್, ಮಾಜಿ ಮೇಯರ್ ರಾಮಣ್ಣ ಬಡಿಗೇರ, ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಜಿ.ಕೆ. ಆದಪ್ಪಗೌಡರ್ ಸೇರಿದಂತೆ ರೈಲ್ವೆ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಅಧಿಕಾರಕ್ಕೆ ಬಂದ ಬೆನ್ನಲ್ಲೇ ಗ್ಯಾರಂಟಿ ಘೋಷಿಸಿದ ಬಿಜೆಪಿ ಸರ್ಕಾರ



■ ಪಶ್ಚಿಮ ಬಂಗಾಳದಲ್ಲಿ ಮಹಿಳೆಯರಿಗೆ ಮೂರು ಸಾವಿರ ನೆರವು, ಉಚಿತ ಬಸ್ ಪ್ರಯಾಣ

**ಕೋಲ್ಕತ್ತಾ, ಮೇ 18:** ಪಶ್ಚಿಮ ಬಂಗಾಳ ನೂತನ ಮುಖ್ಯಮಂತ್ರಿ ಸುವೇಂದು ಅಧಿಕಾರಿ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಣಯಗಳಿಗೆ ಅನುಮೋದನೆ ನೀಡಿದೆ. ಅನ್ನಪೂರ್ಣ ಯೋಜನೆಯಡಿ ಮಹಿಳೆಯರಿಗೆ ಮಾಸಿಕ 3,000 ರೂ.ಗಳ ಆರ್ಥಿಕ ನೆರವು ಮತ್ತು ಮಹಿಳೆಯರಿಗೆ ಸರ್ಕಾರಿ ಬಸ್ಗಳಲ್ಲಿ ಉಚಿತ ಪ್ರಯಾಣಕ್ಕೆ ಒಪ್ಪಿಗೆ ಸೂಚಿಸಿದೆ.

ಸಭೆಯ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವ ಅಗ್ನಿಮಿತ್ರ ಪಾಲ್, ಜೂನ್ 1 ರಿಂದ ಪ್ರತಿ ತಿಂಗಳು 3,000 ರೂ.ಗಳ ಆರ್ಥಿಕ ನೆರವು ಪಡೆಯಲಿದ್ದಾರೆ, ಅದೇ ದಿನಾಂಕದಿಂದ ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣವನ್ನು ಸಂಪುಟ ಅನುಮೋದಿಸಿದೆ. ಸಿಎಎ ಅಡಿಯಲ್ಲಿ ಪೌರತ್ವಕ್ಕಾಗಿ ಅರ್ಜಿ ಸಲ್ಲಿಸಿದವರು ಮತ್ತು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ರಚಿಸಲಾದ ನ್ಯಾಯಮಂಡಳಿಗಳ ಸದಸ್ಯರು ಅನ್ನಪೂರ್ಣ ಯೋಜನೆಯಡಿಯಲ್ಲಿ ಪ್ರಯೋಜನಗಳನ್ನು ಪಡೆಯಲು ಅರ್ಹರಾಗಿರುತ್ತಾರೆ ಎಂದು ಹೇಳಿದರು.

ರಾಜ್ಯ ಸರ್ಕಾರವು ತನ್ನ ನೌಕರರು, ಸಂಬಂಧಿತ ಶಾಸನಬದ್ಧ ಸಂಸ್ಥೆಗಳು ಮತ್ತು ಶಿಕ್ಷಣ ಸಂಸ್ಥೆಗಳಿಗೆ ಏಳನೇ ರಾಜ್ಯ ವೇತನ ಆಯೋಗದ ರಚನೆಗೆ ಅನುಮೋದನೆ ನೀಡಿದೆ ಎಂದು ಸಚಿವರು ಹೇಳಿದರು. ಜೂನ್‌ನಿಂದ ಧಾರ್ಮಿಕ ವರ್ಗೀಕರಣದ ಆಧಾರದ ಮೇಲೆ ಗುಂಪುಗಳಿಗೆ ನೀಡಲಾಗುವ ಹಣಕಾಸಿನ ಬೆಂಬಲವನ್ನು ನಿಲ್ಲಿಸಲು ಸರ್ಕಾರ ನಿರ್ಧರಿಸಿದೆ. ಕೊಲ್ಕತ್ತಾ ಹೈಕೋರ್ಟ್ ತೀರ್ಪಿನ ಪ್ರಕಾರ ಸರ್ಕಾರವು ಅಸ್ತಿತ್ವದಲ್ಲಿರುವ ರಾಜ್ಯ ಓಬಿಸಿ ಪಟ್ಟಿಯನ್ನು ರದ್ದುಗೊಳಿಸಿತು ಮತ್ತು ಕೋಟಾ ಅರ್ಹತೆಯನ್ನು ನಿರ್ಧರಿಸಲು ತನಿಖಾ ಸಮಿತಿಯನ್ನು ಸ್ಥಾಪಿಸುತ್ತದೆ ಎಂದು ಪಾಲ್ ಹೇಳಿದರು.

ಹೈಕೋರ್ಟ್ ತೀರ್ಪಿನ ಪ್ರಕಾರ ರಾಜ್ಯ ಸರ್ಕಾರವು ಒಬಿಸಿ ಸಂಬಂಧಿತ ವಿಷಯಗಳಲ್ಲಿ ಕಟ್ಟುನಿಟ್ಟಾಗಿ ಮುಂದುವರಿಯುತ್ತದೆ ಎಂದು ಸಚಿವರು ಮಾಹಿತಿ ನೀಡಿದರು. ಪಶ್ಚಿಮ ಬಂಗಾಳದಲ್ಲಿ ಸಾರ್ವಜನಿಕರಿಗಾಗಿ ಹೊಸ ವಿದ್ಯುತ್ ಬಸ್ಗಳನ್ನು ಪರಿಚಯಿಸಲಾಗುವುದು ಎಂದು ಅವರು ಘೋಷಿಸಿದರು. 15 ದಿನಗಳಿಗೊಮ್ಮೆ ಸಂಪುಟ ಸಭೆ ನಡೆಸಲು ಹೊಸ ಸರ್ಕಾರ ನಿರ್ಧರಿಸಿದೆ.

# ಹೊಸ ಮದ್ಯನೀತಿ ಪ್ರಕರಣದಿಂದ ಹಿಂದೆ ಸರಿದ ನ್ಯಾ. ಸ್ವರ್ಣಕಾಂತಾ ಶರ್ಮಾ

**ನವದೆಹಲಿ, ಮೇ 18:** ಹೊಸ ಮದ್ಯ ನೀತಿಯಲ್ಲಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಹೈಕೋರ್ಟ್‌ನಲ್ಲಿ ಸಿಬಿಐ ಸಲ್ಲಿಸಿದ ಅರ್ಜಿಯನ್ನು ನ್ಯಾಯಮೂರ್ತಿ ಮನೋಜ್ ಜೈನ್ ಅವರು ವಿಚಾರಣೆ ನಡೆಸಲಿದ್ದಾರೆ. ಈ ಹಿಂದೆ ನ್ಯಾಯಮೂರ್ತಿ ಸ್ವರ್ಣಕಾಂತಾ ಶರ್ಮಾ ಅವರು ಈ ಪ್ರಕರಣವನ್ನು ವಿಚಾರಣೆ ನಡೆಸುತ್ತಿದ್ದರು, ಇದನ್ನು ಕೇಜ್ರಿವಾಲ್ ವಿರೋಧಿಸಿದ್ದರು.

ನ್ಯಾಯಮೂರ್ತಿ ಸ್ವರ್ಣಕಾಂತಾ ಶರ್ಮಾ ಅವರು ಪ್ರಕರಣದಿಂದ ಹಿಂದೆ ಸರಿದ ಹಿನ್ನಲೆ ನ್ಯಾಯಮೂರ್ತಿ ಮನೋಜ್ ಜೈನ್ ಅವರು ವಿಚಾರಣೆ ನಡೆಸಲಿದ್ದಾರೆ. ಮಾಜಿ ಸಿಎಂ ಕೇಜ್ರಿವಾಲ್ ಸೇರಿದಂತೆ ಇತರ ಆರೋಪಿಗಳ ಮೇಲೆ ಹೊರಿಸಲಾದ ಆರೋಪಗಳನ್ನು ವಿಚಾರಧೀನ ನ್ಯಾಯಲಯ ತಿರಸ್ಕರಿಸಿ ಪ್ರಕರಣ ರದ್ದುಗೊಳಿಸಿತ್ತು ಈ ಆದೇಶವನ್ನು ಸಿಬಿಐ ಹೈಕೋರ್ಟ್ ನಲ್ಲಿ ಪ್ರಶ್ನಿಸಿದೆ.

ಈ ಅರ್ಜಿಯ ವಿಚಾರಣೆಯನ್ನು ಮಂಗಳವಾರ ನಡೆಸಲು ನಿಗದಿಪಡಿಸಲಾಗಿದೆ. ಈ ಹಿಂದೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಮತ್ತು ಅಡಿಷನಲ್ ಸಾಲಿಸಿಟರ್ ಜನರಲ್ ಎಸ್.ವಿ. ರಾಜು ಅವರು ಕೋರ್ಟ್ನಲ್ಲಿ ವಾದಿಸಿದ್ದರು.



■ ಸಿಬಿಐ ಅರ್ಜಿ ವಿಚಾರಣೆ ನಡೆಸಲಿರುವ ನ್ಯಾ. ಮನೋಜ್ ಜೈನ್

ಆಮ್ ಆದ್ಮಿ ಪಾರ್ಟಿ ಈ ಬದಲಾವಣೆಯನ್ನು ತನ್ನ ಕಾನೂನು ವಿಜಯ ಎಂದು ಬಣ್ಣಿಸಿದೆ. ಕೇಜ್ರಿವಾಲ್ ಅವರು ಸತ್ಯ ವಿಜಯವಾಗಿದೆ ಎಂದು ಹೇಳಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದ ಬೇರೆ ನ್ಯಾಯಂಗ ನಿಂದನೆ ಪ್ರಕರಣಗಳನ್ನು ನ್ಯಾಯಮೂರ್ತಿ ನವೀನ್ ಚಾವ್ಲಾ ಮತ್ತು ನ್ಯಾಯಮೂರ್ತಿ ರವೀಂದರ್ ದುದೇಜಾ ಅವರ ವಿಭಾಗೀಯ ಬೆಂಚ್‌ಗೆ ವರ್ಗಾಯಿಸಲಾಗಿದೆ.

# ಹರಿದ್ವಾರದ ಹರ್ ಕಿ ಪೌರಿ ಘಾಟ್ ಸ್ಫೋಟಿಸುವ ಬೆದರಿಕೆ: ಆರೋಪಿ ಸೆರೆ

**ಹರಿದ್ವಾರ, ಮೇ 18:** ಉತ್ತರಾಖಂಡದ ಪವಿತ್ರನಗರ ಹರಿದ್ವಾರದಲ್ಲಿ ಇಂದು ದೊಡ್ಡ ಭಯದ ವಾತಾವರಣ ಸೃಷ್ಟಿಯಾಗಿತ್ತು. ಹರ್ ಕಿ ಪೌರಿ ಘಾಟ್‌ಗೆ ಬಾಂಬ್ ಸ್ಫೋಟಿಸುವುದಾಗಿ ದೂರವಾಣಿ ಬೆದರಿಕೆ ಬಂದಿದೆ. ಕರೆ ಬೆನ್ನಲ್ಲೆ ಕಾರ್ಯಪ್ರವೃತ್ತರಾದ ಪೊಲೀಸರು ಬೆದರಿಕೆ ಕರೆ ಮಾಡಿದ ವ್ಯಕ್ತಿಯನ್ನು ಪತ್ತೆಹಚ್ಚಿ ವಶಕ್ಕೆ ತೆಗೆದುಕೊಂಡಿದ್ದಾರೆ.

ಪೊಲೀಸರ ಪ್ರಕಾರ, ಮದ್ಯಪಾನ ಮಾಡಿದ್ದ ಯುವಕ 112 ತುರ್ತುಸಂಖ್ಯೆಗೆ ಕರೆಮಾಡಿ, ಹರ್ ಕಿ ಪೌರಿ ಸೇರಿದಂತೆ ಇತರ ಸ್ಥಳಗಳನ್ನು ನಾಲ್ಕು ದಿನಗಳೊಳಗೆ ಬಾಂಬ್ ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ್ದಾನೆ. ಈ ಕರೆಯಿಂದಾಗಿ ಪೊಲೀಸ್ ಇಲಾಖೆಯಲ್ಲಿ ಭಾರಿ ಗೊಂದಲ ಉಂಟಾಗಿತ್ತು. ತಕ್ಷಣವೇ ತಂಡಗಳನ್ನು ರಚಿಸಿ ಆರೋಪಿಯ ಪತ್ತೆ ಆರಂಭಿಸಲಾಯಿತು.

ಕರೆಮಾಡಿದ ಫೋನ್ ಸಂಖ್ಯೆ ಮತ್ತು ಸ್ಥಳವನ್ನು ಟ್ರೇಸ್ ಮಾಡಿದ ಪೊಲೀಸರು, ಪೌರಿ ಜಿಲ್ಲೆಯ ಯಮ್ಕೇಶ್ವರ್ ನಿವಾಸಿ 30 ವರ್ಷದ ಸೋಹನ್ ಸಿಂಗ್ ರಾವತ್ ಎಂಬುವನನ್ನು ಬಂಧಿಸಿದ್ದಾರೆ. ವಿಚಾರಣೆ ವೇಳೆ ಆತ ಮದ್ಯಪಾನದ ಸ್ಥಿತಿಯಲ್ಲಿ ಬೆದರಿಕೆ ಹಾಕಿದ್ದಾಗಿ ಒಪ್ಪಿಕೊಂಡಿದ್ದಾನೆ. ಹರಿದ್ವಾರ ನಗರ ಕೋತ್ವಾಲಿಯಲ್ಲಿ ಪ್ರಕರಣ ದಾಖಲಾಗಿದೆ ಮತ್ತು ಆರೋಪಿಯನ್ನು ನ್ಯಾಯಂಗ ಬಂಧನಕ್ಕೆ ನೀಡಲಾಗಿದೆ.

ಹರಿದ್ವಾರದ ಅತ್ಯಂತ ಪ್ರಸಿದ್ಧ ಮತ್ತು ಪವಿತ್ರ ಘಾಟ್ ಎಂದು ಹೆಸರಾದ ಹರ್ ಕಿ ಪೌರಿ ಲಕ್ಷಾಂತರ ಭಕ್ತರು ಪ್ರತಿದಿನ ಪುಣ್ಯಸ್ನಾನ ಮಾಡುವ ಸ್ಥಳ. ಇಲ್ಲಿ ವಿಷ್ಣುವಿನೊಂದಿಗೆ ಜೊತೆಗೆ ಸಂಬಂಧವಿದೆ ಎಂದು ನಂಬಿಕೆ. ಇಲ್ಲಿ ನಿತ್ಯ ಸಂಜೆ ಗಂಗಾ ಆರತಿ ನಡೆಯುತ್ತದೆ. ಪ್ರತಿ 12 ವರ್ಷಕ್ಕೊಮ್ಮೆ ಕುಂಭ ಮೇಳ ಮತ್ತು 6 ವರ್ಷಕ್ಕೊಮ್ಮೆ ಅರ್ಧ ಕುಂಭ ಮೇಳ ನಡೆಯುವುದರಿಂದ ಇದು ಆಧ್ಯಾತ್ಮಿಕ ಕೇಂದ್ರವಾಗಿದೆ.

# ಉಮರ್ ಖಾಲಿದ್ ಪ್ರಕರಣ: ಜಾಮೀನು ನಿರಾಕರಣೆಗೆ ಸುಪ್ರೀಂ ಕಳವಳ

ನವದೆಹಲಿ, ಮೇ. 18: ಯುಎಪಿಎ (ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ) ಅಡಿಯಲ್ಲಿ ದಾಖಲಾಗುವ ಗಂಭೀರ ಪ್ರಕರಣಗಳಿಗೂ ಜಾಮೀನು ನಿಯಮ, ಜೈಲು ವಿನಾಯಿತಿ ಎಂಬ ಮೂಲಭೂತ ನ್ಯಾಯಿಕ ತತ್ವ ಅನ್ವಯವಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ. ದೆಹಲಿ ಗಲಭೆ ಪ್ರಕರಣದಲ್ಲಿ ಸಾಮಾಜಿಕ ಕಾರ್ಯಕರ್ತ ಉಮರ್ ಖಾಲಿದ್ ಹಾಗೂ ಶರ್ಜೀಲ್ ಇಮಾಮ್ ಅವರಿಗೆ ಜಾಮೀನು ನಿರಾಕರಿಸಿ, ಈ ಹಿಂದೆ ತನ್ನದೇ ದ್ವಿಸದಸ್ಯ ಪೀಠ ನೀಡಿದ್ದ ತೀರ್ಪಿನ ಕುರಿತು ನ್ಯಾಯಮೂರ್ತಿಗಳಾದ ಬಿ.ವಿ. ನಾಗರತ್ನ ಮತ್ತು ಉಜ್ಜಲ್ ಭುಯಾನ್ ಅವರಿದ್ದ ಪೀಠವು ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

ಯೂನಿಯನ್ ಆಫ್ ಇಂಡಿಯಾ ವಿರುದ್ಧ ಕೆ.ಎ. ನಜೀಬ್ ಪ್ರಕರಣದಲ್ಲಿ ಮೂವರು ನ್ಯಾಯಮೂರ್ತಿಗಳಿದ್ದ ಹಿರಿಯ ಪೀಠ ನೀಡಿದ್ದ ತೀರ್ಪನ್ನು ಉಮರ್ ಖಾಲಿದ್ ಪ್ರಕರಣದಲ್ಲಿ ಕಡೆಗಣಿಸಲಾಗಿದೆ ಎಂದು ನ್ಯಾಯಾಲಯ ಆಕ್ಷೇಪಿಸಿದೆ. ವಿಚಾರಣೆಯು ಅನಿರ್ದಿಷ್ಟ ಕಾಲದವರೆಗೆ ವಿಳಂಬವಾದರೆ, ಎಷ್ಟೇ ಗಂಭೀರ ಪ್ರಕರಣವಾದರೂ ಸಂವಿಧಾನದ 21ನೇ ವಿಧಿಯಡಿ ಆರೋಪಿಗಳಿಗೆ ಶೀಘ್ರ ವಿಚಾರಣೆ ಮತ್ತು ಜಾಮೀನಿನ ಹಕ್ಕು ಇರುತ್ತದೆ ಎಂದು ನಜೀಬ್ ಪ್ರಕರಣದಲ್ಲಿ ಸ್ಪಷ್ಟಪಡಿಸಲಾಗಿತ್ತು.

ಇಂತಹ ಮಹತ್ವದ ಹಿರಿಯ ಪೀಠದ ತೀರ್ಪನ್ನು ಸಣ್ಣ ಪೀಠಗಳು (ಇಬ್ಬರು ನ್ಯಾಯಮೂರ್ತಿಗಳ ಪೀಠ) ಕಡೆಗಣಿಸುವಂತಿಲ್ಲ. ಒಂದು ವೇಳೆ ಹಿರಿಯ ಪೀಠದ ತೀರ್ಪಿನ ಬಗ್ಗೆ ಭಿನ್ನಾಭಿಪ್ರಾಯವಿದ್ದರೆ, ಅದನ್ನು ಮುಖ್ಯ ನ್ಯಾಯಮೂರ್ತಿಗಳ ಗಮನಕ್ಕೆ ತಂದು ವಿಸ್ತೃತ ಪೀಠಕ್ಕೆ ವರ್ಗಾಯಿಸಬೇಕೇ ವಿನಃ ನೇರವಾಗಿ ವಿರುದ್ಧ ತೀರ್ಪು ನೀಡುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ತೀರ್ಪುನಲ್ಲಿ ತಿಳಿಸಿದೆ.



ಜಮ್ಮು-ಕಾಶ್ಮೀರದ ಕುಪ್ವಾರ ಮೂಲದ ನಿವಾಸಿ ಸೈಯದ್ ಇಫ್ತಿಕರ್ ಅಂದ್ರಾಬಿ ಎಂಬುವವರಿಗೆ ಜಾಮೀನು ಮಂಜೂರು ಮಾಡುವ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಈ ಮಹತ್ವದ ನಿರೀಕ್ಷಣೆಗಳನ್ನು ದಾಖಲಿಸಿದೆ. ನಾರ್ಕೋ-ಟೆರರಿಸಂ (ಮಾದಕ ದ್ರವ್ಯ ಸಾಗಣೆ ಮತ್ತು ಭಯೋತ್ಪಾದನೆಗೆ ಹಣಕಾಸಿನ ನೆರವು) ಪ್ರಕರಣದಲ್ಲಿ ರಾಷ್ಟ್ರೀಯ ತನಿಖಾ ದಳವು (ಎನ್‌ಐಎ) ಅಂದ್ರಾಬಿ ಅವರನ್ನು 2020ರ ಜೂನ್ 11 ರಂದು ಬಂಧಿಸಿತ್ತು.

ಹಿಂದೆ ಜಮ್ಮು-ಕಾಶ್ಮೀರ ಮತ್ತು ಲಡಾಖ್ ಹೈಕೋರ್ಟ್ ಇವರ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ್ದರಿಂದ ಐದು ವರ್ಷಗಳಿಂದ ಅವರು ವಿಚಾರಣೆಯಿಲ್ಲದೆ ಜೈಲುವಾಸ ಅನುಭವಿಸುತ್ತಿದ್ದರು. ಇದೀಗ ಆರೋಪಗಳು ಎಷ್ಟು ಗಂಭೀರವಾಗಿರುತ್ತವೆಯೋ, ವಿಚಾರಣೆಯೂ ಅಷ್ಟೇ ತ್ವರಿತಗತಿಯಲ್ಲಿ ನಡೆಯಬೇಕು ಎಂದು ಅಭಿಪ್ರಾಯಪಟ್ಟಿರುವ ನ್ಯಾಯಾಲಯವು, ಪಾಸ್ಪೋರ್ಟ್ ಒಪ್ಪಿಸುವಿಕೆ ಹಾಗೂ ಪೊಲೀಸ್ ತನಿಖೆಗೆ ಸಹಕರಿಸುವ ಷರತ್ತುಗಳ ಮೇಲೆ ಅಂದ್ರಾಬಿಗೆ ಜಾಮೀನು ಒದಗಿಸಿದೆ. ಆರೋಪಿ ಪರವಾಗಿ ಹಿರಿಯ ವಕೀಲ ಶಾದಾನ್ ಫರಾಸತ್ ವಾದ ಮಂಡಿಸಿದ್ದರು. ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ (ಎನ್‌ಸಿಆರ್‌ಬಿ) ಅಂಕಿ-ಅಂಶಗಳನ್ನು ಉಲ್ಲೇಖಿಸಿರುವ ನ್ಯಾಯಾಲಯ, ಯುಎಪಿಎ ಪ್ರಕರಣಗಳಲ್ಲಿನ ತೀರಾ ಕಡಿಮೆ ಶಿಕ್ಷೆಯ ಪ್ರಮಾಣದ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದೆ. 2019 ರಿಂದ 2023ರ ವರೆಗಿನ ದತ್ತಾಂಶಗಳ ಪ್ರಕಾರ, ದೇಶಾದ್ಯಂತ ಯುಎಪಿಎ ಅಡಿ ದಾಖಲಾದ ಪ್ರಕರಣಗಳಲ್ಲಿ ಶಿಕ್ಷೆಗೊಳಗಾದವರ ಪ್ರಮಾಣ ಕೇವಲ ಶೇಕಡಾ 1.5 ರಿಂದ 4 ರಷ್ಟು ಮಾತ್ರವಿದ್ದು, ಬರೋಬ್ಬರಿ 94 ರಿಂದ 98ರಷ್ಟು ಪ್ರಕರಣಗಳಲ್ಲಿ ಆರೋಪಿಗಳು ನಿರ್ದೋಷಿಗಳಾಗಿ ಬಿಡುಗಡೆಯಾಗುತ್ತಿದ್ದಾರೆ

# ಬಿಹಾರದ ಮುಜಫ್ಫರ್‌ಪುರ್‌ನಲ್ಲಿ 3 ರೈಲುಗಳ ಮೇಲೆ ಕಲ್ಲೆಸೆತ



■ ಕಿಟಕಿ ಗಾಜುಗಳು ಪುಡಿ, ಪುಡಿ –ಆತಂಕಗೊಂಡ ಪ್ರಯಾಣಿಕರು

**ಪಟ್ನಾ, ಮೇ 18:** ಬಿಹಾರದ ಮುಜಫ್ಫರ್‌ಪುರ್‌ನಲ್ಲಿ ಸೋಮವಾರ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇರಿದಂತೆ ಮೂರು ರೈಲುಗಳ ಮೇಲೆ ದುಷ್ಕರ್ಮಿಗಳು ಕಲ್ಲು ಎಸೆದ ಘಟನೆ ನಡೆದಿದೆ. ಇದರಿಂದಾಗಿ ಹಲವು ಕೋಚ್‌ಗಳ ಕಿಟಕಿ ಗಾಜುಗಳು ಹಾನಿಗೊಳಗಾಗಿ ಪ್ರಯಾಣಿಕರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ.

ಪಾಟಲೀಪುತ್ರ-ಗೋರಖ್ಪುರ್ ವಂದೇ ಭಾರತ್ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 26501) ಮಜೌಲಿಯ ಮತ್ತು ಖಬ್ರಾ ಪ್ರದೇಶಗಳ ಸಮೀಪ ಸಂಚರಿಸುತ್ತಿದ್ದಾಗ ಈ ಘಟನೆ ನಡೆದಿದೆ. ವರದಿಗಳ ಪ್ರಕಾರ, ವಂದೇ ಭಾರತ್‌ನ ಮೂರು ಕೋಚ್‌ಗಳ ಕಿಟಕಿ ಗಾಜುಗಳು ಭಾಗಶಃ ಹಾನಿಗೊಳಗಾಗಿವೆ. ಪ್ರಯಾಣಿಕರು ತಕ್ಷಣ ರೈಲ್ವೇ ಅಧಿಕಾರಿಗಳು ಮತ್ತು ರೈಲ್ವೇ ಪ್ರೊಟೆಕ್ಷನ್ ಫೋರ್ಸ್‌ಗೆ ಮಾಹಿತಿ ನೀಡಿದ್ದಾರೆ. ಈ ಘಟನೆಯ ಸ್ವಲ್ಪ ಸಮಯದ ನಂತರ ಇದೇ ರೈಲು ಮಾರ್ಗದಲ್ಲಿ ಸಂಚರಿಸುತ್ತಿದ್ದ ಇನ್ನು ಎರಡು ರೈಲುಗಳಾದ ಪಾಟ್ನಾ-ಜಯನಗರ್ ಇಂಟರ್‌ಸಿಟಿ ಎಕ್ಸ್‌ಪ್ರೆಸ್ (15550) ಮತ್ತು ಲಿಚ್ಛವಿ ಎಕ್ಸ್‌ಪ್ರೆಸ್ (14006) ಮೇಲೂ ಕಲ್ಲು ಎಸೆತ ನಡೆದಿದೆ. ಈ ಎರಡು ರೈಲುಗಳ ಹಲವು ಕೋಚ್ಗಳ ಕಿಟಕಿ ಗಾಜುಗಳು ಹಾನಿಗೊಳಗಾಗಿವೆ. ಘಟನೆಗೆ ಸಂಬಂಧಿಸಿದಂತೆ ರೈಲ್ವೇ ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ ಮತ್ತು ದುಷ್ಕೃತ್ಯಕ್ಕೆ ಸಂಬಂಧಪಟ್ಟವರನ್ನು ಪತ್ತೆಹಚ್ಚುವ ಪ್ರಯತ್ನ ನಡೆಸುತ್ತಿದ್ದಾರೆ. ಈ ನಡುವೆ ಸಸಾರಾಂ ರೈಲು ನಿಲ್ದಾಣದಲ್ಲಿ ಸಸಾರಾಂನಿಂದ ಪಟ್ನಾಗೆ ಸಂಚರಿಸುತ್ತಿದ್ದ ಪ್ಯಾಸೆಂಜರ್ ರೈಲಿನ ಒಂದು ಕೋಚ್ಗೆ ಬೆಂಕಿ ಬಿದ್ದಿದೆ. ಪ್ರಯಾಣಿಕರು ಮತ್ತು ಪ್ಲಾಟ್ಫಾರ್ಮ್ನಲ್ಲಿದ್ದವರು ಭಯಭೀತರಾಗಿ ಓಡಾಡಿದ್ದರು. ಘಟನೆಯಲ್ಲಿ ಒಂದು ಕೋಚ್ ಸಂಪೂರ್ಣವಾಗಿ ಸುಟ್ಟು ಹೋಗಿದ್ದು, ಅದನ್ನು ರೈಲಿನಿಂದ ಬೇರ್ಪಡಿಸಲಾಗಿದೆ. ಅಗ್ನಿ ಅವಘಡಕ್ಕೆ ಶಾರ್ಟ್ ಸರ್ಕ್ಯೂಟ್ ಕಾರಣವೆಂದು ಎನ್ನಲಾಗಿದ್ದು ಯಾವುದೇ ಪ್ರಾಣ ಹಾನಿಯಾಗಿಲ್ಲ.

### ಸ್ಮೈಲಿಂಗ್ ಬುದ್ಧನಿಗೆ 52 ವರ್ಷ

# ಇಂದಿರಾಗಾಂಧಿ ನಾಯಕತ್ವ ಶ್ಲಾಘಿಸಿದ ಮಲ್ಲಿಕಾರ್ಜುನ ಖರ್ಗೆ



**ನವದೆಹಲಿ, ಮೇ 18:** ಭಾರತದ ಮೊದಲ ಪರಮಾಣು ಪರೀಕ್ಷೆಯ 52ನೇ ವಾರ್ಷಿಕೋತ್ಸವವನ್ನು ಸೋಮವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸ್ಮರಿಸಿದರು,

ಇದು ಸ್ವಾವಲಂಬನೆ ಮತ್ತು ಕಾರ್ಯತಂತ್ರದ ಬಲದತ್ತ ದೇಶದ ಪ್ರಯಾಣದಲ್ಲಿ ಒಂದು ನಿರ್ಣಾಯಕ ಮೈಲಿಗಲ್ಲು ಎಂದು ಬಣ್ಣಿಸಿದರು.

ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ 1974ರ ಐತಿಹಾಸಿಕ ಪರಮಾಣು ಪರೀಕ್ಷೆಯನ್ನು "ಸ್ಮೈಲಿಂಗ್ ಬುದ್ಧ" ಎಂಬ ಸಂಕೇತನಾಮದೊಂದಿಗೆ ನೆನಪಿಸಿಕೊಂಡರು ಮತ್ತು ಸಾಧನೆಯ ಹಿಂದಿನ ವಿಜ್ಞಾನಿಗಳು ಮತ್ತು ನಾಯಕತ್ವಕ್ಕೆ ಗೌರವ ಸಲ್ಲಿಸಿದರು. "52 ವರ್ಷಗಳ ಹಿಂದೆ, ಭಾರತ ತನ್ನ ಮೊದಲ ಪರಮಾಣು ಪರೀಕ್ಷೆಯನ್ನು ನಡೆಸಿತು, "ಸ್ಮೈಲಿಂಗ್ ಬುದ್ಧ" ಎಂಬ ಸಂಕೇತನಾಮದೊಂದಿಗೆ," ಎಂದು ಖರ್ಗೆ ಬರೆದಿದ್ದಾರೆ.

"ನಮ್ಮ ದೇಶದ ಸ್ವಾವಲಂಬನೆ ಮತ್ತು ಕಾರ್ಯತಂತ್ರದ ಸಂಕಲ್ಪದ ಪ್ರಯಾಣದಲ್ಲಿ ಒಂದು ನಿರ್ಣಾಯಕ ಕ್ಷಣ, ಇದು ನಮ್ಮ ವಿಜ್ಞಾನಿಗಳ ಪ್ರತಿಭೆ ಮತ್ತು ಸಮರ್ಪಣೆಯಿಂದ ಸಾಧ್ಯವಾಯಿತು." ಭಾರತದ ಕಾರ್ಯತಂತ್ರ ಮತ್ತು ವೈಜ್ಞಾನಿಕ ವಿಕಾಸದ ನಿರ್ಣಾಯಕ ಅವಧಿಯಲ್ಲಿ ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ "ದಿವ್ಯ ಮತ್ತು ದೂರದೃಷ್ಟಿಯ ನಾಯಕತ್ವ" ಎಂದು ಅವರು ವಿವರಿಸಿದ್ದಕ್ಕಾಗಿ ಕಾಂಗ್ರೆಸ್ ಮುಖ್ಯಸ್ಥರು ಅವರನ್ನು ಹೊಗಳಿದರು. "ಅಸಾಧಾರಣ ರಾಜಕೀಯ ಧೈರ್ಯದಿಂದ ಗುರುತಿಸಲ್ಪಟ್ಟ ಇಂದಿರಾ ಗಾಂಧಿಯವರ ದಿಟ್ಟ ಮತ್ತು ದೂರದೃಷ್ಟಿಯ ನಾಯಕತ್ವವು ನಮ್ಮೆಲ್ಲರಿಗೂ ಸ್ಫೂರ್ತಿ ನೀಡುತ್ತಲೇ ಇರುತ್ತದೆ" ಎಂದು ಅವರು ಹೇಳಿದರು.

ಭಾರತವು ಮೇ 18, 1974 ರಂದು ರಾಜಸ್ಥಾನದ ಪೋಖ್ರಾನ್‌ನಲ್ಲಿ ಇಂದಿರಾ ಗಾಂಧಿಯವರ ನೇತೃತ್ವದಲ್ಲಿ ತನ್ನ ಮೊದಲ ಯಶಸ್ವಿ ಪರಮಾಣು ಪರೀಕ್ಷೆಯನ್ನು ನಡೆಸಿತು. ಆ ಸಮಯದಲ್ಲಿ ಅಧಿಕೃತವಾಗಿ ಶಾಂತಿಯುತ ಪರಮಾಣು ಸ್ಫೋಟ" ಎಂದು ವಿವರಿಸಲ್ಪಟ್ಟ ಈ ಪರೀಕ್ಷೆಯು ಭಾರತವು ಪರಮಾಣು-ಸಮರ್ಥ ರಾಷ್ಟ್ರವಾಗಿ ಹೊರಹೊಮ್ಮಲು ಕಾರಣವಾಯಿತು.

ದಕ್ಷಿಣ ಏಷ್ಯಾದಲ್ಲಿ ಭೌಗೋಳಿಕ ರಾಜಕೀಯ ಭೂದೃಶ್ಯವನ್ನು ಗಮನಾರ್ಹವಾಗಿ ಬದಲಾಯಿಸಿತು. ಭಾರತೀಯ ವಿಜ್ಞಾನಿಗಳು ಮತ್ತು ಸಶಸ್ತ್ರ ಪಡೆಗಳು ನಡೆಸಿದ ಈ ಕಾರ್ಯಾಚರಣೆಯನ್ನು ಭಾರತದ ವೈಜ್ಞಾನಿಕ ಮತ್ತು ಕಾರ್ಯತಂತ್ರದ ಇತಿಹಾಸದಲ್ಲಿ ಒಂದು ಹೆಗ್ಗುರುತು ಸಾಧನೆ ಎಂದು ವ್ಯಾಪಕವಾಗಿ ಪರಿಗಣಿಸಲಾಗಿದೆ.

ವಾರ್ಷಿಕೋತ್ಸವವನ್ನು ಪ್ರತಿ ವರ್ಷ ದೇಶದ ಬೆಳೆಯುತ್ತಿರುವ ತಾಂತ್ರಿಕ ಸಾಮರ್ಥ್ಯಗಳು ಮತ್ತು ಕಾರ್ಯತಂತ್ರದ ಸ್ವಾಯತ್ತತೆಗೆ ಬದ್ಧತೆಯ ಜ್ಞಾಪನೆಯಾಗಿ ಆಚರಿಸಲಾಗುತ್ತದೆ.

# ಮಹಾರಾಷ್ಟ್ರದ 16 ಪರಿಷತ್ ಸ್ಥಾನಗಳಿಗ ಜೂನ್ 18ರಂದು ಮತದಾನ

**ನವದೆಹಲಿ, ಮೇ 18:** ಭಾರತೀಯ ಚುನಾವಣಾ ಆಯೋಗ ಸೋಮವಾರ ಮಹಾರಾಷ್ಟ್ರ ವಿಧಾನ ಪರಿಷತ್ತಿನ 16 ಸ್ಥಾನಗಳಿಗೆ ಚುನಾವಣೆ ಘೋಷಿಸಿದ್ದು, ಜೂನ್ 18 ರಂದು ಮತದಾನ ಮತ್ತು 22 ರಂದು ಮತ ಎಣಿಕೆ ನಡೆಯಲಿದೆ.

ಮಹಾರಾಷ್ಟ್ರದ 16 ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳನ್ನು ಪ್ರತಿನಿಧಿಸುವ ಸದಸ್ಯರ ಅಧಿಕಾರಾವಧಿ 2022 ಮತ್ತು 2025 ರ ನಡುವೆ ವಿವಿಧ ಹಂತಗಳಲ್ಲಿ ಮುಕ್ತಾಯಗೊಂಡಿದೆ ಎಂದು ಆಯೋಗ ಹೇಳಿದೆ. ಆದಾಗ್ಯೂ, ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆ ಮತ್ತು ಮತದಾರರ ಲಭ್ಯತೆಗೆ ಸಂಬಂಧಿಸಿದ ಕಡ್ಡಾಯ ಮಾನದಂಡ ಪೂರೈಸದ ಕಾರಣ ಚುನಾವಣೆ ಮೊದಲೇ ನಡೆಸಲು ಸಾಧ್ಯವಾಗಲಿಲ್ಲ.

ಚುನಾವಣಾ ವೇಳಾಪಟ್ಟಿಯ ಪ್ರಕಾರ, ಚುನಾವಣೆಗೆ ಅಧಿಕೃತ ಅಧಿಸೂಚನೆಯನ್ನು ಮೇ 25 ರಂದು ಹೊರಡಿಸಲಾಗುವುದು. ನಾಮಪತ್ರ ಸಲ್ಲಿಸಲು ಜೂನ್ 1 ಕೊನೆಯ ದಿನಾಂಕವಾಗಿದ್ದು, ಜೂನ್ 2 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅಭ್ಯರ್ಥಿಗಳು ಜೂನ್ 4 ರವರೆಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಜೂನ್ 18 ರಂದು ಬೆಳಿಗ್ಗೆ 8 ರಿಂದ ಸಂಜೆ 4 ರವರೆಗೆ ಎಲ್ಲಾ 16 ಸ್ಥಾನಗಳಿಗೆ ಮತದಾನ ನಡೆಯಲಿದೆ. ಜೂನ್ 25 ರೊಳಗೆ ಸಂಪೂರ್ಣ ಚುನಾವಣಾ ಪ್ರಕ್ರಿಯೆಯು ಪೂರ್ಣಗೊಳ್ಳುವ ನಿರೀಕ್ಷೆಯಿದೆ.




ಚುನಾವಣಾ ಆಯೋಗದಿಂದ ದಿನಾಂಕ ಘೋಷಣೆ

ಚುನಾವಣಾ ವೇಳಾಪಟ್ಟಿ ಘೋಷಣೆಯಾದ ನಂತರ ಸಂಬಂಧಿತ ಕ್ಷೇತ್ರಗಳಲ್ಲಿ ನೀತಿಸಂಹಿತೆ ತಕ್ಷಣದಿಂದ ಜಾರಿಗೆ ಬಂದಿದೆ ಎಂದು ಚುನಾವಣಾ ಆಯೋಗ ಘೋಷಿಸಿದೆ. ಸೊಲ್ಲಾಪುರ, ಅಹಮದ್‌ನಗರ, ಥಾಣೆ, ಜಲಗಾಂವ್, ಸಾಂಗ್ಲಿ-ಕಮ್-ಸತಾರಾ, ನಾಂದೇಡ್, ಯವತಮಾಳ್, ಪುಣೆ, ಭಂಡಾರ-ಕಮ್-ಗೊಂಡಿಯಾ, ರಾಯಗಢ-ಕಮ್-ರತ್ನಾಗಿರಿ-ಕಮ್-ಸಿಂಧುದುರ್ಗ, ನಾಸಿಕ್, ವಾರ್ಧಾ-ಕಮ್-ಚಂದ್ರಾಪುರ-ಕಮ್ ಉಸ್ಮಾನಾಬಾದ್-ಕಮ್-ಲಾತೂರ್-ಕಮ್-ಬೀಡ್, ಪರ್ಭಾನಿ-ಕಮ್-ಹಿಂಗೋಲಿ ಮತ್ತು ಔರಂಗಾಬಾದ್-ಕಮ್-ಜಲ್ನಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ.

**ಮಹಾರಾಷ್ಟ್ರ ವಿಧಾನ ಪರಿಷತ್ತಿಗೆ ನಾಗಪುರದಿಂದ ಉಪಚುನಾವಣೆ:** ಮಹಾರಾಷ್ಟ್ರ ವಿಧಾನ ಪರಿಷತ್ತಿಗೆ ನಾಗ್ಪುರ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಉಪಚುನಾವಣೆಯನ್ನು ಚುನಾವಣಾ ಸಂಸ್ಥೆ ಘೋಷಿಸಿದೆ. ವೇಳಾಪಟ್ಟಿಯ ಪ್ರಕಾರ, ಜೂನ್ 18 ರಂದು ಮತದಾನ ನಡೆಯಲಿದ್ದು, ಜೂನ್ 22 ರಂದು ಫಲಿತಾಂಶ ಪ್ರಕಟವಾಗಲಿದೆ. ನವೆಂಬರ್ 2024 ರಲ್ಲಿ ಮಹಾರಾಷ್ಟ್ರ ವಿಧಾನಸಭೆಗೆ ಆಯ್ಕೆಯಾದ ನಂತರ ಚಂದ್ರಶೇಖರ್ ಬವಾಂಕುಲೆ ಆ ಸ್ಥಾನವನ್ನು ಖಾಲಿ ಮಾಡಿದ ನಂತರ ಈ ಸ್ಥಾನ ತೆರವುಗೊಂಡಿತು.

ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆ ಮತ್ತು ಮತದಾರರ ಲಭ್ಯತೆಗೆ ಸಂಬಂಧಿಸಿದ ಕಡ್ಡಾಯ ಮಾನದಂಡಗಳನ್ನು ಪೂರೈಸದ ಕಾರಣ ಉಪಚುನಾವಣೆಯನ್ನು ಮೊದಲೇ ನಡೆಸಲು ಸಾಧ್ಯವಿಲ್ಲ ಎಂದು ಆಯೋಗ ತಿಳಿಸಿದೆ.

ಆ ಷರತ್ತುಗಳನ್ನು ಈಗ ಪೂರೈಸಿದ ನಂತರ, ನಾಗಪುರ ಸ್ಥಾನಕ್ಕೆ ಜೂನ್ 18, 2026 ರಂದು 16 ವಿಧಾನ ಪರಿಷತ್ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗಳ ಜೊತೆಗೆ ಮತದಾನ ನಡೆಯಲಿದೆ.

# ಮೆಟ್ರೋ ಸೋಮವಾರ: ಬಸ್, ರೈಲಿನಲ್ಲಿ ಪ್ರಯಾಣಿಸಿ ಕಚೇರಿ ಸೇರಿದ ದೆಹಲಿ ಸಿಎಂ, ಸಚಿವರು

**ಮೆಟ್ರೋ ನಿಲ್ದಾಣಕ್ಕೆ ಇ-ರಿಕ್ಷಾದಲ್ಲಿ ತೆರಳಿದ ಶಿಕ್ಷಣ ಸಚಿವ ಆಶಿಶ್ ಸೂದ್**

**ನವದೆಹಲಿ, ಮೇ 18:** ದೆಹಲಿ ಸರ್ಕಾರದ ಇಂಧನ ಸಂರಕ್ಷಣಾ ಕ್ರಮಗಳ ಬಗ್ಗೆ ಉದಾಹರಣೆಯಾಗಿ, ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಅವರ ಸಂಪುಟ ಸಹೋದ್ಯೋಗಿಗಳು ಸೋಮವಾರ ಮೆಟ್ರೋ ರೈಲಿನಲ್ಲಿ ದೆಹಲಿ ಸಚಿವಾಲಯಕ್ಕೆ ಪ್ರಯಾಣ ಬೆಳೆಸಿದರು ಮತ್ತು ದೆಹಲಿ ಸಾರಿಗೆ ನಿಗಮದ ಸಂಪರ್ಕ ಬಸ್‌ನಲ್ಲಿ ಪ್ರಯಾಣಿಸಿದರು.

ಸಿಎಂ ಗುಪ್ತಾ ಮತ್ತು ಸಮಾಜ ಕಲ್ಯಾಣ ಸಚಿವ ರವೀಂದರ್ ಇಂದ್ರಜ್ ಸಿಂಗ್ ಅವರು ಕಾಶ್ಮೀರಿ ಗೇಟ್‌ನಿಂದ ಐಟಿಒ ನಿಲ್ದಾಣಕ್ಕೆ ಮೆಟ್ರೋ ಹತ್ತಿದರು, ಅಲ್ಲಿ ಲೋಕೋಪಯೋಗಿ ಸಚಿವ ಪರ್ವೇಶ್ ವರ್ಮಾ ಅವರೊಂದಿಗೆ ಸೇರಿಕೊಂಡರು. ನಂತರ ಅವರು ಐಟಿಒಗೆ ಫೀಡರ್ ಬಸ್‌ನಲ್ಲಿ ಒಟ್ಟಿಗೆ ಪ್ರಯಾಣಿಸಿದರು, ಜನರೊಂದಿಗೆ ಪ್ರಯಾಣಿಸಿದರು, ಮೇರಾ ಭಾರತ್ ಮೇರಾ ಯೋಗದಾನ ಅಭಿಯಾನದ ಭಾಗವಾಗಿ ಸಾರ್ವಜನಿಕ ಸಾರಿಗೆಯನ್ನು ಬಳಸುವಂತೆ ಸಂದೇಶವನ್ನು ಹರಡಿದರು. ಮೇರಾ ಭಾರತ್ ಮೇರಾ ಯೋಗದಾನ ಅಭಿಯಾನದ ಭಾಗವಾಗಿ ಇಂಧನ ಸಂರಕ್ಷಣೆ



ಮತ್ತು ಸಾರ್ವಜನಿಕ ಸಾರಿಗೆ ಬಳಕೆಯನ್ನು ಉತ್ತೇಜಿಸುವ ಸರ್ಕಾರದ ಹೊಸ ಮೆಟ್ರೋ ಸೋಮವಾರ ಅಭಿಯಾನದ ಭಾಗವಾಗಿ ಸಿಎಂ ಮತ್ತು ಹಲವಾರು ಸಚಿವರು ಸೋಮವಾರ ಮೆಟ್ರೋದಲ್ಲಿ ಪ್ರಯಾಣಿಸಿದರು.

ಮುಖ್ಯಮಂತ್ರಿಯವರ ಮನವಿಯನ್ನು ಅನುಸರಿಸಿ, ಎಲ್ಲಾ ಕ್ಯಾಬಿನೆಟ್ ಸಚಿವರು ಮತ್ತು ಹಿರಿಯ ಸರ್ಕಾರಿ ಅಧಿಕಾರಿಗಳು ಕಚೇರಿಗೆ ಪ್ರಯಾಣಕ್ಕಾಗಿ ಮೆಟ್ರೋ ಮತ್ತು ಡಿಟಿಸಿ ಬಸ್‌ಗಳನ್ನು ಬಳಸಿದರು. ಏತನ್ಮಧ್ಯೆ, ಗುಪ್ತಾ ತಮ್ಮ ನಿವಾಸದಿಂದ ಲೋಕ ನಿವಾಸಕ್ಕೆ ನಡೆದುಕೊಂಡು ಹೋಗುವ ಮೂಲಕ ತಮ್ಮ ದಿನವನ್ನು ಪ್ರಾರಂಭಿಸಿದರು



ಮತ್ತು ಲೆಫ್ಟಿನೆಂಟ್ ಗವರ್ನರ್ ತರಂಜಿತ್ ಸಿಂಗ್ ಸಂಧು ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿದರು.

ಸಭೆಯ ನಂತರ, ಮುಖ್ಯಮಂತ್ರಿಗಳು ಎಲೆಕ್ಟ್ರಿಕ್ ಕಾರನ್ನು ಬಳಸಿಕೊಂಡು ಕಾಶ್ಮೀರಿ ಗೇಟ್ ಮೆಟ್ರೋ ನಿಲ್ದಾಣಕ್ಕೆ ಪ್ರಯಾಣಿಸಿದರು, ಆದರೆ ಅವರ ಬೆಂಗಾವಲು ವಾಹನಗಳನ್ನು ಈಗಾಗಲೇ ಕಡಿಮೆ ಮಾಡಲಾಗಿದೆ, ವಿದ್ಯುತ್ ವಾಹನಗಳಿಗೆ ಆದ್ಯತೆ ನೀಡಲಾಗಿದೆ. ದೆಹಲಿ ಶಿಕ್ಷಣ ಸಚಿವ ಆಶಿಶ್ ಸೂದ್ ಸಿವಿಲ್‌ಲೈನ್ಸ್ ಮೆಟ್ರೋ ನಿಲ್ದಾಣಕ್ಕೆ ಇ-ರಿಕ್ಷಾ ತೆಗೆದುಕೊಂಡು, ನಂತರ ಐಟಿಒಗೆ ಮೆಟ್ರೋ ತೆಗೆದುಕೊಂಡು, ನಂತರ ದೆಹಲಿ ಸಚಿವಾಲಯ ತಲುಪಲು ಶಟಲ್ ಬಸ್ ಹತ್ತಿದರು. ಕಾರ್ಮಿಕ ಸಚಿವ ಕಪಿಲ್ ಮಿಶ್ರಾ ಕೂಡ ಮೆಟ್ರೋ ಫೀಡರ್ ಬಸ್ ಬಳಸಿ ಪ್ರಯಾಣಿಸಿದರು ಮತ್ತು ನಂತರ ಸೋಮವಾರ ಮೆಟ್ರೋ ರೈಲನ್ನು ತೆಗೆದುಕೊಂಡು ಸಾರ್ವಜನಿಕ ಸಾರಿಗೆಯನ್ನು ಗರಿಷ್ಠವಾಗಿ ಬಳಸಿಕೊಳ್ಳುವಂತೆ ಪ್ರೋತ್ಸಾಹಿಸಿದರು.

ವಾರದಲ್ಲಿ ಎರಡು ದಿನಗಳ ಕಾಲ ಮನೆಯಿಂದ ಕೆಲಸ ಮಾಡುವ ವ್ಯವಸ್ಥೆ, ಸರ್ಕಾರಿ ವಾಹನಗಳ ಬಳಕೆಯನ್ನು ಕಡಿಮೆ ಮಾಡುವುದು, ಆನ್ಲೈನ್ ಸಭೆಗಳ ಪ್ರಚಾರ ಮತ್ತು ಸಾರ್ವಜನಿಕ ಸಾರಿಗೆಯ ಗರಿಷ್ಠ ಬಳಕೆ ಸೇರಿದಂತೆ ಹಲವಾರು ಪ್ರಮುಖ ಉಪಕ್ರಮಗಳನ್ನು ಕೈಗೊಳ್ಳುವ ಮೂಲಕ ತಮ್ಮ ಸರ್ಕಾರವು ಮಾದರಿಯಾಗಿದೆ ಎಂದು ಸಿಎಂ ಗುಪ್ತಾ ಹೇಳಿದರು.

ಮುಖ್ಯಮಂತ್ರಿ ಪ್ರಕಾರ, ಮೆಟ್ರೋ ಮತ್ತು ಡಿಟಿಸಿ ಬಸ್‌ಗಳ ಹೆಚ್ಚಿನ ಬಳಕೆಯು ಇಂಧನವನ್ನು ಉಳಿಸಲು ಸಹಾಯ ಮಾಡುತ್ತದೆ, ಆದರೆ ಸಂಚಾರ ದಟ್ಟಣೆ ಮತ್ತು ಮಾಲಿನ್ಯವನ್ನು ಕಡಿಮೆ ಮಾಡುವಲ್ಲಿ ಪರಿಣಾಮಕಾರಿ ಪಾತ್ರ ವಹಿಸುತ್ತದೆ. ಸಾರ್ವಜನಿಕ ಸಾರಿಗೆಯನ್ನು ಗರಿಷ್ಠವಾಗಿ ಬಳಸುವಂತೆ ಮುಖ್ಯಮಂತ್ರಿ ಜನರಿಗೆ ಮನವಿ ಮಾಡಿದ್ದು, ಇದು ಇಂಧನವನ್ನು ಉಳಿಸಲು ಸಹಾಯ ಮಾಡುತ್ತದೆ ಮತ್ತು ರಾಷ್ಟ್ರ ರಾಜಧಾನಿಯ ಮಾಲಿನ್ಯದ ವಿರುದ್ಧದ ಹೋರಾಟಕ್ಕೆ ಕೊಡುಗೆ ನೀಡುತ್ತದೆ ಎಂದು ಹೇಳಿದ್ದಾರೆ.

# 38 ಸಾವಿರ ಮೆ.ಟನ್ ರಸಗೊಬ್ಬರ, 14 ಸಾವಿರ ಟನ್ ಯೂರಿಯಾ ಕೊರತೆ

## ಕೇಂದ್ರದ ಜತೆ ಮಾತುಕತೆ ನಡೆಯುತ್ತಿದೆ: ಸಂವಾದದಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ ಮಾಹಿತಿ

**ಬೆಂಗಳೂರು, ಮೇ 18:** ರಾಜ್ಯದಲ್ಲಿ 38 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಕೊರತೆ ಇದೆ. 14 ಸಾವಿರ ಟನ್ ಯೂರಿಯಾ ಕೊರತೆ ಇದೆ. ಯುದ್ಧದ ಕಾರಣದಿಂದ ಇದು ತಡವಾಗಿದೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಪ್ರೆಸ್‌ಕ್ಲಬ್‌ನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಂವಾದದಲ್ಲಿ ಮಾತನಾಡಿ, ರಸಗೊಬ್ಬರ ಕೊರತೆ ಬಗ್ಗೆ ಕೇಂದ್ರದ ಜೊತೆ ಮಾತುಕತೆ ನಡೆಯುತ್ತಿದೆ. ರಸಗೊಬ್ಬರ ಬಳಕೆ ಕಡಿಮೆ ಬಳಕೆ ಹಾಗೂ ಪರ್ಯಾಯ ಗೊಬ್ಬರ ಮೂಲಗಳ ಬಳಕೆಗೆ ಕರೆ ನೀಡಲಾಗುತ್ತಿದೆ. ಜೂನ್‌ನಲ್ಲಿ ಮುಂಗಾರು ಆರಂಭವಾಗಲಿದೆ. ರಸಗೊಬ್ಬರ ಪೂರೈಕೆ ಸಮಸ್ಯೆ ಬಗ್ಗೆ ಪರಿಣಾಮಕಾರಿ ವಿಜಿಲೆನ್ಸಿ ಮಾಡಲು ಸೂಚಿಸಲಾಗಿದೆ. ಫ್ರೂಟ್ ಐಡಿ ಮೂಲಕ ರೈತರಿಗೆ ಮಾತ್ರ ಗೊಬ್ಬರ ವಿತರಿಸಲು ಕ್ರಮ ವಹಿಸಲಾಗಿದೆ ಎಂದು ಹೇಳಿದರು.

ಪ್ರಸಕ್ತ ಮುಂಗಾರು ಹಂಗಾಮಿಗೆ ಕೇಂದ್ರ ಸರ್ಕಾರದಿಂದ ಒಟ್ಟು 30.05 ಲಕ್ಷ ಮೆಟ್ರಿಕ್ ಟನ್ ವಿವಿಧ ಗ್ರೇಡ್‌ನ ರಸಗೊಬ್ಬರಗಳನ್ನು ಹಂಚಿಕೆ ಮಾಡಲಾಗಿದೆ. (ಯೂರಿಯಾ– 11.10 ಲಕ್ಷ ಮೆ.ಟನ್, ಡಿ.ಎ.ಪಿ. 4 ಲಕ್ಷ ಮೆ.ಟನ್, ಎಂ.ಒ.ಪಿ 2.12 ಲಕ್ಷ ಮೆ.ಟನ್, ಕಾಂಪ್ಲೆಕ್ಸ್ 11.88 ಲಕ್ಷ ಮೆ.ಟನ್, ಎಸ್.ಎಸ್.ಪಿ 0.95 ಲಕ್ಷ ಮೆ.ಟನ್) ಸರಬರಾಜು ಮಾಡಲಾಗಿದೆ. ಕಳೆದ ಸಾಲುಗಳಿಗೆ ಹೋಲಿಸಿದಲ್ಲಿ ಯೂರಿಯಾ ರಸಗೊಬ್ಬರದ ಆರಂಭಿಕ ಶಿಲ್ಕು ತುಂಬಾ ಕಡಿಮೆ ಇದೆ. (2023ರಲ್ಲಿ 3.91 ಲಕ್ಷ ಮೆ.ಟನ್, 2024ರಲ್ಲಿ 5.41 ಲಕ್ಷ ಮೆ.ಟನ್, 2025ರಲ್ಲಿ 3.46 ಲಕ್ಷ ಮೆ.ಟನ್) ಪಸಕ್ತ ಸಾಲಿನಲ್ಲಿ 2.80 ಲಕ್ಷ ಮೆ. ಟನ್ ಮಾತ್ರ ಇದೆ. ಜೊತೆಗೆ ಕೇಂದ್ರ ಸರ್ಕಾರದಿಂದ ಬೇಡಿಕೆಗೆ ಅನುಗುಣವಾಗಿ ಯೂರಿಯಾ ಮತ್ತು ಡಿ.ಎ.ಪಿ. ರಸಗೊಬ್ಬರಗಳು ಸರಬರಾಜು ಆಗಿರುವುದಿಲ್ಲ. ಇದರಿಂದಾಗಿ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರಗಳ ಕೊರತೆಯಾಗುವ ಸಾಧ್ಯತೆ ಇದೆ ಎಂದು ವಿವರಿಸಿದರು.

ಏಪ್ರಿಲ್‌ನಲ್ಲಿ ವಿವಿಧ ಗ್ರೇಡ್‌ನ 4.02 ಲಕ್ಷ ಮೆ.ಟನ್ ರಸಗೊಬ್ಬರ ಬೇಡಿಕೆಗೆ ಕೇಂದ್ರದಿಂದ 2.54 ಲಕ್ಷ ಮೆ.ಟನ್ ಮಾತ್ರ ಸರಬರಾಜಾಗಿದ್ದು, 1.48 ಲಕ್ಷ ಮೆಟನ್ ಕೊರತೆಯಾಗಿದೆ. ಒಟ್ಟಾರೆ,



ಏಪ್ರಿಲ್‌ನಿಂದ ಇಲ್ಲಿಯವರೆಗೆ 8.57 ಲಕ್ಷ ಮೆ. ಟನ್ ವಿವಿಧ ಗ್ರೇಡ್‌ನ ರಸಗೊಬ್ಬರಗಳ ಬೇಡಿಕೆ ಇದ್ದು, 4.31 ಲಕ್ಷ ಮೆ.ಟನ್ ಸರಬರಾಜಾಗಿದ್ದು, 4.25 ಲಕ್ಷ ಮೆ.ಟನ್ ಬಾಕಿ ಇದೆ. ಪ್ರಮುಖವಾಗಿ ಯೂರಿಯಾ 0.79 ಲಕ್ಷ ಮೆ.ಟನ್, ಡಿ.ಎ.ಪಿ 1.17 ಲಕ್ಷ ಮೆ.ಟನ್ ಬಾಕಿ ಇದೆ ಎಂದು ಚಲುವರಾಯಸ್ವಾಮಿ ಅಂಕಿ–ಅಂಶ ಸಮೇತ ಮಾಹಿತಿ ನೀಡಿದರು.

**ರೈತರಿಗೆ ಸ್ಪಂದಿಸುತ್ತಿದ್ದೇವೆ**

ಪ್ರತಿಪಕ್ಷಗಳು ಜನರ ಒಳಿತಾಗಿ ಕೆಲಸ ಮಾಡುತ್ತಿರುವುದನ್ನು ನೋಡಿಲ್ಲ. ಸರ್ಕಾರವನ್ನು ಟೀಕಿಸುವ, ತಿದ್ದುವ ಕೆಲಸವನ್ನು ಮಾಡುತ್ತಿಲ್ಲ. ಬದಲಿಗೆ ವೈಯಕ್ತಿಕ ಟೀಕೆ ಬಿಟ್ಟು ಬೇರೇನನ್ನೂ ಮಾಡುತ್ತಿಲ್ಲ. ವಿಪಕ್ಷಗಳ ಜೊತೆ ಮಾಧ್ಯಮಗಳೂ ಸರ್ಕಾರವನ್ನು ತಿದ್ದುವ, ಸಲಹೆ ನೀಡುವ ಕಾರ್ಯವನ್ನು ಮಾಡಬಹುದು. ಎಲೆಕ್ಟ್ರಾನಿಕ್ ಹಾಗೂ ಸೋಶಿಯಲ್ ಮೀಡಿಯಾ ಯಾವ ದಿಕ್ಕಿನಲ್ಲಿ ಹೋಗುತ್ತಿದೆ ಅನ್ನೋದು ಎಲ್ಲರ ಮುಂದಿದೆ. ಇವೆಲ್ಲವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಕೆಲಸ ಮಾಡಬೇಕಿದೆ. ನಾನು ಕಳೆದ ಮೂರು ವರ್ಷಗಳಿಂದ ರೈತರಿಗೆ ಸ್ಪಂದಿಸಿಕೊಂಡು ಕೆಲಸ ಮಾಡುತ್ತಿದ್ದೇವೆ. ಹಿಂದೆ ಆಗಿದ್ದ ವ್ಯತ್ಯಾಸಗಳನ್ನು ಸರಿಪಡಿಸಿಕೊಳ್ಳುವ ಕೆಲಸವನ್ನು ಮಾಡುತ್ತಿದ್ದೇವೆ. ಹಿಂದಿದ್ದ ಸರ್ಕಾರಗಳು ಸಬ್ಸಿಡಿಗಳ ಹಣಕ್ಕಾಗಿ ಯೋಜನೆ ದುರ್ಬಳಕೆ ಮಾಡಿಕೊಳ್ಳುತ್ತಿದ್ದವು ಎಂಬ ದೂರಿತ್ತು. ಈಗ ಕ್ಯೂಆರ್ ಕೋಡ್ ಜಾರಿ ಮಾಡಿ ಪಾರದರ್ಶಕ ನೇರ ರೈತ ಯೋಜನೆ ಮತ್ತು ಪರಿಕರಗಳ, ಯಂತ್ರಗಳ ಸರಬರಾಜು ಮಾಡಲಾಗುತ್ತಿದೆ. ಅದೂ ಸಬ್ಸಿಡಿ ಮೂಲಕ ಎಂದು ಚೆಲುವರಾಯಸ್ವಾಮಿ ಹೇಳಿದರು. 40 ಲಕ್ಷ ರೈತರಿಗೆ 470 ಕೋಟಿ ಸಹಾಯಧನ ನೀಡಲಾಗಿದೆ. ಕೇಂದ್ರದಿಂದ ನಮ್ಮ ಪಾಲಿನ 20 ಸಾವಿರ ಕೋಟಿ ಅನುದಾನ ಬಾಕಿ ಇದೆ. ಸುಪ್ರೀಂ ಕೋರ್ಟ್ ಆದೇಶದ ಮೇಲೆ ಇಲ್ಲಿಯವರೆಗೆ 3,454 ಕೋಟಿ ರೂ. ಅನುದಾನ ನೀಡಲಾಗಿದೆ ಎಂದರು.

---

## ನಿರುದ್ಯೋಗ ಭಾಗ್ಯ ನೀಡಿದ್ದಕ್ಕಾಗಿಯೇ, ಅಭಿವೃದ್ಧಿ ಶೂನ್ಯಗೊಳಿಸಿದ್ದಕಾಗಿಯೇ ಎಂದು ಪ್ರಶ್ನೆ

# ಸರ್ಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ತರಾಟೆ

**ಬೆಂಗಳೂರು, ಮೇ 18:** ಮೂರು ವರ್ಷದಲ್ಲಿ ಕಾಂಗ್ರೆಸ್ ಸರ್ಕಾರ ಯಾವ ಮಹಾನ್ ಸಾಧನೆ ಮಾಡಿದೆ ಎಂದು ಸಾಧನಾ ಸಮಾವೇಶ ಸಂಘಟಿಸುತ್ತಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ತರಾಟೆಗೆ ತೆಗೆದುಕೊಂಡಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮೂರು ವರ್ಷದ ಆಡಳಿತದಲ್ಲಿ ಲಕ್ಷಾಂತರ ಉದ್ಯೋಗಾಕಾಂಕ್ಷಿಗಳಿಗೆ ನಿರುದ್ಯೋಗ ಭಾಗ್ಯ ಕಲ್ಪಿಸಿದ್ದೇ ಸಾಧನೆಯೇ, ಉತ್ಪನ್ನ ಕ್ಷೇತ್ರವನ್ನು ಉತ್ತೇಜಿಸದೇ ಅಭಿವೃದ್ಧಿಯನ್ನು ಶೂನ್ಯಗೊಳಿಸಿದ್ದು ಸಾಧನೆಯೇ ಎಂದು ಪ್ರಶ್ನಿಸಿದ್ದಾರೆ.



ರೈತ ಕಲ್ಯಾಣಕ್ಕಾಗಿ ಯಾವುದೇ ಯೋಜನೆಯನ್ನು ರೂಪಿಸದೇ ನಿರಂತರವಾಗಿ ರೈತ ಹೋರಾಟಗಳನ್ನು ಹತ್ತಿಕ್ಕಿದ್ದು ನಿಮ ಸಾಧನೆಯೇ?, ಮಹಿಳಾ ಕಲ್ಯಾಣಕ್ಕಾಗಿ ಯಾವುದೇ ಕಾರ್ಯಕ್ರಮವನ್ನೂ ಕೊಡಲಿಲ್ಲ, ಗೃಹಲಕ್ಷ್ಮೀ ಯೋಜನೆಯನ್ನೂ ಸಕಾಲದಲ್ಲಿ ತಲುಪಿಸುತ್ತಿಲ್ಲ, ಮಹಿಳೆಯರ ಮೇಲಿನ ದೌರ್ಜನ್ಯ, ನಿರಂತರ ಅತ್ಯಾಚಾರಗಳು ನಿಮ ಸರ್ಕಾರದಲ್ಲಿ ಸ್ತ್ರೀ ಕುಲವನ್ನು ಕಾಡಿದ ದೌರ್ಭಾಗ್ಯ. ಇದಕ್ಕಾಗಿ ನಿಮ ಸಾಧನಾ ಸಮಾವೇಶವೇ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಸೂರುರಹಿತ ಜನರಿಗಾಗಿ ನಿವೇಶನ ಹಂಚಲಿಲ್ಲ, ಮನೆಗಳನ್ನು ವಿತರಿಸಲಿಲ್ಲ, ಮೈಸೂರು ಮುಡಾದಲ್ಲಿ ಸಾವಿರಾರು ನಿವೇಶನಗಳ ಲೂಟಿಕೋರತನದ ಸೂತ್ರ ವಹಿಸಿದ್ದು ನಿಮ ಸಾಧನೆಯೇ, ಮಹರ್ಷಿ ವಾಲೀಕಿ ನಿಗಮದ ಪರಿಶಿಷ್ಟ ಪಂಗಡದ ಕಲ್ಯಾಣ ಕಾರ್ಯಕ್ಕೆ ಮೀಸಲಾಗಿದ್ದ ಹಣವನ್ನು ಬ್ಯಾಂಕ್ ಖಾತೆಗೆ ಕನ್ನ ಹಾಕಿ, ಲೂಟಿ ಹೊಡೆದದ್ದು, ಪರಿಶಿಷ್ಟ ಜಾತಿ ಪಂಗಡಗಳ ಕಲ್ಯಾಣ ಕಾರ್ಯದ ಹಣವನ್ನು ದುರ್ಬಳಕೆ ಮಾಡಿಕೊಂಡು, ಆ ವರ್ಗವನ್ನು ವಂಚಿಸಿದ್ದು ನಿಮ ಸರ್ಕಾರದ ಸಾಧನೆಯೇ ಎಂದು ವಾಗ್ದಾಳಿ ನಡೆಸಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಕಾರ್ಯಗಳಿಗೆ ಯೋಜನೆ ರೂಪಿಸಲಿಲ್ಲ, ಅಭಿವೃದ್ಧಿ ಕಾರ್ಯಗಳಿಗೆ ಅನುದಾನವನ್ನೂ ಬಿಡುಗಡೆ ಮಾಡದೇ, ಹಿಂದುಳಿದವರ ಕಲ್ಯಾಣ ಕಾರ್ಯಕ್ಕೆ ಕಲ್ಲು ಹಾಕಿದ್ದು ನಿಮ ಸಾಧನೆಯೇ?, ಮೀಸಲಾತಿ ಹೆಸರಿನ ಗೊಂದಲ, ಹಿಂದುಳಿದ ವರ್ಗದ ಆಯೋಗ ಡಾ. ಕಾಂತರಾಜು ಆಯೋಗದ ವರದಿಯನ್ನು ಕಸದ ಬುಟ್ಟಿಗೆ ಎಸೆದು, ಜನರ ತೆರಿಗೆ ಹಣ ರೂ. 165 ಕೋಟಿಗೆ ತರ್ಪಣ ಬಿಟ್ಟಿದ್ದು, ಹೊಸದಾಗಿ ಸಾಮಾಜಿಕ ಸಮೀಕ್ಷೆ ನಡೆಸುತ್ತೇವೆಂದು ರೂ. 400 ಕೋಟಿ ಮೀಸಲಿರಿಸಿಕೊಂಡು ಈ ಕ್ಷಣಕ್ಕೂ ವರದಿ ಬಿಡುಗಡೆ ಮಾಡದಿರುವುದು ನಿಮ್ಮ ಸಾಮಾಜಿಕ ನ್ಯಾಯದ ಸಾಧನೆಯೇ ಎಂದು ಆಕ್ರೋಶ ಹೊರಹಾಕಿದ್ದಾರೆ.

ಒಳಮೀಸಲಾತಿ ಹೆಸರಿನಲ್ಲಿ ಪರಿಶಿಷ್ಟ ಸಮುದಾಯಗಳ ನಡುವೆ ಗೊಂದಲ ಏರ್ಪಡಿಸಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ನೀಡಲಾಗಿದ್ದ ಹೆಚ್ಚುವರಿ ಮೀಸಲಾತಿಯನ್ನು ಉಳಿಸಿ ರಕ್ಷಿಸಿಕೊಡದೇ, ಈ ಸಮುದಾಯಗಳ ಸಾಂವಿಧಾನಿಕ ಹಕ್ಕನ್ನು ಕಸಿದಿದ್ದು ನಿಮ ಸಾಧನೆಯೇ, ಶಾಂತಿ–ಸುವ್ಯವಸ್ಥೆಗೆ ಹೆಸರಾದ ಕನ್ನಡ ನಾಡನ್ನು ಗಾಂಧಿ, ಬಸವಾದಿಗಳ ಚಿಂತನೆ–ಆಶಯಗಳನ್ನು ಮೂಲೆಗುಂಪು ಮಾಡಿ 500 ಮೀಟರ್‌ಗೊಂದು ಮದ್ಯದಂಗಡಿ ತೆರೆದು ಕರ್ನಾಟಕವನ್ನು ಕುಡುಕರ ರಾಜ್ಯವನ್ನಾಗಿಸಿದ್ದು ನಿಮ ಸಾಧನೆಯೇ ಎಂದು ವ್ಯಂಗ್ಯವಾಡಿದ್ದಾರೆ.

> ■ 3 ವರ್ಷದಲ್ಲಿ ಏನು ಸಾಧನೆ ಮಾಡಿದೆ ಎಂದು ಸಮಾವೇಶ?

ಉದ್ಯೋಗವಂಚಿತ ಯುವಜನರ ಬದುಕನ್ನು ಅಂಧಕಾರದಲ್ಲಿ ಮುಳುಗಿಸಿದ ನೀವು ಡ್ರಗ್ ವ್ಯಸನಿಗಳಾಗಿಸುವಂತೆ ಮುಖ್ಯಮಂತ್ರಿಗಳ ತವರು ಜಿಲ್ಲೆ ಮೈಸೂರಿನಲ್ಲಿ ಡ್ರಗ್ ಫ್ಯಾಕ್ಟರಿಯೇ ತೆರೆದುಕೊಂಡಿದ್ದು, ರಾಜ್ಯದ ಉದ್ದಗಲಕ್ಕೂ ಡ್ರಗ್ ಮಾಫಿಯಾ ಅಟ್ಟಹಾಸ ಮೆರೆಯುತ್ತಿದೆ. ಕರುನಾಡು ವ್ಯಸನಿಗಳ ಬೀಡಾಗಿದೆ. ಲಕ್ಷಾಂತರ ಕುಟುಂಬಗಳು ಇದರಿಂದ ಬೀದಿಗೆ ಬೀಳುವಂತಾಗಿರುವುದು ನಿಮ ಸಾಧನೆಯೇ? ಎಂದು ಆರೋಪಿಸಿದ್ದಾರೆ.

ಸರ್ಕಾರದ ಪಾವತಿಯನ್ನು ನಂಬಿ ಗುತ್ತಿಗೆ ಪೂರೈಸಿದ ಗುತ್ತಿಗೆದಾರರ ಕತ್ತು ಹಿಸುಕಲು ಕಮೀಷನ್ ಮುಷ್ಠಿಯನ್ನು ಬಳಸಿ, ಗುತ್ತಿಗೆದಾರರ ಬದುಕನ್ನು ಹೀನಾಯ ಸ್ಥಿತಿಗೆ ತಳ್ಳಿ, ಪರ್ಸಂಟೇಜ್ ಸರ್ಕಾರ ಎಂದು ಕರೆಸಿಕೊಂಡಿದ್ದು ನಿಮ ಸರ್ಕಾರದ ಸಾಧನೆಯೇ?, ನೀವು ಘೋಷಿಸಿರುವ ಸಾಧನೆಗಳೆಲ್ಲವೂ ಕಾಗದದ ಮೇಲಷ್ಟೇ ಜಾಹಿರಾತಿನ ಫಲಕಗಳ ಮೇಲಷ್ಟೇ ಕಾಣುತ್ತಿದೆ ಎಂದು ವಿಜಯೇಂದ್ರ ಸರ್ಕಾರದ ವಿರುದ್ಧ ಟೀಕಾಪ್ರಹಾರ ನಡೆಸಿದ್ದಾರೆ.

---

## ದೇಶದ ಆರ್ಥಿಕ ವ್ಯವಸ್ಥೆ ಹಾಳಾಗಿದ್ದರೆ ಪ್ರಧಾನಿಯೇ ಕಾರಣ

# ದೇಶದ ಜನರ ಕ್ಷಮೆಕೇಳಲಿ: ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್ ಆಗ್ರಹ

**ಬೆಂಗಳೂರು, ಮೇ 18:** ಸಮೃದ್ಧವಾಗಿದ್ದ, ಶಕ್ತಿಯುತವಾಗಿದ್ದ ಇಡೀ ವಿಶ್ವದಲ್ಲೇ ಬಲಿಷ್ಠವಾದ ಆರ್ಥಿಕ ವ್ಯವಸ್ಥೆ ಹಾಳಾಗಿದೆ ಅಂದರೆ ಅದಕ್ಕೆ ಪ್ರಧಾನಮಂತ್ರಿಯೇ ಕಾರಣ. ಅವರು ಯಾವ ಅರ್ಥದಲ್ಲಿ ಮಾತನಾಡಿದ್ದಾರೆ ಎಂದು ಸ್ಪಷ್ಟನೆ ನೀಡಬೇಕು ಹಾಗೂ ಈ ದೇಶದ ಜನರ ಕ್ಷಮೆ ಯಾಚನೆ ಮಾಡಬೇಕು ಎಂದು ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿರಂತರ ಯುದ್ಧಗಳು ಮತ್ತು ಜಾಗತಿಕ ಅಸ್ಥಿರತೆಯು ದಶಕಗಳ ಅಭಿವೃದ್ಧಿಯನ್ನು ಹಿಮ್ಮೆಟ್ಟಿಸಬಹುದು ಮತ್ತು ದೊಡ್ಡ ಜನಸಂಖ್ಯೆಯನ್ನು ಮತ್ತೆ ಬಡತನಕ್ಕೆ ತಳ್ಳಬಹುದು ಎನ್ನುವ ಬಗ್ಗೆ ಪ್ರಧಾನಿ ನರೇಂದ್ರ ಅವರು ಸ್ಪಷ್ಟನೆ ನೀಡಬೇಕು. ಪ್ರಧಾನ ಮಂತ್ರಿಗಳು ಯಾವ ಅರ್ಥದಲ್ಲಿ ಬಡತನದ ಬಗ್ಗೆ ಹೇಳಿದ್ದಾರೆ. ಹಾಗೂ ಈ ಎಲ್ಲಾ ವಿಚಾರಗಳನ್ನು ಗಮನದಲ್ಲಿಟ್ಟುಕೊಂಡು ಜನರಿಗೆ ಮಾಹಿತಿ ಕೊಡಬೇಕು ಎಂದು ಒತ್ತಾಯಿಸುತ್ತೇನೆ ಎಂದರು.

ದೇಶದ ಚುಕ್ಕಾಣಿಯನ್ನು ಪ್ರಧಾನಿ ಮೋದಿಯವರು ಹಿಡಿದು ಹನ್ನೆರಡು ವರ್ಷವಾಗಿದೆ. ಈ ಹಿಂದಿನ ಆಡಳಿತಕ್ಕೆ ಹೋಲಿಸಿದಾಗ ಇಲ್ಲಿಯವರೆಗೆ ಹೆಚ್ಚುವರಿಯಾಗಿ ಸುಮಾರು 45 ಲಕ್ಷ ಕೋಟಿ ಹಣವನ್ನು ಪೆಟ್ರೋಲ್ ಮತ್ತು ಡೀಸೆಲ್, ಗ್ಯಾಸ್ ಬೆಲೆ ಏರಿಕೆಯಿಂದ ಪಡೆದಿದ್ದಾರೆ ಎಂದರು.

ಒಂದೆರಡು ಮೂರು ಕಂಪನಿಗಳಿಗೆ ರಕ್ಷಣೆ ಕೊಡಬೇಕು ಎಂದು ಬೆಲೆ ಏರಿಕೆ



ಮಾಡಿದ್ದಾರೆ. ಜನರು ಎಚ್ಚೆತ್ತುಕೊಂಡಿಲ್ಲ. ನೀವು ಬಡತನದ ದವಡೆಗೆ ಸಿಲುಕುವಿರಿ ಎನ್ನುವ ಸಂದೇಶ ನೀಡಿರುವುದು ನೋಡಿದರೆ ನಾವೆಲ್ಲರೂ ಕೂಡ ತಲೆತಗ್ಗಿಸುವ ವಿಚಾರ ಎಂದು ಹೇಳಿದರು.

ರಾಹುಲ್ ಗಾಂಧಿ ವಿದೇಶದಲ್ಲಿ ಮಾತನಾಡಿದಾಗ ದೇಶದ್ರೋಹಿ ಎನ್ನುತ್ತಾರೆ. ಸ್ವತಃ ಪ್ರಧಾನಮಂತ್ರಿಗಳೇ ವಿದೇಶಿ ನೆಲದಲ್ಲಿ ನಿಂತು ಬಡತನ ಎದುರಾಗಿದೆ ಅಂತ ಮಾತನಾಡಿದ್ದಾರೆ ಎಂದಾಗ, ಯಾವ ದೃಷ್ಟಿಕೋನದಲ್ಲಿ ಅವರು ಹೇಳಿದ್ದಾರೆ ಎಂಬ ಸ್ಪಷ್ಟೀಕರಣ ಕೊಡಬೇಕು. ಅವರು ನೆದರ್ಲ್ಯಾಂಡ್ಸ್ ಅವರನ್ನ ಉದ್ದೇಶಿಸಿ ಮಾತಾಡಿದ್ರಾ ಅಥವಾ ಭಾರತೀಯರಿಗೆ ಅಲ್ಲಿಂದ ಒಂದು ಸಂದೇಶ ಕೊಟ್ಟರೇ ಅದನ್ನೂ ಹೇಳಬೇಕು ಎಂದು ತಿರುಗೇಟು ನೀಡಿದರು.

ರಾಹುಲ್ ಗಾಂಧಿಯವರು ಏನೇ ಮಾತಾಡಿದ್ರು ಕೂಡ ಆರೋಪ ಮಾಡುತ್ತಾರೆ. ಭಾರತೀಯರ ಪರಿಸ್ಥಿತಿ ಇಂತಹ ಶೋಚನೀಯ ಸ್ಥಿತಿಗೆ ಹೋಗಿದೆಯೇ ಎನ್ನುವ ಬಗ್ಗೆಯೂ ಚಿಂತನೆ ಮಾಡಬೇಕಾಗಿದೆ. ನನ್ನ ಪ್ರಕಾರ ಶೋಚನೀಯ ಪರಿಸ್ಥಿತಿಗೆ ನಾವ್ಯಾರು ಕೂಡ ಹೋಗಿಲ್ಲ. ಅವರು ಕೊರೊನಾ ಸಂದರ್ಭದಲ್ಲಿ ಪ್ರಧಾನಿ ಕೊಟ್ಟ ಕರೆಗೆ ಈ ರಾಷ್ಟ್ರದ ಜನ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದರು.

ಈಗ ಏಕಾಏಕಿ ಒಂದಷ್ಟು ಕಠಿಣ ಕ್ರಮ, ಒಂದಷ್ಟು ಶಿಸ್ತು ಪಾಲನೆ ಮಾಡುವಂತೆ ಮನವಿ ಮಾಡಿದ್ದಾರೆ. ಅವರು ಯುದ್ಧ ಪ್ರಾರಂಭವಾದ ದಿನವೇ ಎಚ್ಚರಿಕೆ ವಹಿಸಬೇಕಾಗಿತ್ತು. ಅವತ್ತಿಂದ ಎಚ್ಚರಿಕೆ ವಹಿಸದೆ ಈಗ ಹೇಳುತ್ತಿರುವುದು ಅನುಮಾನಗಳನ್ನ ಹುಟ್ಟು ಹಾಕಿದೆ. ಅವರ ಸ್ನೇಹಿತರಿಗೆ, ಹಿತೈಷಿ ಕಂಪೆನಿಗಳಿಗೆ ನಷ್ಟವಾಗುತ್ತೆ ಅಂತ ಹೇಳಿ ಭಾರತೀಯರ ಮೇಲೆ ಹೊರೆ ಹಾಕ್ತಾ ಇದ್ದಾರೆ ಎಂದು ತಿವಿದರು.

ಒಂದು ದೇಶ ಒಂದು ಚುನಾವಣೆ ಜಾರಿಗೆ ಕಾಂಗ್ರೆಸ್ ವಿರೋಧದ ಬಗ್ಗೆ ಪ್ರತಿಕ್ರಿಯಿಸಿ, ಕಾಂಗ್ರೆಸ್ ಪಕ್ಷದ ನಿಲುವು ಏನು ಎಂದು ಸಾರ್ವಜನಿಕರಿಗೆ ಸ್ಪಷ್ಟತೆ ಕೊಡಬೇಕು. ವಿವಿಧ ರಾಜ್ಯಗಳಲ್ಲಿ ವಿವಿಧ ಸಮಯಕ್ಕೆ ಚುನಾವಣೆಗಳು ನಡೀತಾ ಇದೆ. ಒಂದು ದೇಶ ಒಂದು ಚುನಾವಣೆ ಎಂದು ಹೇಳುವುದು ಸುಲಭದ ಮಾತು. ಪ್ರಜಾಪ್ರಭುತ್ವದಲ್ಲಿ ಆಯ್ಕೆಯಾದಂತ ಸರ್ಕಾರಗಳು ಏನು ಮಾಡಬೇಕು ಅನ್ನುವುದಕ್ಕೆ ಸ್ಪಷ್ಟೀಕರಣ ಕೊಟ್ಟರೆ ಇದು ಒಂದು ಹಂತಕ್ಕೆ ಬರುತ್ತದೆ ಎಂದು ಹೇಳಿದರು.

---

## ವೇತನ ಪರಿಷ್ಕರಣೆಗೆ ಅಸಮಾಧಾನ । ರಾಜ್ಯದ ನಾಲ್ಕು ನಿಗಮಗಳ ಬಸ್ ಸೇವೆ ಸ್ಥಗಿತ ಸಾಧ್ಯತೆ

# ನಾಳೆಯಿಂದ ಸಾರಿಗೆ ನೌಕರರ ಅನಿರ್ದಿಷ್ಟಾವಧಿ ಮುಷ್ಕರ

**ಬೆಂಗಳೂರು, ಮೇ 18:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಾರಿಗೆ ನೌಕರರು ಮೇ 20ರಿಂದ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಬುಧವಾರದಿಂದ ಬಿಎಂಟಿಸಿ ಮತ್ತು ಕೆಎಸ್‌ಆರ್‌ಟಿಸಿ ಸೇರಿದಂತೆ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಬಸ್ ಸೇವೆ ಸ್ಥಗಿತಗೊಳ್ಳುವ ಸಾಧ್ಯತೆಯಿದೆ.

ಸಾರಿಗೆ ನೌಕರರ ಒಕ್ಕೂಟಗಳು ಜಂಟಿಯಾಗಿ ಪ್ರತಿಭಟನೆ ಹಾಗೂ ಮುಷ್ಕರಕ್ಕೆ ಕರೆ ನೀಡಿದ್ದು ಮುಷ್ಕರ ನಡೆದರೆ ಸರ್ಕಾರಿ ಸಾರಿಗೆ ಸಂಚಾರದಲ್ಲಿ ವ್ಯತ್ಯಯವಾಗುವ ಸಾಧ್ಯತೆ ಇದೆ.ನೌಕರರು ಶೇ.25ರ ವೇತನ ಪರಿಷ್ಕರಣೆಗೆ ಪಟ್ಟು ಹಿಡಿದಿದ್ದು, 38 ತಿಂಗಳ ವೇತನ ಹಿಂಬಾಕಿ ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ. ಆದರೆ, ರಾಜ್ಯ ಸರ್ಕಾರ ಸದ್ಯಕ್ಕೆ ಶೇ 12.5 ವೇತನ ಪರಿಷ್ಕರಣೆಗೆ ಒಪ್ಪಿದೆ. ಅಲ್ಲದೆ, 26 ತಿಂಗಳ ವೇತನ ಹಿಂಬಾಕಿಯ ಮೊದಲ ಕಂತಾಗಿ 450 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ಈ ಹಿನ್ನೆಲೆಯಲ್ಲಿ ನೌಕರರು ಸರ್ಕಾರದ ಈ ನಿರ್ಧಾರಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದು, ತಮ್ಮ ಬೇಡಿಕೆಗಳು ಈಡೇರದ ಹೊರತು




ಮುಷ್ಕರದಿಂದ ಹಿಂದೆ ಸರಿಯುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**ಮುಷ್ಕರದಲ್ಲಿ ಪಾಲ್ಗೊಂಡರೆ ವೇತನ ಕಡಿತದ ಜತೆಗೆ ಶಿಸ್ತುಕ್ರಮ ಎಚ್ಚರಿಕೆ**

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬುಧವಾರದಿಂದ ನಡೆಸಲಿರುವ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ಕಡಿವಾಣ ಹಾಕಲು ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮುಂದಾಗಿದ್ದು, ಕೆಲಸ ಮಾಡದಿದ್ದರೆ ವೇತನವಿಲ್ಲ ಎಂದು ನೌಕರರಿಗೆ ಖಡಕ್ ಎಚ್ಚರಿಕೆ ನೀಡಿದೆ. ಮುಷ್ಕರದಲ್ಲಿ ಭಾಗವಹಿಸುವ ನೌಕರರ ವಿರುದ್ಧ ಕೆಲಸ ಮಾಡದಿದ್ದಾಗ ವೇತನವಿಲ್ಲ" ತತ್ವದಡಿ ಕಠಿಣ ಶಿಸ್ತುಕ್ರಮ ಜರುಗಿಸಲಾಗುವುದು ಜೊತೆಗೆ ಮುಷ್ಕರದಲ್ಲಿ ಪಾಲ್ಗೊಂಡರೆ ವೇತನ ಕಡಿತ ಮಾಡುವುದಾಗಿ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಅಕ್ರಂ ಪಾಷಾ ಅಧಿಕೃತ ಆದೇಶ ಹೊರಡಿಸಿದ್ದಾರೆ. ಮೇ 20ರಂದು ಸಾರಿಗೆ ನೌಕರರು ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆ ನೌಕರರಿಗೆ ರಾಜ್ಯ ಸರ್ಕಾರ ಕಠಿಣ ಎಚ್ಚರಿಕೆ ನೀಡಿದೆ. ಬುಧವಾರ ಮುಷ್ಕರದಲ್ಲಿ ಭಾಗಿಯಾಗದಂತೆ ಸಿಬ್ಬಂದಿಗೆ ಸೂಚಿಸಿದ್ದು, ಯಾವುದೇ ಮುಷ್ಕರ ಮಾಡುವಂತಿಲ್ಲ. ಮುಷ್ಕರಕ್ಕೆ ಬೆಂಬಲವನ್ನು ಸೂಚಿಸುವಂತಿಲ್ಲ ಎಂದು ಹೇಳಿದೆ. ಬುಧವಾರ ಕೆಲಸಕ್ಕೆ ಹಾಜರಾಗದಿದ್ದರೆ 'ನೋ ವರ್ಕ್ ನೋ ಪೇ' ಎಂದು ಸಿಬ್ಬಂದಿಗೆ ತಿಳಿಸಲಾಗಿದ್ದು, ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕೆಎಸ್‌ಆರ್‌ಟಿಸಿ ಎಂಡಿ ಅಕ್ರಂ ಪಾಷಾ ಆದೇಶಿಸಿದ್ದಾರೆ. ಸಾರಿಗೆ ನೌಕರರು ಮುಷ್ಕರಕ್ಕೆ ಕರೆನೀಡಿರುವ ಕಾರಣ ಮೇ 20ರಂದು ಬಸ್ ಸಂಚಾರದಲ್ಲಿ ವ್ಯತ್ಯಯ ಆಗದಂತೆ ಕ್ರಮ ಕೈಗೊಳ್ಳಬೇಕು. ಸಿಬ್ಬಂದಿಗೆ ಯಾವುದೇ ರೀತಿಯ ರಜೆ ಮಂಜೂರು ಮಾಡಬಾರದು. ಕೆಲಸಕ್ಕೆ ಗೈರಾಗುವ ನೌಕರರ ವಿರುದ್ಧ ನೋ ವರ್ಕ್ ನೋ ಪೇ ಜಾರಿ ಮಾಡಿ. ಅನಿವಾರ್ಯ ಸಂದರ್ಭದಲ್ಲಿ ಅಥವಾ ಅವಶ್ಯವಿದ್ದಲ್ಲಿ, ನೌಕರರ ವಾರದ ರಜೆಯನ್ನು ರದ್ದುಗೊಳಿಸಿ ಕರ್ತವ್ಯದ ಮೇಲೆ ನಿಯೋಜಿಸುವಂತೆ ಸೂಚನೆ ನೀಡಿದ್ದಾರೆ.

### ತಾರ್ಕಿಕ ಅಂತ್ಯ ಕಾಣದೆ ಸಂಧಾನ ಸಭೆ ವಿಫಲ

ಮೇ 20ರ ನಡೆಸಲು ಮುಂದಾಗಿರುವ ಸಾರಿಗೆ ನೌಕರರ ಮುಷ್ಕರವನ್ನು ತಡೆಯಲು ಸರ್ಕಾರ ನಡೆಸಿದ ಸಂಧಾನ ಸಭೆಯು ವಿಫಲಗೊಂಡಿದೆ. ಕಳೆದ ಕೆಲವು ದಿನಗಳಿಂದ ಸಾರಿಗೆ ನೌಕರರ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸರ್ಕಾರದ ಉನ್ನತ ಅಧಿಕಾರಿಗಳ ನಡುವೆ ಮಾತುಕತೆ ನಡೆದಿತ್ತು. ಆದರೆ, ನೌಕರರ ಪ್ರಮುಖ ಬೇಡಿಕೆಗಳಾದ ವೇತನ ಪರಿಷ್ಕರಣೆ ಮತ್ತು ಬಾಕಿ ಸೌಲಭ್ಯಗಳ ವಿತರಣೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಯಾವುದೇ ಸ್ಪಷ್ಟ ಹಾಗೂ ಸಕಾರಾತ್ಮಕ ಭರವಸೆ ಸಿಗದ ಕಾರಣ ಈ ಸಂಧಾನ ಸಭೆಯು ಯಾವುದೇ ತಾರ್ಕಿಕ ಅಂತ್ಯ ಕಾಣದೆ ಮುಕ್ತಾಯಗೊಂಡಿದೆ ಎನ್ನಲಾಗಿದೆ. ಸಂಧಾನ ಸಭೆ ವಿಫಲವಾಗಿದ್ದರೂ.

ಸಾರಿಗೆ ನೌಕರರ ಜಂಟಿ ಕ್ರಿಯಾಸಮಿತಿಯ ಮುಖಂಡರು ಸದ್ಯಕ್ಕೆ 'ಕಾದುನೋಡುವ ತಂತ್ರ'ಕ್ಕೆ ಶರಣಾಗಿದ್ದಾರೆ. ಸಾರ್ವಜನಿಕರಿಗೆ ತೊಂದರೆಯಾಗಬಾರದು ಎನ್ನುವ ನಿಟ್ಟಿನಲ್ಲಿ ಸರ್ಕಾರ ಉನ್ನತಮಟ್ಟದ ಸಭೆ ಕರೆದರೆ ಭಾಗವಹಿಸಲು ತಾವು ಸಿದ್ಧರಿರುವುದಾಗಿ ಅವರು ತಿಳಿಸಿದ್ದಾರೆ. ಸಾರಿಗೆ ಸಚಿವರ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಾಗಲಿ ಅಥವಾ ಮುಖ್ಯಮಂತ್ರಿಗಳೇ ಖುದ್ದಾಗಿ ಸಭೆ ನಡೆಸಿದರೂ ಅದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಲು ಸಾರಿಗೆ ಮುಖಂಡರು ಒಲವು ತೋರಿದ್ದಾರೆ. ಸರ್ಕಾರದ ಕಡೆಯಿಂದ ಬರುವ ಅಧಿಕೃತ ಆಹ್ವಾನ ಅಥವಾ ನಿರ್ಧಾರದ ಆಧಾರದ ಮೇಲೆ ಮುಷ್ಕರದ ಅಂತಿಮ ಸ್ವರೂಪ ನಿರ್ಧಾರವಾಗಲಿದೆ.

### ಜಂಟಿ ಕ್ರಿಯಾಸಮಿತಿಯಿಂದ ಪ.ಜಾತಿ, ಪಂಗಡ ನೌಕರರ ಸಂಘ ಹೊರಕ್ಕೆ, ಸಾರಿಗೆ ನೌಕರರ ಮುಷ್ಕರಕ್ಕೆ ಹಿನ್ನಡೆ

ಮೇ 20ರಿಂದ ನಡೆಯಬೇಕಿದ್ದ ಸಾರಿಗೆ ನೌಕರರ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಹಿನ್ನಡೆಯಾಗಿದೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯು ಬೃಹತ್ ಮುಷ್ಕರಕ್ಕೆ ಕರೆ ನೀಡಿತ್ತು. ಆದರೆ, ಈ ಪ್ರತಿಭಟನೆಯಿಂದ 'ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ನೌಕರರ ಸಂಘ'ವು ದಿಢೀರನೆ ಹಿಂದೆ ಸರಿದಿದೆ. ಈ ಕುರಿತು ಸೋಮವಾರ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರಿಗೆ ಅಧಿಕೃತ ಪತ್ರ ಬರೆದಿರುವ ಸಂಘವು, ತಾವು ಜಂಟಿ ಕ್ರಿಯಾ ಸಮಿತಿಯಿಂದ ಹೊರಬರುತ್ತಿರುವುದಾಗಿ ಸ್ಪಷ್ಟಪಡಿಸಿದೆ. ಸಂಘದ ರಾಜ್ಯಾಧ್ಯಕ್ಷ ಎಫ್.ಎಚ್. ಜಕ್ಕಪ್ಪನವರ ಅವರ ಆದೇಶದ ಮೇರೆಗೆ, ರಾಜ್ಯ ಕಾರ್ಯಾಧ್ಯಕ್ಷ ರವಿಪ್ರಕಾಶ್ ಎಂ. ಮತ್ತು ರಾಜ್ಯ ಪ್ರಧಾನ ಕಾರ್ಯದರ್ಶಿ ವೆಂಕಟರವಣಪ್ಪ ಅವರು ಈ ನಿರ್ಣಾಯಕ ಪತ್ರಕ್ಕೆ ಸಹಿ ಹಾಕಿದ್ದಾರೆ. ಇದು ಸಾರಿಗೆ ಇಲಾಖೆ ಹಾಗೂ ರಾಜ್ಯ ಸರ್ಕಾರಕ್ಕೆ ದೊಡ್ಡ ಮಟ್ಟದ ಸಮಾಧಾನ ನೀಡಿದೆ. "ನಮ್ಮ ಸಂಘವು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯ ಭಾಗವಾಗಿದ್ದು, ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ದಿನಾಂಕ 20.05.2026ರಂದು ಅನಿರ್ದಿಷ್ಟಾವಧಿ ಮುಷ್ಕರ ಹೂಡಲು ತೀರ್ಮಾನಿಸಲಾಗಿತ್ತು. ಆದರೆ, ನಮ್ಮ ಸಂಘದ ರಾಜ್ಯಾಧ್ಯಕ್ಷರ ಆದೇಶದ ಮೇರೆಗೆ ನಮ್ಮ ಸಂಘವು ಈ ಕೂಡಲೇ ಜಂಟಿ ಕ್ರಿಯಾ ಸಮಿತಿಯಿಂದ ನಿರ್ಗಮಿಸುತ್ತಿದ್ದೇವೆ. ಜಂಟಿ ಕ್ರಿಯಾ ಸಮಿತಿ ಹಮ್ಮಿಕೊಂಡಿರುವ ಮುಷ್ಕರದಲ್ಲಿ ನಮ್ಮ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಈ ಕ್ಷಣದಿಂದ ಭಾಗವಹಿಸುವುದಿಲ್ಲ" ಎಂದು ಕಟ್ಟುನಿಟ್ಟಾಗಿ ಪತ್ರದಲ್ಲಿ ವಿವರಿಸಲಾಗಿದೆ.

---

# ಬೆಂಗಳೂರಿನಲ್ಲಿ ವರುಣನ ಆರ್ಭಟ

## ವಾಹನ ಸವಾರರು, ಜನರ ಪರದಾಟ

**ಬೆಂಗಳೂರು, ಮೇ 18:** ರಾಜಧಾನಿ ಬೆಂಗಳೂರಿನಲ್ಲಿ ವರುಣನ ಆರ್ಭಟ ಜೋರಾಗಿದ್ದು, ನಗರದ ಪ್ರಮುಖ ಭಾಗಗಳಲ್ಲಿ ಧಾರಾಕಾರ ಮಳೆ ಸುರಿಯುತ್ತಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಗಂಟೆಗೆ 40ರಿಂದ 50 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ ಬೆನ್ನಲ್ಲೇ, ಸಿಲಿಕಾನ್ ಸಿಟಿಯಲ್ಲಿ ಮಳೆರಾಯ ಅಬ್ಬರಿಸಿದ್ದಾರೆ. ಸೋಮವಾರ ದಿಢೀರ್ ಸುರಿದ ಈ ಭಾರಿ ಮಳೆಯಿಂದಾಗಿ ವಾಹನ ಸವಾರರು ಮತ್ತು ಸಾರ್ವಜನಿಕರು ಪರದಾಡುವಂತಾಗಿದೆ.ನಗರದ ಹೃದಯಭಾಗವಾದ ಮೆಜೆಸ್ಟಿಕ್, ಕೆ.ಆರ್. ಮಾರ್ಕೆಟ್, ಟೌನ್ ಹಾಲ್, ಕಾರ್ಪೋರೇಶನ್, ಶಾಂತಿನಗರ, ವಸಂತನಗರ ಮತ್ತು ಸದಾಶಿವನಗರ ಸೇರಿದಂತೆ ಮಧ್ಯ ಬೆಂಗಳೂರಿನ ಬಹುತೇಕ ಪ್ರದೇಶಗಳು ಮಳೆಯಿಂದ ಸಂಪೂರ್ಣವಾಗಿ ತೊಯ್ದು ತೊಪ್ಪೆಯಾಗಿವೆ. ಮಳೆಯ ತೀವ್ರತೆಗೆ ರಸ್ತೆಗಳಲ್ಲಿ ನೀರು ನಿಂತು ಸಂಚಾರ ದಟ್ಟಣೆ ಉಂಟಾಗಿದ್ದು, ಕಚೇರಿಗಳಿಂದ ಮನೆಗೆ ಮರಳುತ್ತಿದ್ದ ಸಾರ್ವಜನಿಕರು ಹೈರಾಣಾಗಿದ್ದಾರೆ.



ಮತ್ತೊಂದೆಡೆ ಮಲ್ಲೇಶ್ವರಂ, ಶೇಷಾದ್ರಿಪುರಂ, ರಾಜಾಜಿನಗರ, ಮಹಾಲಕ್ಷ್ಮಿ ಲೇಔಟ್, ನಂದಿನಿ ಲೇಔಟ್, ವಿಜಯನಗರ, ಸುಬ್ರಮಣ್ಯನಗರ, ನಾಗರಬಾವಿ, ಮೂಡಲಪಾಳ್ಯ ಹಾಗೂ ಲಗ್ಗೆರೆ ಸೇರಿದಂತೆ ಪಶ್ಚಿಮ ಮತ್ತು ಉತ್ತರ ಬೆಂಗಳೂರಿನ ವಸತಿ ಪ್ರದೇಶಗಳಲ್ಲೂ ಬಿಡದೇ ಮಳೆ ಸುರಿದಿದೆ. ಹಲವು ಕಡೆಗಳಲ್ಲಿ ರಸ್ತೆಗಳ ಮೇಲೆ ಭಾರಿ ಪ್ರಮಾಣದಲ್ಲಿ ನೀರು ಹರಿಯುತ್ತಿದ್ದು, ತಗ್ಗು ಪ್ರದೇಶಗಳಿಗೆ ನೀರು ನುಗ್ಗುವ ಭೀತಿ ಎದುರಾಗಿದೆ.

ಇದೇ ವೇಳೆ ದಕ್ಷಿಣ ಮತ್ತು ಈಶಾನ್ಯ ಬೆಂಗಳೂರಿನ ಭಾಗಗಳಾದ ಹೆಬ್ಬಾಳ, ಯಲಹಂಕ, ಗಿರಿನಗರ, ಬಸವನಗುಡಿ, ಜಯನಗರ, ಜೆ.ಪಿ ನಗರ, ಬನಶಂಕರಿ ಹಾಗೂ ಕೋಣನಕುಂಟೆ ವ್ಯಾಪ್ತಿಯಲ್ಲೂ ವರುಣನ ಅಬ್ಬರ ಮುಂದುವರಿದಿದೆ. ಬಿರುಗಾಳಿಯ ತೀವ್ರತೆಗೆ ಕೆಲವು ಕಡೆ ಮರಗಳ ಕೊಂಬೆಗಳು ಮುರಿದು ಬಿದ್ದಿರುವ ವರದಿಯಾಗಿದ್ದು, ವಾಹನ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿದೆ.ಇನ್ನು ಭಾರಿ ಮಳೆಯ ಹಿನ್ನೆಲೆಯಲ್ಲಿ ಅನಾಹುತಗಳನ್ನು ತಪ್ಪಿಸಲು ಬಿಬಿಎಂಪಿ ಮತ್ತು ಸಂಚಾರಿ ಪೊಲೀಸರು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದಾರೆ. ಕಳೆದ ಬಾರಿ ಭಾರಿ ಮಳೆಗೆ ತುತ್ತಾಗಿದ್ದ ಪ್ರಮುಖ ಜಂಕ್ಷನ್ ಆದ ಕೆ.ಆರ್. ಸರ್ಕಲ್ ಅಂಡರ್ ಪಾಸ್ ಅನ್ನು ಮುನ್ನೆಚ್ಚರಿಕೆಯಾಗಿ ಸಾರ್ವಜನಿಕ ಹಾಗೂ ವಾಹನ ಸಂಚಾರಕ್ಕೆ ಸಂಪೂರ್ಣವಾಗಿ ಕ್ಲೋಸ್ ಮಾಡಲಾಗಿದೆ. ಬ್ಯಾರಿಕೇಡ್‌ಗಳನ್ನು ಹಾಕಿ ವಾಹನಗಳನ್ನು ಪರ್ಯಾಯ ಮಾರ್ಗಗಳತ್ತ ತಿರುಗಿಸಲಾಗುತ್ತಿದ್ದು, ವಾಹನ ಸವಾರರು ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ.

### ಜೂನ್ ಮೊದಲ ವಾರದಲ್ಲೇ ರಾಜ್ಯಕ್ಕೆ ಮುಂಗಾರು ಪ್ರವೇಶ

ಈ ಬಾರಿ ಜೂನ್ ಮೊದಲ ವಾರದಲ್ಲಿಯೇ ನೈಋತ್ಯ ಮುಂಗಾರು ಅಧಿಕೃತವಾಗಿ ರಾಜ್ಯವನ್ನು ಪ್ರವೇಶಿಸಲಿದೆ ಎಂದು ಹವಾಮಾನ ತಜ್ಞ ಸಿ. ಎಸ್.ಪಾಟೀಲ್ ಮಾಹಿತಿ ನೀಡಿದ್ದಾರೆ. ಈ ಬಾರಿ ಮುಂಗಾರು ಸಕಾಲದಲ್ಲಿ ಆರಂಭವಾಗುತ್ತಿರುವುದು ಕೃಷಿ ಚಟುವಟಿಕೆಗಳಿಗೆ ಪೂರಕವಾಗಿದ್ದರೂ, ಮುನ್ನೆಚ್ಚರಿಕೆ ವಹಿಸುವುದು ಅತ್ಯಗತ್ಯವಾಗಿದೆ. ಈ ಬಾರಿಯ ಮುಂಗಾರು ಹಂಗಾಮಿನಲ್ಲಿ ರಾಜ್ಯದಾದ್ಯಂತ ಸರಾಸರಿ 60 ರಿಂದ 100 ಸೆಂಟಿಮೀಟರ್ ನಷ್ಟು ವ್ಯಾಪಕ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಅಂದಾಜಿಸಿದೆ. ಕರಾವಳಿ, ಮಲೆನಾಡು ಹಾಗೂ ಒಳನಾಡಿನ ಜಿಲ್ಲೆಗಳಲ್ಲಿ ವಾಡಿಕೆಗಿಂತ ಉತ್ತಮ ಮಳೆಯಾಗಲಿದ್ದು, ಜಲಮೂಲಗಳಿಗೆ ಭಾರಿ ಪ್ರಮಾಣದಲ್ಲಿ ನೀರು ಹರಿದುಬರುವ ನಿರೀಕ್ಷೆಯಿದೆ. ಜೂನ್ ತಿಂಗಳ ಆರಂಭದಲ್ಲಿ ಮಳೆ ಚುರುಕಾಗಲಿದ್ದು, ಜುಲೈ ತಿಂಗಳು ಬರುವಷ್ಟರಲ್ಲಿ ಇದು ಮತ್ತಷ್ಟು ತೀವ್ರ ಸ್ವರೂಪ ಪಡೆದುಕೊಳ್ಳಲಿದೆ. ಜುಲೈ ತಿಂಗಳಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಮೇಲೆಯೂ ಈ ಮುಂಗಾರು ಮಳೆಯು ತೀವ್ರ ಪರಿಣಾಮ ಬೀರಲಿದೆ ಎಂದು ತಜ್ಞರು ಎಚ್ಚರಿಸಿದ್ದಾರೆ. ವಿಶೇಷವಾಗಿ ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳು, ಕರಾವಳಿ ತೀರಗಳು ಮತ್ತು ನದಿ ಪಾತ್ರದ ಗ್ರಾಮಗಳಲ್ಲಿ ಜುಲೈ ತಿಂಗಳಲ್ಲಿ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆಯಿರುವುದರಿಂದ ನಾಗರಿಕರು ಮತ್ತು ಜಿಲ್ಲಾಡಳಿತಗಳು ಈಗಿನಿಂದಲೇ ಸನ್ನದ್ಧರಾಗಬೇಕಿದೆ.

# ಹೊಸ ತಾಲ್ಲೂಕು ಹುಲಸೂರ ಪ್ರಜಾಸೌಧ ಮತ್ತೆ ಗೊಂದಲ...!

**ಬೀದರ್, ಮೇ 18:** ಜಿಲ್ಲೆಯ ಹೊಸ ಹುಲಸೂರ ತಾಲ್ಲೂಕು ಕೇಂದ್ರ ಎಂದು ಘೋಷಣೆಯಾಗಿ ಎಂಟು ವರ್ಷ ಕಳೆದರೂ, ಸಮರ್ಪಕ ಮೂಲಸೌಕರ್ಯಗಳಿಂದ ವಂಚಿತವಾಗಿರುವ ಪಟ್ಟಣದಲ್ಲಿ ಇದೀಗ ಪ್ರಜಾಸೌಧ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮತ್ತೊಮ್ಮೆ ಗೊಂದಲ ಉಂಟಾಗಿದೆ. ಸರ್ಕಾರದಿಂದ ಅನುಮೋದನೆ ಸಿಕ್ಕು ಭೂಮಿಪೂಜೆ ನಡೆದ ಜಾಗ ಬಿಟ್ಟು ಹೊಸ ಸ್ಥಳ ಪರಿಶೀಲನೆ ನಡೆಸಿರುವುದು ಸಾರ್ವಜನಿಕರು ಹಾಗೂ ಭೂದಾನಿಗಳ ಅಸಮಾಧಾನಕ್ಕೆ ಕಾರಣವಾಗಿದೆ.

2025ರ ಜನವರಿ 24ರಂದು ಪ್ರಜಾಸೌಧ ನಿರ್ಮಾಣಕ್ಕೆ 8.60 ಕೋಟಿ ಅನುದಾನ ಮಂಜೂರಾದ ಕುರಿತು ಅಧಿಕೃತವಾಗಿ ಘೋಷಿಸಲಾಗಿತ್ತು. ಪ್ರಜಾಸೌಧ ನಿರ್ಮಾಣಕ್ಕಾಗಿ ಗುರುತಿಸಲಾದ ಜಾಗಕ್ಕೆ ಆಗಿನ ಸಹಾಯಕ ಆಯುಕ್ತ ಮುಕುಲ್ ಜೈನ್, ತಹಶೀಲ್ದಾರ್ ಶಿವಣ್ಣ ಮೇತ್ರಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದ್ದರು. ಬಳಿಕ ಅದೇ ಜಾಗದಲ್ಲಿ ಭೂಮಿ ಪೂಜೆ ನೆರವೇರಿಸಲಾಗಿತ್ತು. ಬಳಿಕ ಅದೇ ವರ್ಷ ಡಿಸೆಂಬರ್ 2ರಂದು ಸಚಿವ ಈಶ್ವರ ಖಂಡ್ರೆ ಅವರು ಬೀದರ್–ಲಾತೂರು ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿರುವ ಜಾಗದಲ್ಲಿ ಭೂಮಿಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಿದ್ದರು.

ಪ್ರಜಾಸೌಧ ನಿರ್ಮಾಣಕ್ಕೆ ಭೋಪಳೆ ಕುಟುಂಬದವರು ಸ.ನಂ. 359/378ರಲ್ಲಿ 9.09 ಎಕರೆ ಜಮೀನನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕಂದಾಯ ಇಲಾಖೆಗೆ ಭೂದಾನ ಮಾಡಿದ್ದರು. ಸರ್ಕಾರವು ಪಹಣಿಯಲ್ಲಿಯೂ 'ಮಿನಿ ವಿಧಾನಸೌಧ (ತಾಲ್ಲೂಕು ಸಂಕೀರ್ಣ)' ನಿರ್ಮಾಣಕ್ಕೆ ಜಾಗ ಮಂಜೂರಾಗಿದೆ ಎಂದು ದಾಖಲಿಸಿತ್ತು. ಕಂದಾಯ ಇಲಾಖೆ ಹಾಗೂ ಕೆಕೆಆರ್‌ಡಿಬಿಯಿಂದ ತಲಾ 4.30 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಟೆಂಡರ್ ಪ್ರಕ್ರಿಯೆಯೂ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಈ ಹಿಂದೆ ಮಾಹಿತಿ ನೀಡಿದ್ದರು.

ಆದರೆ ಇತ್ತೀಚೆಗೆ ಬಸವಕಲ್ಯಾಣ ರಸ್ತೆಯ ಸಾಯಿಬಾಬಾ ದೇವಸ್ಥಾನದ ಎದುರಿನ ಪ್ರದೇಶವನ್ನು ಪ್ರಜಾಸೌಧ ನಿರ್ಮಾಣಕ್ಕಾಗಿ ಅಧಿಕಾರಿಗಳು ಪರಿಶೀಲಿಸಿರುವುದು ಹೊಸಚರ್ಚೆಗೆ ಕಾರಣವಾಗಿದೆ. ಈಗಾಗಲೇ ಭೂಮಿಪೂಜೆ ನಡೆದ ಜಾಗವನ್ನು ಬಿಟ್ಟು ಮತ್ತೊಂದು ಸ್ಥಳ ಪರಿಶೀಲನೆ ನಡೆಸುತ್ತಿರುವುದರಿಂದ ಮೊದಲು ಆಯ್ಕೆಮಾಡಿದ್ದ ಜಾಗದ ಗತಿ ಏನು ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಜಮೀನು ದಾನಮಾಡಿದ್ದ ದೇವೇಂದ್ರ ಭೋಪಳೆ ಸೇರಿದಂತೆ ಕುಟುಂಬದವರು ನ್ಯಾಯಕ್ಕಾಗಿ ಕೋರ್ಟ್ ಮೊರೆ ಹೋಗಿದ್ದು, ಸರ್ಕಾರ ತಮಗೆ ನ್ಯಾಯ ಒದಗಿಸಬೇಕು ಎಂದು ಅಳಲು ತೋಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಈಗಾಗಲೇ ಸರ್ಕಾರ ಗುರುತಿಸಿದ ಜಾಗವನ್ನು ಬಿಟ್ಟು ಹೊಸ ಜಾಗದ ಹುಡುಕಾಟ ನಡೆಸುತ್ತಿರುವುದು ಕೆಲವರ ರಾಜಕೀಯ ವರ್ಚಸ್ಸು ಹೆಚ್ಚಿಸಿಕೊಳ್ಳುವ ಪ್ರಯತ್ನವೇ ಹೊರತು ಅಭಿವೃದ್ಧಿಯ ಉದ್ದೇಶವಲ್ಲ ಎಂಬ ಆರೋಪಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ. ತಾಲ್ಲೂಕಿನ ಬಹುತೇಕ ಸರ್ಕಾರಿ ಕಚೇರಿಗಳು ಇನ್ನೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಪ್ರಜಾಸೌಧ ನಿರ್ಮಾಣವಾದರೆ ಒಂದೇ ಸೂರಿನಡಿ ವಿವಿಧ ಇಲಾಖೆಗಳು ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂಬ ನಿರೀಕ್ಷೆ ಜನರಲ್ಲಿತ್ತು. ಆದರೆ ಜಾಗದ ಆಯ್ಕೆ ವಿಚಾರದಲ್ಲಿನ ಗೊಂದಲದಿಂದ ಕಾಮಗಾರಿ ಮತ್ತಷ್ಟು ವಿಳಂಬವಾಗುವ ಆತಂಕ ಎದುರಾಗಿದೆ.

# ಮೋದಿ ಅಕ್ಕಿಗೆ ಸಿದ್ಧರಾಮಯ್ಯನವರ ಚೀಲ: ಕಾಂಗ್ರೆಸ್‌ನಿಂದ ಸುಳ್ಳು ಪ್ರಚಾರ



ಕಲಬುರಗಿ ನಗರದ ಹೊರವಲಯದ ಖಾಸಗಿ ರೆಸಾರ್ಟ್‌ನಲ್ಲಿ ಏರ್ಪಡಿಸಿದ್ದ ಬಿಜೆಪಿ ಪಂ.ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನದ ನಿಮಿತ್ತ ಜಿಲ್ಲಾ ಮಟ್ಟದ ಪ್ರಶಿಕ್ಷಣ ವರ್ಗಕ್ಕೆ ಸಂಸದ ಗೋವಿಂದ ಕಾರಜೋಳ್ ಅವರು ಚಾಲನೆ ನೀಡಿದರು. ಶಾಸಕ ಬಸವರಾಜ ಮತ್ತಿಮಡು, ಪರಿಷತ್ ಸದಸ್ಯ ಬಿ.ಜಿ.ಪಾಟೀಲ್, ಅರುಣ ಶಹಾಪುರ, ಮಾಜಿ ಸಂಸದ ಡಾ.ಉಮೇಶ ಜಾಧವ, ಮಾಜಿ ಶಾಸಕರಾದ ರಾಜಕುಮಾರ ಪಾಟೀಲ್ ತೇಲ್ಕೂರ, ದತ್ತಾತ್ರೇಯ ಪಾಟೀಲ್ ರೇವೂರ, ಚಂದೂ ಪಾಟೀಲ್, ಅಶೋಕ್ ಬಗಲಿ ಮುಂತಾದವರಿದ್ದರು.

**ಕಲಬುರಗಿ, ಮೇ 18:** ರಾಜ್ಯದ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ, ಸ್ವಜನಪಕ್ಷಪಾತ ಮುಗಿಲು ಮುಟ್ಟಿದೆ. ಪ್ರಧಾನಿ ನರೇಂದ್ರ ಮೋದಿ ನೀಡಿದ ಅಕ್ಕಿಗೆ ಸಿದ್ದರಾಮಯ್ಯ ಮೂರು ರೂ.ನ ಚೀಲದಲ್ಲಿ ಹಾಕಿಕೊಟ್ಟು ತಾನೇ ಅಕ್ಕಿ ಕೊಡುತ್ತಿದ್ದೇನೆ ಎಂದು ಪುಕ್ಕಟೆ ಪ್ರಚಾರ ಪಡೆದುಕೊಳ್ಳುತ್ತಿದ್ದಾರೆ. ಬಿಜೆಪಿಗರು ಈ ವಾಸ್ತವವನ್ನು ಜನರಿಗೆ ತಿಳಿಸಬೇಕು ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.

ನಗರದ ಹೊರವಲಯದ ಖಾಸಗಿ ರೆಸಾರ್ಟ್‌ನಲ್ಲಿ ಏರ್ಪಡಿಸಿದ್ದ ಬಿಜೆಪಿ ಪಂ.ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನದ ನಿಮಿತ್ತ ಜಿಲ್ಲಾ ಮಟ್ಟದ ಪ್ರಶಿಕ್ಷಣ ವರ್ಗಕ್ಕೆ ಚಾಲನೆ ನೀಡಿ ಮಾತನಾಡಿ, ಭಂಡತನದಿಂದ ರಾಜ್ಯ ಸರ್ಕಾರ ಕೆಲಸ ಮಾಡುತ್ತಿದೆ ಎಂದರು.ಮಹಿಳೆಯರಿಗೆ ಉಚಿತ ಬಸ್ ಎಂದು ಐದು ಸಾರಿಗೆ ನಿಗಮ ಮುಚ್ಚುವ ಹಂತಕ್ಕೆ ತಲುಪಿವೆ. ಶಾಲೆ, ಕಾಲೇಜು ವಿದ್ಯಾರ್ಥಿಗಳ ಪ್ರಯಾಣಕ್ಕೆ ಬಸ್ ಇಲ್ಲ, ಪ್ರಧಾನಿ ಮೋದಿ 89 ಕೋಟಿ ಜನರಿಗೆ ಅಕ್ಕಿ ನೀಡುತ್ತಿದ್ದು, ರಾಜ್ಯ ಸರ್ಕಾರ ಸಿಎಂ ಮತ್ತು ಡಿಸಿಎಂ ತಮ್ಮ ಚಿತ್ರ ಹಾಕಿಕೊಂಡು ಚೀಲ ಕೊಡುತ್ತ ನಾವು ಕೊಟ್ಟಿದ್ದೇವೆ ಎನ್ನುತ್ತಾರೆ. ಕಡಿಮೆ ದರದಲ್ಲಿ ದೊರೆಯುವ ಜನೌಷಧ ಕೇಂದ್ರಗಳನ್ನು ಸರ್ಕರವೇ ಮುಂದಾಗಿ ಮುಚ್ಚಿದ್ದಾರೆ. ಇದೆಲ್ಲವನ್ನು ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಅಹಿಂದ ನಾಯಕ ಮೋದಿ: ದೇಶದ ಏಕೈಕ ಅಹಿಂದ ನಾಯಕ ಪ್ರಧಾನಿ ನರೇಂದ್ರ ಮೋದಿ. ಸಿದ್ದರಾಮಯ್ಯ ಸುಳ್ಳು ಹೇಳುತ್ತಿದ್ದು, ಮೋದಿ ಹಿಂದುಳಿದ ವರ್ಗಗಳ ನಾಯಕರಾಗಿ ಸರ್ವೋದರ್ಯ ಸಿದ್ಧಾಂತ ಅಪ್ಪಟ್ಟ ಪಾಲಿಸುತ್ತಿದ್ದಾರೆ. ಸಾಮಾಜಿಕ ನ್ಯಾಯದಲ್ಲಿ ಇರುವುದು ಬಿಜೆಪಿ ಎಂದರು.

> ದೇಶದ ಆರ್ಥಿಕತೆ ಸದೃಢವಾಗಿದ್ದು, ದಿವಾಳಿ ಆಗಲ್ಲ. ಯಾವುದಕ್ಕೂ ನಿರ್ಬಂಧ ಹೇರಿಲ್ಲ. ಸುಸ್ಥಿರವಾಗಿ ಇರಲು ಉಳಿತಾಯಕ್ಕೆ ಮೋದಿ ಸಲಹೆ ನೀಡಿದ್ದಾರೆ. ಹಿಂದೆ ಆಹಾರಂಆ ಧಾನ್ಯ ಕೊರತೆ ಇದ್ದಾಗ ಶಾಸ್ತ್ರೀಜಿ ಉಪವಾಸಕ್ಕೆ ಕರೆ ನೀಡಿದ್ದರು, ಇಡೀ ದೇಶ ಸ್ಪಂದಿಸಿತ್ತು. ರಾಹುಲ್ ಗಾಂಧಿಗೆ ಅದು ಗೊತ್ತಿಲ್ಲ. ಗೊತ್ತಿರುವ ಮಲ್ಲಿಕಾರ್ಜುನ ಖರ್ಗೆಗೆ ಎಲ್ಲ ಗೊತ್ತಿದ್ದೂ ಮಾತನಾಡಲ್ಲ. ಅಧಿಕಾರದ ಕೊರತೆಯಿಂದ ಕಾಂಗ್ರೆಸ್ ಸುಳ್ಳು ಹರಡುತ್ತಿದೆ.
> – ಗೋವಿಂದ ಕಾರಜೋಳ ಸಂಸದ.

ಎರಡು ದಿನದ ಪ್ರಶಿಕ್ಷಣ ವರ್ಗದಲ್ಲಿ ಜಿಲ್ಲೆಯ ಎಲ್ಲ ತಾಲೂಕು, ಮಂಡಲದ ಪ್ರಮುಖ ಪದಾಧಿಕಾರಿಗಳು ಭಾಗವಹಿಸಿದ್ದರು. ಉದ್ಘಾಟನೆ ನಂತರ ವಿವಿಧ ಗೋಷ್ಠಿಗಳು ನಡೆದವು. ಬಿಜೆಪಿ ಜಿಲ್ಲಾಧ್ಯಕ್ಷರಾದ ಅಶೋಕ ಬಗಲಿ, ಚಂದು ಪಾಟೀಲ್, ಶಾಸಕರಾದ ಬಸವರಾಜ ಮತ್ತಿಮಡು, ಬಿ.ಜಿ.ಪಾಟೀಲ್?, ಅರುಣಕುಮಾರ ಶಹಾಪುರಕರ್, ಡಾ.ಅವಿನಾಶ ಜಾಧವ್, ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೆಲ್ಕೂರ, ದತ್ತಾತ್ರೇಯ ಪಾಟೀಲ್ ರೇವೂರ, ಸುಭಾಷ ಗುತ್ತೇದಾರ್, ಬಾಬುರಾವ ಚವ್ಹಾಣ್, ಶಿವರಾಜ ಪಾಟೀಲ್ ರದ್ದೇವಾಡಗಿ, ನಿತಿನ್ ಗುತ್ತೇದಾರ್, ಶರಣಪ್ಪ ತಳವಾರ, ಸಿದ್ದಾಜಿ ಪಾಟೀಲ್, ಧರ್ಮಣ್ಣ ಇಟಗಾ, ಉಮೇಶ ಪಾಟೀಲ್, ಮಹಾದೇವ ಬೆಳಮಗಿ, ರಾಜಶೇಖರ ಮೂರ್ತಿ, ಗೌರಿ ಚಿಚಕೋಟಿ, ವೆಂಕಟರೆಡ್ಡಿ, ಡಾ.ಸುಧಾ ಹಾಲಕಾಯಿ, ಶೋಭಾ, ಸಂತೋಷಿ ರಾಣಿ ತೇಲ್ಕೂರ ಇತರರಿದ್ದರು.

ಒಟ್ಟಾಗಿದ್ದರೆ ಬಿಜೆಪಿಗೆ ಒಂಬತ್ತು ಕ್ಷೇತ್ರ: ರಾಜ್ಯದಲ್ಲಿ ಬಿಜೆಪಿ ಒಂದು ಬಾರಿಯೂ ಪೂರ್ಣಪ್ರಮಾಣದಲ್ಲಿ ಸರ್ಕಾರ ರಚಿಸದಿರಲು ಕಾರಣ, ಮಗ್ಗುಲಲ್ಲಿ ಇದ್ದವನನ್ನು ಸೋಲಿಸಲು ಪ್ರಯತ್ನಿಸುತ್ತಿರುವುದು. ಒಗ್ಗಟ್ಟಾಗಿದ್ದರೆ ಕಲಬುರಗಿ ಜಿಲ್ಲೆಯಲ್ಲಿ ಒಂಬತ್ತು ಕ್ಷೇತ್ರ ಗೆಲ್ಲಲ್ಲು ಸಾಧ್ಯ. ಬಿಜೆಪಿ ಸರ್ಕಾರದ ಸಾಧನೆಗಳನ್ನು, ಜನಪರ ಯೋಜನೆಗಳನ್ನು ಜನರಿಗೆ ತಲುಪಿಸಬೇಕು. ಕಲಬುರಗಿ ಜಿಲ್ಲೆಯ ನಾಯಕರು ಐದು ಅಡಿ ಬಾಗಿಲೆಂಬ ತಪ್ಪು ಕಲ್ಪನೆಯಲ್ಲಿ ಬಗ್ಗಿ ನಡೆಯುತ್ತಿದ್ದು, 25 ಅಡಿ ಬಾಗಿಲಿದ್ದು, ಸೆಟೆದು ನಡೆಯಬೇಕು ಗೋವಿಂದ ಕಾರಜೋಳ ಸಲಹೆ ನೀಡಿದರು.

# ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮೆಟ್ರೋ ಪ್ರಯಾಣ: ಪ್ರಿಯಾಂಕ್ ಖರ್ಗೆ ವ್ಯಂಗ್ಯ



**ಕಲಬುರಗಿ, ಮೇ 18:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮೆಟ್ರೋ ಹತ್ತಿರುವ ಬಗ್ಗೆ ಮಾಧ್ಯಮಗಳು ಪದೇ ಪದೇ ಸುದ್ದಿ ಬಿತ್ತರಿಸುತ್ತಿವೆ. ಆದರೆ,ಈ ಪರಿಸ್ಥಿತಿಗೆ ಯಾರು ಕಾರಣ ಎಂದು ಯಾಕೆ ಕೇಳುತ್ತಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು.

ನಗರದ ಹೊರವಲಯದ ಮಾಡಬೂಳ ಗ್ರಾಮದ ಬಳಿ ನಿರ್ಮಾಣವಾಗಿರುವ ನೂತನ ಮೃಗಾಲಯ ಉದ್ಘಾಟನೆ ನೆರವೇರಿಸಿದ ನಂತರದ ಮಾಧ್ಯಮದ ಪ್ರತಿನಿಧಿಗಳೊಂದಿಗೆ ಮಾತನಾಡಿ, ತೈಲ ಮತ್ತು ಅನಿಲ ಕೊರತೆಗೆ ಕಾರಣ ಕೇಂದ್ರದ ಸಡಿಲ ವಿದೇಶಿ ನೀತಿಗಳು. ದೇಶ ಕಷ್ಟದ ಸ್ಥಿತಿಯಲ್ಲಿದ್ದಾಗ ಮೋದಿ ವಿದೇಶಕ್ಕೆ ಹೋಗುತ್ತಾರೆ. ಆರ್ಥಿಕ ಸ್ಥಿತಿಗತಿ, ಪೆಟ್ರೋಲಿಯಂ ಬೆಲೆ ಏರಿಕೆ ಬಗ್ಗೆ ಸಂಸತ್ತಿನಲ್ಲೇ ಹೇಳಬೇಕಿತ್ತು ನೆದರ್ಲೆಂಡ್ಸ್‌ಗೆ ಯಾಕೆ ಹೋಗಬೇಕಿತ್ತು ಎಂದು ಖರ್ಗೆ ಕುಟುಕಿದರು.

ಬೆಲೆ ಏರಿಕೆ ವಿಷಯ ಮರೆಮಾಚಲು ಮೋದಿ ಚಿನ್ನ ಖರೀದಿ ಮಾಡಬೇಡಿ ಎಂದು ಜನರಿಗೆ ಕರೆ ಕೊಡುತ್ತಾರೆ. ನೀಟ್ ಅಕ್ರಮ ಬಗ್ಗೆ ಯಾಕೆ ಮಾತನಾಡುವುದಿಲ್ಲ. 22 ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಹಾಳಾಗಿದೆ. ಇದಕ್ಕೆ ಯಾರು ಕಾರಣ? ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಇನ್ನೂ ಸಚಿವರಾಗಿ ಮುಂದುವರಿಸಿದ್ದಾರೆ ಯಾಕೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಪ್ರಶ್ನಿಸಿದರು.

ಪ್ರಧಾನಿ ಮೋದಿ ವಿದೇಶದಿಂದ ತಂದ ಪ್ರಾಣಿಗಳು ಸತ್ತು ಹೋದವು. ಈಗ ನಾವು ತರುವ ಪ್ರಾಣಿಗಳನ್ನು ಸರಿಯಾಗಿ ನಿರ್ವಹಣೆ ಮಾಡಿ ಸಂರಕ್ಷಿಸಲಾಗುವುದು ಎಂದು ಪ್ರಿಯಾಂಕ್ ಹೇಳಿದರು.

# ಕಲ್ಯಾಣ ಕರ್ನಾಟಕದಲ್ಲಿ ಉದ್ಯಮ ಬೆಳವಣಿಗೆಗೆ ಕೃಷಿಕಲ್ಪ ಸೆಂಟರ್ ಆಫ್ ಎಕ್ಸಲೆನ್ಸ್ ಪೂರಕ: ಸಚಿವ ಪ್ರಿಯಾಂಕ್ ಖರ್ಗೆ



**ಕಲಬುರಗಿ, ಮೇ 18:** ಕಲ್ಯಾಣ ಕರ್ನಾಟಕ ಭಾಗದ ಉದ್ಯಮ ಬೆಳವಣಿಗೆಗೆ ಕೃಷಿಕಲ್ಪ ಸೆಂಟರ್ ಆಫ್ ಎಕ್ಸಲೆನ್ಸ್ ಪೂರಕವಾಗಲಿದೆ– ಕೃಷಿಕಲ್ಪ ಸೆಂಟರ್ ಆಫ್ ಎಕ್ಸಲೆನ್ಸ್ ಕಲ್ಯಾಣ ಕರ್ನಾಟಕ ಭಾಗದ ಉದ್ಯಮ ಬೆಳವಣಿಗೆಗೆ ಪೂರಕವಾಗಲಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ನಗರದ ಗೋಲ್ಡ್ ಹಬ್‌ನಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್, ಐಟಿ – ಬಿಟಿ ಇಲಾಖೆ, ಕೆಕೆಆರ್‌ಡಿಬಿ ಹಾಗೂ ಕೃಷಿಕಲ್ಪ ಅಡಿಯಲ್ಲಿ ಆಯೋಜಿಸಲಾಗಿದ್ದ ಕೃಷಿಕಲ್ಪ ಸೆಂಟರ್ ಆಫ್ ಎಕ್ಸಲೆನ್ಸ್ ಉದ್ಘಾಟನೆ ಹಾಗೂ 'ವಿಕಾಸ ಮತ್ತು ಪ್ರೇರಣಾ' ಕಾರ್ಯಕ್ರಮಗಳ ಉದ್ಘಾಟನೆ ನೆರವೇರಿಸಿದ ಅವರು, ಕರ್ನಾಟಕದಲ್ಲಿ 18,000 ಸ್ಟಾರ್ಟ್ ಅಪ್‌ಗಳು ಕಾರ್ಯಾರಂಭ ಮಾಡಲು ನೋಂದಣಿ ಮಾಡಿಕೊಂಡಿವೆ, ನವೋದ್ಯಮಕ್ಕೆ ಗೈಡೆನ್ಸ್, ಪೈಲೆಟ್ ಹಾಗೂ ಫಂಡಿಂಗ್ ಬೇಕೆ ಬೇಕು. ಇದಕ್ಕೆ ರೂ 50 ಲಕ್ಷ ಅನುದಾನ ಅಗತ್ಯವಿದೆ. ಸಧ್ಯ ರಾಜ್ಯ ಸರ್ಕಾರ ಒಟ್ಟು 1500 ಸ್ಟಾರ್ಟ್ ಅಪ್‌ಗಳಿಗೆ ಈ ಅನುದಾನ ನೀಡಲು ತಯಾರಾಗಿದೆ. ಬೆಂಗಳೂರು ಆಚೆಗೂ ಕೂಡಾ ಉದ್ಯಮ ಸ್ಥಾಪನೆಗೆ ಸರ್ಕಾರ ಆದ್ಯತೆ ನೀಡುತ್ತಿದ್ದು 'ಬಿಯಾಂಡ್ ಬೆಂಗಳೂರು' ಕಾರ್ಯಕ್ರಮದಡಿ ಬೆಂಗಳೂರು ಹೊರತುಪಡಿಸಿ, ಮೈಸೂರು, ಮಂಗಳೂರು, ಹುಬ್ಬಳ್ಳಿ– ಧಾರವಾಡ, ಬೆಳಗಾವಿ, ಕಲಬುರಗಿ ಮುಂತಾದ ಜಿಲ್ಲೆಗಳಲ್ಲಿ ಉದ್ಯಮ ಸ್ಥಾಪನೆಗೆ ಪೂರಕವಾದ ವಾತಾವರಣ ನಿರ್ಮಿಸಲು ಹಾಗೂ ನವೋದ್ಯಮ ಸ್ಥಾಪನೆಗೆ ಮುಂದಾಗುವ ಸ್ಟಾರ್ಟ್ ಅಪ್‌ಗಳಿಗೆ ಎಲ್ಲಾ ರೀತಿಯ ಸಹಕಾರ ನೀಡುತ್ತಿದೆ ಎಂದ ಸಚಿವರು ಟೈರ್ 2 ಹಾಗೂ 3 ನಗರಗಳ ಬೆಳವಣಿಗೆಗೆ ಹಾಗೂ ಉದ್ಯಮದ ಅಭಿವೃದ್ದಿಗೆ ಬೇಕಾಗುವ ಎಲ್ಲ ಕ್ರಮವಹಿಸಲು ಮುಂದಾಗಿದೆ ಎಂದರು.

ಐಐಐಟಿ ರಾಯಚೂರುಗೆ ಹೋಗಿದ್ದು ಅಲ್ಲಿಗೆ ಅನುಕೂಲವಾಗುವಂತ ಉದ್ಯಮ ಸ್ಥಾಪನೆಗೆ ಬೇಕಾಗುವ ಮಾನವ ಸಂಪನ್ಮೂಲಗಳನ್ನು ಸೃಜಿಸಿ ಅವುಗಳನ್ನು ಒದಗಿಸಲು ಕೆಕೆ ಆರ್‌ಡಿಬಿಯಿಂದ ಅನುದಾನ ಒದಗಿಸುವಂತೆ ಸಚಿವರು ಡಾ ಅಜಯ್ ಸಿಂಗ್ ಅವರಿಗೆ ಮನವಿ ಮಾಡಿದರು. ಕಲಬುರಗಿ ರೊಟ್ಟಿ ಬ್ರ್ಯಾಂಡ್ ದೇಶದಾದ್ಯಂತ ಹೆಸರುವಾಸಿಯಾಗಿದ್ದು ಕೆನಡಾ, ಅಮೇರಿಕಾ ಸೇರಿದಂತೆ ವಿವಿಧ ದೇಶಗಳಿಗೆ ರಫ್ತಾಗುತ್ತಿವೆ. ಇತ್ತೀಚಿಗೆ ಪುಣೆ ಮೂಲದ ಕಂಪನಿಯೊಂದಿಗೆ ಒಪ್ಪಂದ ಮಾಡಿಕೊಂಡಿದ್ದು ಕಲಬುರಗಿಯಲ್ಲಿ ಮಹಿಳಾ ಸಂಘಗಳಿಂದ ತಯಾರಿಸಲಾದ ರೊಟ್ಟಿಗಳನ್ನು ಕಳುಹಿಸಲು ಮೂರು ವರ್ಷಗಳ ಅವಧಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ, ವರ್ಷವೊಂದಕ್ಕೆ 1 ಲಕ್ಷ ರೊಟ್ಟಿಗಳನ್ನು ಸರಬರಾಜು ಮಾಡಲಾಗುವುದು ಎಂದು ಹೇಳಿದ ಅವರು ಕಲಬುರಗಿ ಬ್ರ್ಯಾಂಡ್ ರೊಟ್ಟಿಯ ಮೂಲಕ ಮಹಿಳಾ ಸಬಲೀಕರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ವಿವರಿಸಿದರು.

ಕೃಷಿ ವಲಯದ ಅಭಿವೃದ್ದಿ ಹಾಗೂ ಸಮಗ್ರ ಬೆಳವಣಿಗೆಗೆ ಸಹಕಾರಿಯಾಗುವಂತೆ ಕಲಬುರಗಿಯಲ್ಲಿ ಅಗ್ರಿಕಲ್ಚರ್ ಸೆಂಟರ್ ಆಫ್ ಎಕ್ಸಲೆನ್ಸ್ ಸ್ಥಾಪನೆಗೆ ಸರ್ಕಾರ ಮುಂದಾಗಿದ್ದು ಕೃಷಿ ವಲಯಕ್ಕಾಗಿ ಇಂತಹ ಒಂದು ಎಕ್ಸಲೆನ್ಸ್ ಸ್ಥಾಪನೆ ಮಾಡಲು ಮುಂದಾಗಿದ್ದುದು ದೇಶದಲ್ಲೇ ಮೊದಲನೆಯದಾಗಲಿದೆ. ಇದು ಕೃಷಿ ವಲಯದ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದರು.ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನಲ್ಲಿ 22,000 ಎಕರೆ ಪ್ರದೇಶದಲ್ಲಿ ನ್ಯಾಷನಲ್ ಇನ್ ವೆಸ್ಟ್ ಮೆಂಟ್ ಮ್ಯಾನುಫ್ಯಾಕ್ಚರಿಂಗ್ ಜೋನ್ (NIMZ-ರಾಷ್ಟ್ರೀಯ ಹೂಡಿಕೆ ಉತ್ಪಾದನಾ ವಲಯ) ನಿರ್ಮಾಣಕ್ಕೆ ಈ ಹಿಂದೆ ಕ್ರಮವಹಿಸಲಾಗಿತ್ತು. ಆದರೆ, ಆ ಸಂದರ್ಭದಲ್ಲಿ ಖರ್ಗೆಯವರು ಚುನಾವಣೆಯಲ್ಲಿ ಹಿನ್ನೆಡೆ ಅನುಭವಿಸಿದ್ದರಿಂದ ಅದು ಅಲ್ಲಿಗೆ ನಿಂತು ಹೋಯಿತು ಇಲ್ಲದಿದ್ದರೆ ಈ ಭಾಗದ ಉದ್ಯಮ ಬೆಳವಣಿಗೆ ಸಹಕಾರಿಯಾಗುತ್ತಿತ್ತು ಎಂದರು.

ಕೆಕೆಆರ್‌ಡಿಬಿ ಅಧ್ಯಕ್ಷ ಹಾಗೂ ಶಾಸಕ ಡಾ ಅಜಯ್ ಸಿಂಗ್ ಮಾತನಾಡಿ, ಸರ್ಕಾರ, ಕೆಕೆಆರ್ ಡಿಬಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಉದ್ಯಮ ಸ್ಥಾಪನೆಗೆ ಪೂರಕ ವಾತವಾರಣ ನಿರ್ಮಾಣಕ್ಕೆ ಮುಂದಾಗಿದ್ದು, ಯುವ ಉದ್ಯಮಿಗಳನ್ನು ಉತ್ತೇಜಿಸಲು ಕೃಷಿಕಲ್ಪದೊಂದಿಗೆ ಒಗ್ಗೂಡಿ ಕೃಷಿಕಲ್ಪ ಸೆಂಟರ್ ಆಫ್ ಎಕ್ಸಲೆನ್ಸ್ (COE) ಕಾರ್ಯಕ್ರಮ ರೂಪಿಸಿದೆ ಇವುಗಳ ಅಡಿಯಲ್ಲಿವಿಕಾಸ ಮತ್ತು ಪ್ರೇರಣಾ' ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿದೆ ಎಂದರು.

ಮುಂಬರುವ ಐದು ಅಥವಾ ಹತ್ತು ವರ್ಷದಲ್ಲಿ ಈ ಭಾಗಕ್ಕೆ ನೀಡಬೇಕಾದ ಅನುದಾನದ ಬಗ್ಗೆ ಅಗತ್ಯ ಕ್ರಮವಹಿಸಲಾಗುತ್ತಿದೆ. ಗೋವಿಂದ್ ರಾವ್ ವರದಿಯಂತೆ ಕಕಭಾಗಕ್ಕೆ ಹೆಚ್ಚಿನ ಅನುದಾನ ಒದಗಿಸಲಾಗುವುದು. ಕೃಷಿಕಲ್ಪಕ್ಕೆ ಕೆಕೆಆರ್ ಡಿಬಿ ಬೆನ್ನೆಲುಬಾಗಿ ನಿಂತು ಈ ಭಾಗದಲ್ಲಿ ಉದ್ಯಮ ಬೆಳವಣಿಗೆಗೆ ಎಲ್ಲ ಸಹಕಾರ ನೀಡಲು ಬದ್ಧವಾಗಿದೆ ಎಂದರು.

ಕೆಕೆಆರ್‌ಡಿಬಿ ಅಧ್ಯಕ್ಷ ಡಾ ಅಜಯ್ ಸಿಂಗ್, ಶಾಸಕರಾದ ಎಂ ವೈ ಪಾಟೀಲ್, ಅಲ್ಲಮಪ್ರಭು ಪಾಟೀಲ್, ಎಂಎಲ್‌ಸಿ ಜಗದೇವ ಗುತ್ತೇದಾರ, ಚಂದ್ರಿಕಾ ಪರಮೇಶ್ವರ, ಅರುಣ್ ಕುಮಾರ್ ಎಂ ವೈ ಪಾಟೀಲ, ಪ್ರವೀಣ್ ಹರವಾಳ, ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮುಲ್ಲಾ ಷರೀಫ್, ಸಿಇಓ ಭಂವರ್ ಸಿಂಗ್ ಮೀನಾ, ಕಮೀಷನರ್ ಡಾ ಶರಣಪ್ಪ ಢಗೆ, ಮಹಾನಗರ ಪಾಲಿಕೆ ಕಮೀಷನರ್ ಅವಿನಾಶ ಶಿಂಧೆ, ಎಸ್ ಪಿ ಅಡ್ಡೂರು ಶ್ರೀನಿವಾಸಲು, ಎಡಿಸಿ ರಾಯಪ್ಪ ಹುಣಸಗಿ, ಎಸಿ ಸಾಹಿತ್ಯ, ಕೃಷಿಕಲ್ಪದ ಸಿಇಓ ಸಿಎಂ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಡೀಪ್‌ಟೆಕ್ ಪ್ರೋತ್ಸಾಹಕ್ಕೆ ಅನುದಾನ

ಮುಂಬರುವ ದಿನಗಳಲ್ಲಿನ ನವೋದ್ಯಮದ ಅಭಿವೃದ್ಧಿಯನ್ನು ಪರಿಗಣಿಸಿ ಡೀಪ್ ಟೆಕ್ ಸ್ಟಾರ್ಟ್‌ಅಪ್ ಪ್ರೋತ್ಸಾಹಕ್ಕಾಗಿ ಅನುದಾನ ನೀಡಲು ತಯಾರಿದ್ದು, ಮೈಸೂರಿನಲ್ಲಿ 402, ಮಂಗಳೂರಿನಲ್ಲಿ, 332, ಹುಬ್ಬಳ್ಳಿ-ಧಾರವಾಡ ಭಾಗದಲ್ಲಿ 463 ಹಾಗೂ ಕಕ ಭಾಗದಲ್ಲಿ 282 ಸ್ಟಾರ್ಟ್ ಅಪ್ ಗಳಿದ್ದು, ಇವುಗಳಿಗೆ ರೂ 1,000 ಕೋಟಿ ಅನುದಾನವನ್ನು ನೀಡಿ ಸರ್ಕಾರ ಪ್ರೋತ್ಸಾಹ ನೀಡುತ್ತಿದೆ. ಇದರಿಂದ ಟೈರ್ 2 ಹಾಗೂ 3 ನಗರಗಳಲ್ಲಿ ಯುವ ಉದ್ಯಮಗಳ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು

# ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಸೂಕ್ತ ಕ್ರಮ: ಸಚಿವ ಈಶ್ವರ ಖಂಡ್ರೆ




ಕಲಬುರಗಿ ನಗರದ ಹೊರವಲಯದ ಮಾಡಬೂಳ ಗ್ರಾಮದ ಬಳಿ 43 ಎಕರೆ ಪ್ರದೇಶದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಮೃಗಾಲಯವನ್ನು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅವರು ಉದ್ಘಾಟಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಶಾಸಕ ಅಲ್ಲಮಪ್ರಬು ಪಾಟೀಲ್, ಕನೀಜ ಫಾತಿಮಾ,. ಎಂ.ವೈ.ಪಾಟೀಲ್ ಮುಂತಾದವರಿದ್ದರು.

**ಕಲಬುರಗಿ, ಮೇ 18:** ಈ ಭಾಗದಲ್ಲಿ ಹಸಿರು ಹೊದಿಕೆ ಕೊರತೆ ಇದೆ. ಹೀಗಾಗಿ, ವಿಪರೀತ ಬಿಸಿಲು ಮತ್ತು ಸೆಕೆಗಳಿಂದ ಹವಾಮಾನದಲ್ಲಿ ನಿರಂತರ ವೈಪರಿತ್ಯಗಳಾಗುತ್ತಿದೆ. ಸಾರ್ವಜನಿಕರಲ್ಲಿ ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಅವಶ್ಯಕತೆ ಇದೆ. ಈ ಬಗ್ಗೆ ಈ ಸಲದ ಕೆಕೆಆರ್‌ಡಿಬಿ ಸಭೆಯಲ್ಲಿ ಚರ್ಚಿಸಿ ಹಸಿರೀಕರಣಕ್ಕೆ ಅಗತ್ಯ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಮಾಡಬೂಳ ಗ್ರಾಮದ ಬಳಿ ನಿರ್ಮಾಣವಾಗಿರುವ ನೂತನ ಮೃಗಾಲಯ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಇ ಮೃಗಾಲಯದಲ್ಲಿ 56 ವಿವಿಧ ಪ್ರಭೇದದ ಪ್ರಾಣಿಗಳ ಲಭ್ಯತೆ ಇದ್ದು, ಕಲ್ಯಾಣ ಕರ್ನಾಟಕ ಭಾಗದ ಎರಡನೆಯ ಅತಿದೊಡ್ಡ ಮೃಗಾಲಯ ಇದಾಗಲಿದೆ. ಈ ಮೊದಲು ಹಂಪಿಯಲ್ಲಿ ನಿರ್ಮಾಣ ಮಾಡಲಾಗಿತ್ತು. ಈ ಮೃಗಾಲಯ ನಿರ್ಮಾಣಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರ ವಿಶೇಷ ಆಸಕ್ತಿ ಕಾರಣವಾಗಿದೆ. 56 ವಿವಿಧ ಪ್ರಭೇದದ ಪ್ರಾಣಿಗಳನ್ನು ಇಲ್ಲಿ ತರಿಸಲಾಗುವುದು. ಎರಡು ಹುಲಿಗಳನ್ನು ಬನ್ನೇರುಘಟ್ಟದಿಂದ ಈಗಾಗಲೇ ತರಲಾಗಿದೆ. ಮೊಸಳೆ, ನರಿ, ಇತ್ಯಾದಿ ಪ್ರಾಣಿಗಳು ನೋಡಲು ಸಿಗುತ್ತಿವೆ. ಮುಂಬರುವ ದಿನಗಳಲ್ಲಿ ಬೇರೆ ಬೇರೆ ಪ್ರಭೇದ ಪ್ರಾಣಿ, ಪಕ್ಷಿಗಳನ್ನು ತರಿಸಲಾಗುವುದು ಎಂದರು.

ಸುಮಾರು 42.33 ಎಕರೆ ಪ್ರದೇಶದಲ್ಲಿ ಒಟ್ಟು 44 ಕೋಟಿ ವೆಚ್ಚದಲ್ಲಿ ಈ ಮೃಗಾಲಯ ನಿರ್ಮಾಣ ಮಾಡಲಾಗಿದ್ದು, ಈ ಭಾಗದ ಪ್ರಮುಖ ಹಾಗೂ ಜನಾಕರ್ಷಕ ಮೃಗಾಲಯವಾಗಲಿದೆ. ಎಲ್ಲಾ ವಯೋಮಾನದ ಜನರನ್ನು ರಂಜಿಸುವ ನೆಚ್ಚಿನ ತಾಣವಾಗಲಿದೆ ಎಂದರು.

ಹಸಿರು ಹೊದಿಕೆ ಹೆಚ್ಚಿಸಲು ಅನುದಾನ ಬಿಡುಗಡೆ ಕಕ ಭಾಗದಲ್ಲಿ ಕೇವಲ ಶೇ.1 ರಿಂದ. 2 ಮಾತ್ರ ಹಸಿರು ಹೊದಿಕೆ ಇದೆ. ಮುಂಬರುವ ದಿನಗಳಲ್ಲಿ ಸಸಿಗಳನ್ನು ನೆಡುವ ಮೂಲಕ ಹಸಿರು ಹೊದಿಕೆ ಹೆಚ್ಚಿಸಲು ಕ್ರಮವಹಿಸಲಾಗುವುದು. ಈ ನಿಟ್ಟಿನಲ್ಲಿ 2026–27 ರ ಸಾಲಿನ ಕೆಕೆಆರ್‌ಡಿಬಿ ಸಭೆಯಲ್ಲಿ ಈ ಪ್ರಕ್ರಿಯೆಗೆ ಬೇಕಾಗುವ ಅಗತ್ಯ ಅನುದಾನ ಬಿಡುಗಡೆ ಕುರಿತು ಚರ್ಚಿಸಲಾಗುವುದು ಎಂದರು.

ಅರಣ್ಯ ಇಲಾಖೆಯ ಸಿಬ್ಬಂದಿ ನೇಮಕ : ಅರಣ್ಯ ಇಲಾಖೆಯಲ್ಲಿ ಪಶುವೈದ್ಯಕೀಯ ಸಿಬ್ಬಂದಿ ಹೆಚ್ಚಿಸಲು ಸಿಎಂ ಅವರು ಅರಣ್ಯ ಇಲಾಖೆಗೆ ಅನುಮತಿ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಅರಣ್ಯ ಇಲಾಖೆಗೆ ಅಗತ್ಯವಿರುವ ಸಿಬ್ಬಂದಿ ನೇಮಕಾತಿಗೆ ಕ್ರಮವಹಿಸಲಾಗುವುದು ಎಂದ ಸಚಿವರು, ಅಕ್ರಮವಾಗಿ ಮರ ಕಡಿದರೆ ಕ್ರಮ ಕೈಕೊಳ್ಳಲಾಗುವುದು. ಅರಣ್ಯ ಪ್ರದೇಶದಲ್ಲಿ ಅಥವಾ ಸರ್ಕಾರದ ಜಾಗದಲ್ಲಿ ಯಾವುದೇ ರೀತಿಯ ಮರ ಗಿಡ ಕಡಿಯುವವರ ವಿರುದ್ಧ ಕ್ರಮವಹಿಸಲಾಗುವುದು. ಒಂದು ವೇಳೆ ಖಾಸಗಿ ಜಾಗದಲ್ಲಿ ಇರುವ ಮರ ಗಿಡಗಳನ್ನು ಕಡಿಯಲು ವಿನಾಯತಿ ನೀಡಲಾಗಿದೆ ಎಂದರು.

ಅರಣ್ಯ ಭೂಮಿ ಒತ್ತುವರಿ ತೆರವಿಗೆ ಕ್ರಮರಾಜ್ಯದ ಅರಣ್ಯ ಭೂಮಿ ತೆರವಿಗೆ ಕ್ರಮವಹಿಸಲಾಗಿದ್ದು ರಾಜ್ಯದಲ್ಲಿ ಈಗಾಗಲೇ 10,000 ಎಕರೆ ಯನ್ನು ತೆರವು ಮಾಡಲಾಗಿದೆ. ಇದರಲ್ಲಿ ಬೆಂಗಳೂರು ಒಂದರಲ್ಲೇ 200 ಎಕರೆ ಅರಣ್ಯ ಭೂಮಿ ತೆರವು ಮಾಡಲಾಗಿದೆ. ಈ ವಿಚಾರದಲ್ಲಿ ಎಸ್‌ಐಟಿ ರಚಿಸುವಂತೆ ಸುಪ್ರಿಂ ಕೋರ್ಟ್ ಸೂಚನೆ ನೀಡಿದೆ ಎಂದು ಖಂಡ್ರೆ ಹೇಳಿದರು. ಮೂರು ವರ್ಷದಲ್ಲಿ 11 ಲಕ್ಷ ಸಸಿ ನೆಡಲಾಗಿದೆ. ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 11 ಲಕ್ಷ ಸಸಿ ನೆಡಲಾಗಿದೆ. ಅವುಗಳನ್ನು ಸುಮಾರು90% ನೆಟ್ಟ ಸಸಿಗಳು ಬದುಕುಳಿದಿವೆ. ಈ ತರಹದ ಸಸಿಗಳಿಗೆ ಅಗತ್ಯ ಪ್ರಮಾಣ ನೀರು ಒದಗಿಸಿ ಐದು ವರ್ಷಗಳ ಕಾಲ ಸಂರಕ್ಷಣೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು.

ಬನ್ನೇರು ಘಟ್ಟ ರಾಷ್ಟ್ರೀಯ ಉದ್ಯಾನವನದಿಂದ ಇಲ್ಲಿಗೆ ಹುಲಿಗಳನ್ನು ತರಿಸಲಾಗಿದೆ. ಅವುಗಳಿಗೆ ಅಗತ್ಯ ಆಹಾರ ನೀಡಿ ಇಲ್ಲಿನ ಹವಾಮಾನಕ್ಕೆ ಅನುಗುಣವಾಗಿ ಹೊಂದಿಕೆಯಾಗುವಂತೆ ಸಂರಕ್ಷಣೆ ಮಾಡಲಾಗುವುದು. ಮುಂದಿನ ಮೂರು ತಿಂಗಳ ಅವಧಿಯಲ್ಲಿ ನಿಗದಿತ ಎಲ್ಲ ಪ್ರಭೇದದ ಪ್ರಾಣಿ ಹಾಗೂ ಪಕ್ಷಿಗಳನ್ನು ಇಲ್ಲಿಗೆ ತರಲಾಗುವುದು ಎಂದರು.

# ಕಲಬುರಗಿಯಲ್ಲಿ ಬೇಸಿಗೆ ಶಿಬಿರಕ್ಕೆ ಚಾಲನೆ

## ಮಕ್ಕಳನ್ನು ಯಂತ್ರಮಾನವರಾಗಿ ಮಾಡಬೇಡಿ: ರಾಜಕುಮಾರ ರಾಠೋಡ್



ಕಲಬುರಗಿಯ ರಂಗಾಯಣ ಸಭಾಂಗಣದಲ್ಲಿ ರಾಜ್ಯ ಬಾಲ ಭವನ ಸೊಸೈಟಿ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಹಾಗೂ ರಂಗಾಯಣ ಕಲಬುರಗಿ ಸಂಯುಕ್ತಾಶ್ರಯದಲ್ಲಿ 5 ರಿಂದ 16 ವರ್ಷದ ಮಕ್ಕಳಿಗಾಗಿ ಹಮ್ಮಿಕೊಳ್ಳಲಾಗಿರುವ 15 ದಿನಗಳ ಜಿಲ್ಲಾಮಟ್ಟದ ಉಚಿತ ಬೇಸಿಗೆ ಶಿಬಿರವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ರಾಠೋಡ್ ಅವರು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

**ಕಲಬುರಗಿ, ಮೇ. 18:** ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರಹಾಕಲು ಬೇಸಿಗೆ ಬಿರಗಳು ಅತ್ಯುತ್ತಮ ವೇದಿಕೆಯಾಗಿದ್ದು, ಪಾಲಕರು ಕೇವಲ ಅಂಕಗಳಿಗೆ ಆದ್ಯತೆ ನೀಡಿ ಮಕ್ಕಳನ್ನು ಯಂತ್ರಮಾನವರಾಗಿ (ರೋಬೋಟ್) ಮಾಡಬಾರದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಜಕುಮಾರ ರಾಠೋಡ ತಿಳಿಸಿದರು.

ನಗರದ ರಂಗಾಯಣ ಸಭಾಂಗಣದಲ್ಲಿ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಹಾಗೂ ರಂಗಾಯಣ ಕಲಬುರಗಿ ಸಂಯುಕ್ತಾಶ್ರಯದಲ್ಲಿ 5 ರಿಂದ 16 ವರ್ಷದ ಮಕ್ಕಳಿಗಾಗಿ ಹಮ್ಮಿಕೊಳ್ಳಲಾಗಿರುವ 15 ದಿನಗಳ ಜಿಲ್ಲಾಮಟ್ಟದ ಉಚಿತ ಬೇಸಿಗೆ ಶಿಬಿರವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಶಿಬಿರಕ್ಕೆ ಚಾಲನೆ ನೀಡಿ, ಇತ್ತೀಚಿನ ದಿನಗಳಲ್ಲಿ ಪಾಲಕರು ಕೇವಲ ಅಂಕಗಳಿಕೆಗೆ ಹೆಚ್ಚಿನ ಪ್ರಾಮುಖ್ಯ ನೀಡುತ್ತಿರುವುದರಿಂದ, ಮಕ್ಕಳು ತಮ್ಮಲ್ಲಿರುವ ನೈಜಪ್ರತಿಭೆ, ಆಸೆ ಮತ್ತು ಆಕಾಂಕ್ಷೆಗಳನ್ನು ವ್ಯಕ್ತಪಡಿಸಲು ವಿಫಲರಾಗುತ್ತಿದ್ದಾರೆ ಎಂದು ಅವರು ಕಳವಳ ವ್ಯಕ್ತ ಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜ್ಯ ಬಾಲ ಭವನ ಸೊಸೈಟಿಯ ರಾಜ್ಯ ಉಪಾಧ್ಯಕ್ಷ ಅನಿಲ ಕುಮಾರ್ ಜಮಾದಾರ್, ಈ ಬೇಸಿಗೆ ಶಿಬಿರದ ಸದುಪಯೋಗವನ್ನು ಎಲ್ಲಾ ಮಕ್ಕಳು ಪಡೆದುಕೊಳ್ಳಬೇಕು. ಪಾಲಕರು ತಮ್ಮ ಮಕ್ಕಳನ್ನು ಎಲ್ಲರೊಂದಿಗೆ ಬೆರೆಯುವಂತೆ ಪ್ರೇರೇಪಿಸಬೇಕು ಹಾಗೂ ವಿದ್ಯಾಭ್ಯಾಸದ ಜೊತೆಗೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಲು ಉತ್ತೇಜನ ನೀಡಬೇಕು ಎಂದು ಕರೆ ನೀಡಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಶ್ವಾರಾಧ್ಯ ಇಜೇರಿ, ಅಂಕಗಳಿಕೆಗಾಗಿ ಪಾಲಕರು ಮಕ್ಕಳ ಮೇಲೆ ಮಾನಸಿಕ ಒತ್ತಡ ಹೇರುತ್ತಿದ್ದಾರೆ. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪಠ್ಯೇತರ ಚಟುವಟಿಕೆಗಳು ಅತ್ಯಗತ್ಯ. ಅದರೊಂದಿಗೆ ಭಾರತದ ಅಮೂಲ್ಯವಾದ ಸಂಸ್ಕೃತಿಯನ್ನು ಪ್ರತಿಯೊಂದು ಮಗುವಿನಲ್ಲೂ ಅಳವಡಿ ಸುವಲ್ಲಿ ಪಾಲಕರ ಪಾತ್ರ ಬಹುಮುಖ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷಕಿ ಶೋಭಾ, ಇಲಾಖೆಯ ಸಿಬ್ಬಂದಿ, ಸಂಪನ್ಮೂಲ ವ್ಯಕ್ತಿಗಳು, ಪಾಲಕರು ಹಾಗೂ ಮುದ್ದು ಮಕ್ಕಳು ಉಪಸ್ಥಿತರಿದ್ದರು. ವಿಠಲ ಕಾರ್ಯಕ್ರಮ ನಿರೂಪಿಸಿದರು ಮತ್ತು ಜಿಲ್ಲಾ ಬಾಲಭವನ ಕಚೇರಿ ಸಹಾಯಕ ಮಾನು ಎಂ. ಹೂಗಾರ ವಂದಿಸಿದರು.

# ಹೊಸ ಆಧಾರ್ ಸೇವಾ ಕೇಂದ್ರ ಉದ್ಘಾಟನೆ



ಬೀದರನ ಶಿವನಗರದಲ್ಲಿ ಹೊಸ ಆದಾರ ಕೇಂದ್ರವನ್ನು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಉದ್ಘಾಟಿಸಿದರು.

**ಬೀದರ್, ಮೇ 18:** ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರ (ಯುಐಡಿಎಐ) ಆಧಾರ್ ನೂತನ ಸೇವಾ ಕೇಂದ್ರಕ್ಕೆ ನಗರದಲ್ಲಿ ಚಾಲನೆ ನೀಡಲಾಯಿತು.

ಇಲ್ಲಿನ ಶಿವನಗರದಲ್ಲಿ ಹೊಸ ಕೇಂದ್ರವನ್ನು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಉದ್ಘಾಟಿಸಿ, ಬೀದರ್ ಜಿಲ್ಲೆಯಲ್ಲಿ ಇನ್ನೊಂದು ಆಧಾರ್ ಕಾರ್ಡ್ ಸೇವಾ ಕೇಂದ್ರಕ್ಕೆ ಚಾಲನೆ ನೀಡಲಾಯಿತು.

ಆಧಾರ್ ಕಾರ್ಡ್‌ಗೆ ಸಂಬಂಧಿಸಿದ ಯಾವುದೇ ರೀತಿಯ ಸಮಸ್ಯೆಗಳನ್ನು ಇಲ್ಲಿ ಬಗೆಹರಿಸಲಾಗುವುದು. ಆಧಾರ್ ಆಯಪ್ ಮೂಲಕ ಮನೆಯಲ್ಲಿ ಕುಳಿತಲ್ಲಿಯೇ ಸಾರ್ವಜನಿಕರು ತಮ್ಮ ಆಧಾರ್ ಕಾರ್ಡ್ ಅಪ್‌ಡೇಟ್ ಮಾಡಿಸಿಕೊಳ್ಳಬಹುದು ಎಂದರು.

ಯುಐಡಿಎಐ ಉಪನಿರ್ದೇಶಕ ಗುಲ್ಶನ್ ಕುಮಾರ್ ಸಿಂಗ್ ಮಾತನಾಡಿ, ಈ ಆಧಾರ್ ಸೇವಾ ಕೇಂದ್ರ ಬೀದರ್ ಜಿಲ್ಲೆಯ ಎಲ್ಲ ನಿವಾಸಿಗಳ ಆಧಾರ್ ಕಾರ್ಡ್ ಸಂಬಂಧಿಸಿದ ಎಲ್ಲಾ ಸಮಸ್ಯೆಗಳನ್ನು ಪರಿಹರಿಸುವ ಕೇಂದ್ರವಾಗಿದೆ. ಆನ್‌ಲೈನ್‌ನಲ್ಲಿಯೇ ಸಂದರ್ಶನದ ಸಮಯ ಪಡೆಯಬಹುದು. ಖುದ್ದಾಗಿ ಈ ಕೇಂದ್ರಕ್ಕೆ ಬಂದು ತಮ್ಮ ಆಧಾರ್ ಸಂಬಂಧಿತ ಸೇವೆಗಳನ್ನು ಪಡೆಯಬಹುದು. ಆಧಾರ್ ಸಂಬಂಧಿತ ಏನೇ ಸಮಸ್ಯೆಗಳಿದ್ದರೂ ಒಂದು ವಾರದ ಒಳಗೆ ಬಗೆಹರಿಸಲಾಗುವುದು ಎಂದು ತಿಳಿಸಿದರು.

ಯುಐಡಿಎಐ ಕರ್ನಾಟಕದ ಸಹಾಯಕ ವ್ಯವಸ್ಥಾಪಕ ಮುಹಮ್ಮದ್ ಮುಸಾಬ್ ಮಾತನಾಡಿ, ಈ ಆಧಾರ್ ಸೇವಾ ಕೇಂದ್ರವು ಆಧಾರ್ ದಾಖಲಾತಿ, ಜನಸಂಖ್ಯಾ ಮತ್ತು ಬಯೋಮೆಟ್ರಿಕ್ ನವೀಕರಣಗಳು, ದೋಷ ತಿದ್ದುಪಡಿ ಮತ್ತು ಕುಂದುಕೊರತೆ ಪರಿಹಾರ ಸೇವೆಗಳನ್ನು ಒಂದೇ ಸೂರಿನಡಿ ನೀಡುತ್ತದೆ. ಈ ಕೇಂದ್ರವು ಸಾರ್ವಜನಿಕ ರಜಾದಿನಗಳನ್ನು ಹೊರತುಪಡಿಸಿ ಎಲ್ಲಾ ದಿನಗಳಲ್ಲಿ ಕಾರ್ಯನಿರ್ವಹಿಸುತ್ತದೆ ಎಂದರು.

ಕರ್ನಾಟಕವು ಪ್ರಸ್ತುತ ಬೀದರ್ ಕೇಂದ್ರ ಸೇರಿದಂತೆ ಏಳು ಆಧಾರ್ ಸೇವಾ ಕೇಂದ್ರಗಳನ್ನು ಹೊಂದಿದೆ. ಬರುವ ಜೂನ್ ಅಂತ್ಯದ ವೇಳೆಗೆ ಇನ್ನೂ ಎಂಟು ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಗಿದೆ. ಈ ಆಧಾರ್ ಸೇವಾ ಕೇಂದ್ರಗಳು ಯುಐಡಿಎಐ ನೇರವಾಗಿ ನಿರ್ವಹಿಸುತ್ತದೆ. ಕೇಂದ್ರಗಳನ್ನು ಸಂಪೂರ್ಣವಾಗಿ ಒಳಗೊಂಡಿರುವ ಮತ್ತು ನಿವಾಸಿ ಸ್ನೇಹಿಯಾಗಿ ವಿನ್ಯಾಸಗೊಳಿಸಲಾಗಿದೆ. ಗಾಲಿಕುರ್ಚಿ ಪ್ರವೇಶ, ಪ್ರವೇಶಿಸಬಹುದಾದ ವಿಶ್ರಾಂತಿ ಕೊಠಡಿಗಳು ಮತ್ತು ಮೀಸಲಾದ ಕುಂದುಕೊರತೆ ಪರಿಹಾರ ಕಾರ್ಯವಿಧಾನದಂಥ ಸೌಲಭ್ಯಗಳನ್ನು ಹೊಂದಿದೆ. ಪ್ರತಿಯೊಂದು ಆಧಾರ್ ಸೇವಾ ಕೇಂದ್ರವನ್ನು ಎಎಸ್‌ಕೆ ವ್ಯವಸ್ಥಾಪಕರು ನಿರ್ವಹಿಸುತ್ತಾರೆ. ಅವರು ನಿವಾಸಿಗಳಿಂದ ಕುಂದು–ಕೊರತೆಗಳನ್ನು ಸ್ವೀಕರಿಸುತ್ತಾರೆ. ಸಂಬಂಧಪಟ್ಟ ಅಧಿಕಾರಿಗಳಿಗೆ ರವಾನಿಸಿ, ಕಾಲಮಿತಿಯಲ್ಲಿ ಪರಿಹಾರ ಒದಗಿಸುತ್ತಾರೆ ಎಂದು ಹೇಳಿದರು.

# ರಾಜ್ಯದ ಬೊಕ್ಕಸಕ್ಕೆ ಹಟ್ಟಿ ಚಿನ್ನದ ಆಸರೆ

## ಉತ್ಪಾದನೆಯಲ್ಲಿ ದಾಖಲೆ ಬರೆದ ಸರ್ಕಾರಿ ಸ್ವಾಮ್ಯದ ಗಣಿ

**ರಾಯಚೂರು, ಮೇ 16:** ದಕ್ಷಿಣ ಏಷ್ಯಾದ ಏಕೈಕ ಸರ್ಕಾರಿ ಸ್ವಾಮ್ಯದ ಚಿನ್ನದ ಗಣಿ ಕಂಪನಿಯಾದ ಜಿಲ್ಲೆಯ ಹಟ್ಟಿ ಚಿನ್ನದ ಗಣಿ 2025–26ನೇ ಸಾಲಿನಲ್ಲಿ ಅಭೂತಪೂರ್ವ ದಾಖಲೆಯ ಚಿನ್ನ ಉತ್ಪಾದನೆಯೊಂದಿಗೆ ಸಾಧನೆ ಮಾಡಿದೆ. ಈ ಯಶಸ್ಸಿನ ಹಿನ್ನೆಲೆಯಲ್ಲಿ ಕಂಪನಿಯ ಅಧ್ಯಕ್ಷ ಜೆ.ಟಿ. ಪಾಟೀಲ ಅವರು ಮುಖ್ಯಮಂತ್ರಿಗಳಿಗೆ ಭೆಟಿಯಗಿ ಸಾಧನೆಗಳನ್ನು ವಿವರಿಸಿದರು.

ಹಟ್ಟಿ ಚಿನ್ನದ ಗಣಿ ಕಂಪನಿಯು 2025–26ನೇ ಸಾಲಿನಲ್ಲಿ ಒಟ್ಟು 1,700 ಕೆ.ಜಿ ಚಿನ್ನ ಉತ್ಪಾದಿಸುವ ಮಹತ್ವಾಕಾಂಕ್ಷೆಯ ಗುರಿ ಹೊಂದಿತ್ತು. ಈ ಪೈಕಿ ಶೇಕಡ 99.50ರಷ್ಟು ಪ್ರಗತಿ ಗುರಿ ಸಾಧಿಸುವ ಮೂಲಕ ಒಟ್ಟು 1,691.50 ಕೆ.ಜಿ ಚಿನ್ನ ಉತ್ಪಾದಿಸಿ ದಾಖಲೆ ಬರೆದಿದೆ. ಪ್ರಸಕ್ತ ವರ್ಷದಲ್ಲಿ ಚಿನ್ನದ ಬೆಲೆ ಗಗನಕ್ಕೇರಿರುವುದು ಮತ್ತು ಗಣಿಯ ದಕ್ಷತೆ ಹೆಚ್ಚಿರುವುದು ಕಂಪನಿಗೆ ಬಹು ದೊಡ್ಡ ಲಾಭ ತಂದುಕೊಟ್ಟಿದೆ.

ಮೊದಲ ಬಾರಿ ಬೃಹತ್ ವಹಿವಾಟು: ಇದೇ ಮೊದಲ ಬಾರಿಗೆ ಕಂಪನಿಯು 1,910 ಕೋಟಿ ರೂಪಾಯಿ ಮೊತ್ತದ ಬೃಹತ್ ವಹಿವಾಟು ನಡೆಸಿದೆ. ಈ ವಹಿವಾಟಿನಿಂದ ಕಂಪನಿಗೆ ಬರೊಬ್ಬರಿ 844 ಕೋಟಿ ರೂಪಾಯಿ ನಿವ್ವಳ ಲಾಭ ಲಭಿಸಿದೆ. ಇದು ಕಳೆದ ಸಾಲಿನ ಲಾಭಕ್ಕಿಂತ (436 ಕೋಟಿ ರೂಪಾಯಿ) ಗಮನಾರ್ಹ ಏರಿಕೆಯಾಗಿದೆ.

ಕಂಪನಿಯು ಈ ಐತಿಹಾಸಿಕ ಮೈಲಿಗಲ್ಲು ತಲುಪಿದ ಹಿನ್ನೆಲೆಯಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯ ಅಧ್ಯಕ್ಷ ಜೆ.ಟಿ.ಪಾಟೀಲ ಅವರು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ, ಪುಷ್ಪಗುಚ್ಛ ನೀಡಿ ಕಂಪನಿಯ ಸಾಧನೆಯ ವಿವರಗಳನ್ನು ಹಂಚಿಕೊಂಡರು.

ಗಣಿಯ ಆಧುನೀಕರಣ ಮತ್ತು ಕೆಲಸಗಾರರ ಸುರಕ್ಷತೆಗೆ ಸರ್ಕಾರ ನೀಡುತ್ತಿರುವ ಬೆಂಬಲದಿಂದಾಗಿ ಈ ಸಾಧನೆ ಸಾಧ್ಯವಾಗಿದೆ. ಕಳೆದ ಕೆಲವು ವರ್ಷಗಳಿಂದ ಹಟ್ಟಿ ಚಿನ್ನದ ಗಣಿ ಸತತವಾಗಿ ಲಾಭದ ಹಾದಿಯಲ್ಲಿದ್ದು, ರಾಜ್ಯದ ಬೊಕ್ಕಸಕ್ಕೆ ದೊಡ್ಡ ಕೊಡುಗೆ ನೀಡುತ್ತಿದೆ. ಈ ವೇಳೆ ಕಂಪನಿಯ ವ್ಯವಸ್ಥಾಪಕ ನಿರ್ದೇಶಕಿ ಶ್ರೀಮತಿ ಆರ್. ಶಿಲ್ಪ ಅವರೂ ಉಪಸ್ಥಿತರಿದ್ದು ಕಂಪನಿಯ ಯಶಸ್ಸಿನ ಕುರಿತು ವಿವರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜೆ.ಟಿ.ಪಾಟೀಲರು, ಸರ್ಕಾರದ ಬೆಂಬಲ, ಗಣಿಯ ಆಧುನೀಕರಣ ಮತ್ತು ತಾಂತ್ರಿಕ ಸುಧಾರಣೆಗಳಿಂದ ಈ ಐತಿಹಾಸಿಕ ಸಾಧನೆ ಸಾಧ್ಯವಾಗಿದೆ. ಗಣಿಯಲ್ಲಿ ಕಾರ್ಮಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಮುಂಬರುವ ದಿನಗಳಲ್ಲಿ ಉತ್ಪಾದನೆಯನ್ನು ಇನ್ನಷ್ಟು ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ನಾಲ್ಕು ತಿಂಗಳಲ್ಲಿ ದಾಖಲೆ ಉದ್ಪಾದನೆ: ಹಟ್ಟಿ ಚಿನ್ನದ ಗಣಿಯ ಹೊಸ ದಾಖಲೆ ದಕ್ಷಿಣ ಏಷ್ಯಾದ ಏಕೈಕ ಸರ್ಕಾರಿ ಸ್ವಾಮ್ಯದ ಚಿನ್ನದ ಗಣಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಹಟ್ಟಿ ಚಿನ್ನದ ಗಣಿ ಕಂಪನಿಯು 2025–26ನೇ ಆರ್ಥಿಕ ವರ್ಷದಲ್ಲಿ ಐತಿಹಾಸಿಕ ಸಾಧನೆ ಮಾಡಿದೆ. ಇತ್ತೀಚೆಗಷ್ಟೇ ನಿಗದಿತ ಗುರಿಯ ಶೇಕಡ 99ರಷ್ಟು ಪ್ರಗತಿ ಸಾಧಿಸುವ ಮೂಲಕ ಕಂಪನಿಯು ದಾಖಲೆ ಬರೆದಿದೆ.

### ಒಟ್ಟು ಉತ್ಪಾದನೆ

**ಡಿಸೆಂಬರ್ 2025ರಿಂದ 2026ರ ಮಾರ್ಚ್ ಅವಧಿಯಲ್ಲಿ ಒಟ್ಟು 1691 ಕೆಜಿ 575 ಗ್ರಾಂ ಚಿನ್ನವನ್ನು ಉತ್ಪಾದನೆ, ಅದಿರು ಸಂಸ್ಕರಣೆ: ಸುಮಾರು 6,49,690 ಮೆಟ್ರಿಕ್ ಟನ್ ಅದಿರನ್ನು ಗಣಿಯಿಂದ ತೆಗೆದು ಸಂಸ್ಕರಿಸಲಾಗಿದೆ. ಗುರಿ ಮತ್ತು ಸಾಧನೆಯಲ್ಲಿ 1,700 ಕೆಜಿ ಚಿನ್ನದ ಉತ್ಪಾದನೆಯ ಗುರಿ ಹೊಂದಿದ್ದ ಕಂಪನಿಯು, ಅಲ್ಪ ಅಂತರದಲ್ಲಿ ಗುರಿ ತಪ್ಪಿದರೂ ಶೇಕಡಾ 99ರಷ್ಟು ಯಶಸ್ಸು ಕಂಡಿದೆ. ಪ್ರತಿ ಟನ್ ಅದಿರಿನಲ್ಲಿ 2.57 ಗ್ರಾಂ ಚಿನ್ನದ ನಿರೀಕ್ಷೆ ಇತ್ತು, ಆದರೆ ವಾಸ್ತವದಲ್ಲಿ ಪ್ರತಿ ಟನ್ನಿಗೆ 2.90 ಗ್ರಾಂ ಚಿನ್ನ ಲಭ್ಯವಾಗುವ ಮೂಲಕ ಕಾರ್ಯಕ್ಷಮತೆ ಹೆಚ್ಚಿದೆ.**



### 4 ತಿಂಗಳ ಸಾಧನೆ

**ಡಿಸೆಂಬರ್, 2025: 133 ಕೆ.ಜಿ.,**
**ಜನವರಿ, 2026: 246.076 ಕೆ.ಜಿ.,**
**ಫೆಬ್ರವರಿ, 2026: 257.2121 ಕೆ.ಜಿ.,**
**ಮಾರ್ಚ್, 2026: 286.839 ಕೆ.ಜಿ.**

# ಸಜ್ಜನರು ಮೌನ ಮುರಿದರೆ ಸಂವಿಧಾನದ ಉಳಿವು: ದಿನೇಶ್ ಅಮೀನ್‌ಮಟ್ಟು



ಹುಬ್ಬಳ್ಳಿಯಲ್ಲಿ ಮೇ ಸಾಹಿತ್ಯ ಮೇಳದ ಸಾಂವಿಧಾನಿಕ ಪ್ರಜಾಸತ್ತೆಯ ಸ್ವರೂಪ, ಸಂಘರ್ಷದ ಇತಿಹಾಸ ಗೋಷ್ಠಿಯಲ್ಲಿ ಹಇರಿಯ ಪತ್ರಕರ್ತ ದಿನೇಶ ಅಮೀನಮಟ್ಟು ಮಾತನಾಡಿದರು.

**ಹುಬ್ಬಳ್ಳಿ, ಮೇ 18:** ಸಂವಿಧಾನ ಇಂದು ತೀವ್ರ ನಿಗಾ ಘಟಕದಲ್ಲಿ (ಐಸಿಯು) ಇದೆ. ಅದರ ರಕ್ತ, ಮಾಂಸ, ಮಜ್ಜೆಯನ್ನು ಹೀರಿದ್ದಾರೆ. ಸಜ್ಜನರು ಮೌನಮುರಿದರೆ ಐಸಿಯುನಲ್ಲಿರುವ ಸಂವಿಧಾನವನ್ನು ಉಳಿಸಲು ಸಾಧ್ಯ ಎಂದು ಪತ್ರಕರ್ತ ದಿನೇಶ್ ಅಮೀನ್‌ಮಟ್ಟು ಹೇಳಿದರು.

'ಮೇ ಸಾಹಿತ್ಯ ಮೇಳದ' ಸಾಂವಿಧಾನಿಕ ಪ್ರಜಾಸತ್ತೆ: ಸ್ವರೂಪ, ಸಂಘರ್ಷದ ಇತಿಹಾಸ' ಗೋಷ್ಠಿಯಲ್ಲಿ ಮಾತನಾಡಿದ ಅವರು, 'ಅಂಬೇಡ್ಕರ್ ನೀಡಿದ ಸಂವಿಧಾನ ಇರುವಾಗಲೇ, ಜಮ್ಮು– ಕಾಶ್ಮೀರಕ್ಕೆ ಸಂವಿಧಾನದ 370ನೇ ವಿಧಿ ಅಡಿ ನೀಡಲಾಗಿದ್ದ ವಿಶೇಷ ಸ್ಥಾನಮಾನ ರದ್ದುಗೊಳಿಸಲಾಗಿದೆ.

ಆರ್ಥಿಕವಾಗಿ ಹಿಂದುಳಿದರಿಗೆ ಶೇ 10ರಷ್ಟು ಮೀಸಲಾತಿ ನೀಡಲಾಗಿದೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಮಾಡಲಾಗುತ್ತಿದೆ. ಸಂವಿಧಾನಕ್ಕೆ ವಿರುದ್ಧವಾದ ಕೆಲಸಗಳು ನಡೆದಿವೆ ಎಂದರು.

ಅಂಬೇಡ್ಕರರು ಮಹಾಡ್ ಸತ್ಯಾಗ್ರಹ ಆರಂಭಿಸಿದಾಗ ಮನುಸ್ಮೃತಿ ಸುಟ್ಟರು. ಅಲ್ಲಿ ಸಂವಿಧಾನದ ಬೀಜ ಬಿತ್ತಲಾಯಿತು. ಆದರೆ, ಸಂವಿಧಾನ ರಚಿಸಿದಾಗ, ಅದರಲ್ಲಿ ಭಾರತೀಯತೆ ಇಲ್ಲ, ಮನುಸ್ಮೃತಿಯೇ ನಮ್ಮ ಕಾನೂನು ಎಂದು ಆರ್‌ಎಸ್‌ಎಸ್ ಪತ್ರಿಕೆ ಸಂಪಾದಕೀಯ ಬರೆಯಿತು. ಸಂವಿಧಾನದ ಜತೆಗಿನ ಸಂಘರ್ಷ ಹಿಂದಿನಿಂದಲೂ ಇದೆ ಎಂದು ಹೇಳಿದರು.

ಸಂಸತ್‌ನ 543 ಸದಸ್ಯರ ಪೈಕಿ 252 ಜನರ ವಿರುದ್ಧ ಕ್ರಿಮಿನಲ್ ಪ್ರಕರಣಇವೆ. ಪ್ರತಿ ವರ್ಷ ಸಂಸತ್ ಪ್ರವೇಶಿಸುವ ಕ್ರಿಮಿನಲ್‌ಗಳ ಸಂಖ್ಯೆ ಹೆಚ್ಚುತ್ತಿದೆ. ಹೀಗಿದ್ದರೂ ನಾವು ಸಂವಿಧಾನ ಸುರಕ್ಷಿತವಾಗಿ ಇರುತ್ತದೆ ಎಂದು ನಿರೀಕ್ಷಿಸುವುದು ಮೂರ್ಖತನವಾಗುತ್ತದೆ ಎಂದರು.

ಅಮೆರಿಕ, ಚೀನಾ ಬಿಟ್ಟರೆ ಭಾರತ ಶ್ರೀಮಂತ ರಾಷ್ಟ್ರ ಎಂದು ಕೇಂದ್ರ ಸರ್ಕಾರ ಹೇಳುತ್ತದೆ. ಆದರೆ, ಶೇ 10ರಷ್ಟು ಜನರಲ್ಲಿ ಶೇ 73ರಷ್ಟು ಸಂಪತ್ತು ಇದೆ. ಆರ್ಥಿಕ, ಸಾಮಾಜಿಕ ಅಸಮಾನತೆ ಹೋಗಲಾಡಿಸದಿದ್ದರೆ ಪ್ರಜಾಪ್ರಭುತ್ವ ಉಳಿಯಲು ಸಾಧ್ಯವಿಲ್ಲ ಎಂದರು.

ಲೇಖಕ ಬಿ.ಆರ್.ಮಂಜುನಾಥ ಮಾತನಾಡಿ, ಜಗತ್ತಿನಲ್ಲಿ ಇಂಗ್ಲೆಂಡ್, ಫ್ರಾನ್ಸ್, ಜರ್ಮನಿ, ಕೆನಡಾ, ಜಪಾನ್, ಅಮೆರಿಕದಲ್ಲಿ ಒಂದೇ ಐತಿಹಾಸಿಕ ಅವಧಿಯಲ್ಲಿ ಗಣತಂತ್ರ ರೂಪು ತಳೆಯಿತು. ಜನತಂತ್ರ ಹುಟ್ಟಲು ಬಂಡವಾಳಗಾರರು ಮತ್ತು ರಾಜಪ್ರಭುತ್ವದ ನಡುವಿನ ಸಂಘರ್ಷ ಕಾರಣ ಎಂದು ತಿಳಿಸಿದರು.

ಜನತಂತ್ರದ ಪ್ರಮುಖ ಲಕ್ಷಣ ವರ್ಗ ವ್ಯವಸ್ಥೆ. ಯಾವ ವರ್ಗದಲ್ಲಿ ಅಧಿಕಾರವಿದೆಯೋ ಅದರ ಮೇಲೆ ಜನತಂತ್ರದ ಮೂಲ ಸ್ವರೂಪ ನಿರ್ಧಾರವಾಗುತ್ತದೆ. ಯಾವ ವರ್ಗ ಯಾರಿಗೋಸ್ಕರ ಅಧಿಕಾರ ಹಿಡಿದಿದೆ ಎಂಬುದನ್ನು ಗುರುತಿಸದಿದ್ದರೆ ನಮ್ಮ ಚರ್ಚೆಗಳು ನಿಷ್ಫಲವಾಗುತ್ತವೆ ಎಂದರು.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಜಾಗದಲ್ಲಿ ಬೇರೆ ಯಾರು ಇದ್ದರೂ ಇರಾನ್ ಮೇಲೆ ಬಾಂಬ್ ದಾಳಿ ಆಗುತ್ತದೆ. ಹಿಂದೆ ಬರಾಕ್ ಒಬಾಮಾ, ಜೋ ಬೈಡನ್ ಅವರು ಅಧ್ಯಕ್ಷರಾಗಿದ್ದಾಗಲೂ ಬಾಂಬ್ ದಾಳಿ ಆಗಿದೆ. ಇದು ವರ್ಗ, ಸಾಮ್ರಾಜ್ಯಶಾಹಿಯ ಲಕ್ಷಣವಾಗಿದೆ. ಸಾಮ್ರಾಜ್ಯಶಾಹಿಯ ಲಕ್ಷಣವೇ ಯುದ್ಧ. ಸೈನ್ಯ ಮತ್ತು ಬೃಹತ್ ಕೈಗಾರಿಕೆಗಳು ಅಮೆರಿಕವನ್ನು ಆಳುತ್ತಿವೆ ಎಂದರು.


ಪ್ರಮುಖರಾದ ಶಿವಶಂಕರ ಹಿರೇಮಠ, ಗುಡಿಬಂಡೆ ಗಂಗಪ್ಪ, ನಾರಾಜ ಲಂಬು, ಸುನಿಲಕುಮರ ರೋಣದ, ವೃಂದಾ ಹೆಗಡೆ ಇದ್ದರು. ಪತ್ರಕರ್ತ ಸಂಗಮೇಶ ಮೆಣಸಿನಕಾಯಿ ನಿರ್ವಹಣೆ ಮಾಡಿದರು.

# ನಿಮ್ಮನ್ನು ನೀವೇ ಹೊಗಳಿಕೊಳ್ಳಲು ಸಮಾವೇಶವೇಕೆ?

## ಸರ್ಕಾರದ ಸಾಧನೆ ಬಗ್ಗೆ ಮಾತನಾಡಬೇಕಾದವರು ಜನರು: ಎಂಎಲ್‌ಸಿ ಎಚ್.ವಿಶ್ವನಾಥ್

**ಮೈಸೂರು, ಮೇ 18:** ರಾಜ್ಯ ಕಾಂಗ್ರೆಸ್ ಸರ್ಕಾರ ಸಮಾವೇಶ ಮಾಡುತ್ತಿರುವುದು ಯಾವ ಸಾಧನೆ ಮಾಡಿರುವುದಕ್ಕೆ ಎಂದು ಲೇವಡಿ ಮಾಡಿರುವ ವಿಧಾನ ಪರಿಷತ್ ಸದಸ್ಯ ಹೆಚ್. ವಿಶ್ವನಾಥ್, ಈ ಸಮಾವೇಶ ಹೈಕಮಾಂಡ್ ಹೆದರಿಸಲು ಎಂದು ವ್ಯಂಗ್ಯವಾಡಿದರು.

### ಸ್ಪೆಷಲ್ ಫ್ಲೈಟ್ ಸಿದ್ದರಾಮಯ್ಯ



ನಾರಾಯಣಮೂರ್ತಿ, ಸುಧಾ ಮೂರ್ತಿಯಂತಹ ಇನ್ಫೋಸಿಸ್ ಸಂಸ್ಥೆಯ ಸಂಸ್ಥಾಪಕರೇ ವಿಮಾನದಲ್ಲಿ ಎಕಾನಮಿ ಕ್ಲಾಸ್‌ನಲ್ಲಿ ಪ್ರಯಾಣ ಮಾಡುತ್ತಾರೆ. ಆದರೆ ಸಿದ್ದರಾಮಯ್ಯ ಡೆಲ್ಲಿಗೆ ಹೋದರೂ ಸ್ಪೆಷಲ್ ಫ್ಲೈಟ್, ಮೈಸೂರಿಗೆ ಬಂದರೂ ಸ್ಪೆಷಲ್ ಫ್ಲೈಟ್.. ರಾಜ್ಯದ ತೆರಿಗೆ ಹಣವನ್ನು ಸಿದ್ದರಾಮಯ್ಯ ಪೋಲು ಮಾಡುತ್ತಿದ್ದಾರೆ. ರಾಜ್ಯದಲ್ಲಿ ಪ್ರತಿಪಕ್ಷವೇ ಇಲ್ಲದಂತಾಗಿದೆ. ನಾನು ಕೂಡ ಬಿಜೆಪಿಯಲ್ಲಿದ್ದೇನೆ. ನನ್ನಷ್ಟು ಕೂಡ ವಿಪಕ್ಷ ನಾಯಕರು ಸರ್ಕಾರದ ವಿರುದ್ಧ ಮಾತನಾಡುತ್ತಿಲ್ಲ ಎಂದು ವಿಶ್ವನಾಥ್ ಹೇಳಿದರು.

ಮೈಸೂರಿನ ಪತ್ರಕರ್ತರ ಭವನದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ಸಾಧನಾ ಸಮಾವೇಶ ಏತಕ್ಕೆ ಹಿಜಾಬ್ ಬೇಕು ಎಂದು ಕೇಳಿದವರು ಯಾರು? ರಾಜ್ಯದಲ್ಲಿ ವಿರೋಧ ಪಕ್ಷವೇ ಇಲ್ಲದಂದಾಗಿದೆ. ಇನ್ನು ಸಾಂಸ್ಕೃತಿಕ ನಗರಿ ಡ್ರಗ್ಸ್ ನಗರಿಯಾಗಿದೆ ಎಂದು ವಾಗ್ದಾಳಿ ನಡೆಸಿದರು.

ಏನು ಸಾಧನೆ ಮಾಡಿದ್ದೀರಾ ಅಂತ ಸಮಾವೇಶ ಮಾಡ್ತಿದೀರಾ. ಸಾಧನೆಯ ಬಗ್ಗೆ ಮಾತನಾಡ ಬೇಕಿರುವುದು ಸಾರ್ವಜನಿಕರು. ನಿಮ್ಮನ್ನು ನೀವೇ ಹೊಗಳಿಕೊಳ್ಳುವುದಕ್ಕೆ ಸಾಧನೆ ಸಮಾವೇಶ ಮಾಡ್ತಿದೀರಾ? ಇದು ಜನರನ್ನು ಮರೆತಿರುವ ಸರ್ಕಾರ. ಕೇವಲ ಪ್ರಚಾರಗಳಿಗೆ ಸೀಮಿತವಾಗಿರುವ ಸರ್ಕಾರ ಸಾಧನಾ ಸಮಾವೇಶಕ್ಕೆ ಜನರನ್ನು ದುಡ್ಡು ಕೊಟ್ಟು ಕರೆಸ್ತೀರಾ? ಸಾಧನಾ ಸಮಾವೇಶದ ಖರ್ಚು ವೆಚ್ಚದ ಬಗ್ಗೆ ಯೋಚನೆ ಮಾಡ್ತಿದೀರಾ. ಆರ್ಥಿಕ ಸಂಕಷ್ಟದಲ್ಲಿರುವ ಕುಟುಂಬಕ್ಕೆ ಗ್ಯಾರಂಟಿ ಕೊಡುವುದು ಸರಿ. ಜನರ ತೆರಿಗೆ ದುಡ್ಡನ್ನು ಹೇಗೆ ಬೇಕೋ ಆ ರೀತಿ ಖರ್ಚು ಮಾಡ್ತಿದೀರಿ ಎಂದು ಹರಿಹಾಯ್ದರು.

ಹಿಜಾಬ್ ಬಗ್ಗೆ ನಿಮಗೆ ಯಾರಾದ್ರೂ ಮನವಿ ಮಾಡಿದ್ರಾ, ಹಿಂದೂ ಮುಸ್ಲಿಂ ನಡುವೆ ಜಗಳ ತಂದು ಹಾಕೋದೇ ನಿಮ್ಮ ಕೆಲಸಾ. ಮದ್ಯದ ಬೆಲೆ ನಿರಂತರವಾಗಿ ಏರಿಕೆ ಮಾಡ್ತಿದೀರಾ? ಯುವಕರು ಮಾದಕ ಪದಾರ್ಥಗಳ ವ್ಯಸನಿಗಳಾಗ್ತಿದ್ದಾರೆ ಎಂದು ಹೇಳಿದರು.

ಸಾಧನಾ ಸಮಾವೇಶಕ್ಕಾಗಿ ಕೋಟ್ಯಂತರ ರೂಪಾಯಿ ಖರ್ಚು ಮಾಡುತ್ತಿದ್ದಾರೆ. ಇದೊಂದು ಕೆಟ್ಟ ಸಂಪ್ರದಾಯ, ಆರ್ಥಿಕವಾಗಿ ಸಂಕಷ್ಟದಲ್ಲಿರುವ ಸಂಸಾರಕ್ಕೆ ಗ್ಯಾರಂಟಿಗಳನ್ನು ನೀಡಬೇಕಿತ್ತು. ಗ್ಯಾರಂಟಿಗಳಿಗೋಸ್ಕರ ಎಲ್ಲ ಬೆಲೆಗಳನ್ನು ಹೆಚ್ಚು ಮಾಡಿದ್ದೀರಿ. ಒಂದು ಬಿಯರ್ ಬೆಲೆ 250 ರೂಪಾಯಿ ಮಾಡಿದ್ದಾರೆ. 50 ರೂಪಾಯಿ ಕೊಟ್ಟರೆ ಒಂದು ಪ್ಯಾಕೆಟ್ ಗಾಂಜಾ ಸಿಗುತ್ತೆ. ಇದರಿಂದ ಯುವಕರು ಗಾಂಜಾ ವ್ಯಸನಕ್ಕೆ ಮೊರೆ ಹೋಗುತ್ತಿದ್ದಾರೆ. ಮೈಸೂರು ಗಾಂಜಾ, ಅಫೀಮು ಕೇಂದ್ರವಾಗುತ್ತಿದೆ ಎಂದು ಎಚ್ ವಿಶ್ವನಾಥ್ ದೂರಿದರು.

# ನಾರದ ಜಯಂತಿ ಸಂಭ್ರಮಾಚರಣೆ



ಬೀದರ ನಗರದ ಸರಸ್ವತಿ ಶಾಲೆಯ ಗಿರಿಜಾ ಸಭಾಂಗಣದಲ್ಲಿ ಕೇಶವ ಕಾರ್ಯ ಸಂವರ್ಧನ ಸಮಿತಿ ವತಿಯಿಂದ ನಡೆದ ನಾರದ ಜಯಂತಿ ಕಾರ್ಯಕ್ರಮದಲ್ಲಿ ವಕ್ತಾರ ಕೃಷ್ಣಾ ಜೋಶಿ ಮಾತನಾಡಿದರು.

**ಬೀದರ್, ಮೇ 18:** ಕೇಶವ ಕಾರ್ಯ ಸಂವರ್ಧನ ಸಮಿತಿ ವತಿಯಿಂದ ನಗರದ ಸರಸ್ವತಿ ಶಾಲೆಯ ಗಿರಿಜಾ ಸಭಾಂಗಣದಲ್ಲಿ ನಾರದ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ವಕ್ತಾರ ಕೃಷ್ಣ ಜೋಶಿ ಅವರು ನಾರದ ಮಹರ್ಷಿಗಳ ವ್ಯಕ್ತಿತ್ವ ಹಾಗೂ ಮಾಧ್ಯಮ ಕ್ಷೇತ್ರದ ಜವಾಬ್ದಾರಿಗಳ ಕುರಿತು ಉಪನ್ಯಾಸ ನೀಡಿ, ತ್ರಿಲೋಕ ಸಂಚಾರಿಯಾಗಿದ್ದ ಮಹರ್ಷಿ ನಾರದರು ಲೋಕಕಲ್ಯಾಣಕ್ಕಾಗಿ ಎಲ್ಲೆಡೆ ಸುದ್ದಿಯನ್ನು ತಲುಪಿಸುವ ಕಾರ್ಯ ನಿರ್ವಹಿಸಿದ್ದರು.

ಸಾಮಾನ್ಯವಾಗಿ ನಾರದರನ್ನು 'ಕಲಹಪ್ರಿಯ' ಎಂದು ಅರ್ಥೈಸಿಕೊಳ್ಳಲಾಗುತ್ತದಾದರೂ, ಅವರು ಧರ್ಮ ಸಂಸ್ಥಾಪನೆಗಾಗಿ ಸತ್ಯಸುದ್ದಿಗಳನ್ನು ಹರಡುವ ಕಾರ್ಯ ಮಾಡುತ್ತಿದ್ದರು ಎಂದು ತಿಳಿಸಿದರು.

18 ಪುರಾಣಗಳಲ್ಲಿ ಒಂದಾದ ನಾರದ ಪುರಾಣದಲ್ಲಿ ಮಾಧ್ಯಮಗಳ ಜವಾಬ್ದಾರಿಗಳ ಕುರಿತು ಮಹತ್ವದ ವಿಚಾರಗಳು ಉಲ್ಲೇಖಗೊಂಡಿವೆ. ನಾರದರು ನೀಡಿದ 84 ಭಕ್ತಿ ಸೂತ್ರಗಳಲ್ಲಿ ಸಮಾಜಕ್ಕೆ ಯಾವ ರೀತಿಯ ಸಂದೇಶಗಳನ್ನು ತಲುಪಿಸಬೇಕು ಎಂಬುದರ ಬಗ್ಗೆಯೂ ಸ್ಪಷ್ಟ ಮಾರ್ಗದರ್ಶನವಿದೆ ಎಂದು ವಿವರಿಸಿದರು.

1826ರಲ್ಲಿ ಆರಂಭವಾದ ಭಾರತದ ಮೊದಲ ಪತ್ರಿಕೆ 'ಉದ್ಧಂತ ಮಾರ್ತಾಂಡ' ಪತ್ರಿಕೆಯ ಸಂಪಾದಕೀಯದಲ್ಲಿಯೂ ನಾರದ ಮಹರ್ಷಿಗಳ ಉಲ್ಲೇಖವಿದ್ದು, ಮೇ 30ರಂದು ನಾರದ ಜಯಂತಿಯ ದಿನವೇ ಆ ಪತ್ರಿಕೆ ಆರಂಭಗೊಂಡಿತ್ತು ಎಂದು ಹೇಳಿದರು.

ಮಾಧ್ಯಮ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರಿಗೆ ಎಲ್ಲಾ ಕ್ಷೇತ್ರಗಳ ಮಾಹಿತಿಗಳು ಲಭ್ಯವಾಗುತ್ತವೆ. ಆದ್ದರಿಂದ ಪ್ರಕೃತಿಗೆ ಪೂರಕವಾಗಿರುವ ಹಾಗೂ ಸಮಾಜದ ಸ್ವಾಸ್ಥ್ಯ ಕಾಪಾಡುವ ಸುದ್ದಿಗಳನ್ನು ಪ್ರಸಾರ ಮಾಡುವುದು ಇಂದಿನ ಮಾಧ್ಯಮಗಳ ಜವಾಬ್ದಾರಿಯಾಗಿದೆ. ಸಮಾಜದಲ್ಲಿ ಕಲಹ ಹುಟ್ಟಿಸುವ ಸುದ್ದಿಗಳ ಬದಲು ಜನರನ್ನು ಒಗ್ಗೂಡಿಸುವ ಮತ್ತು ಸಮಾಜಮುಖಿ ಚಿಂತನೆ ಬೆಳೆಸುವ ಸುದ್ದಿಗಳಿಗೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು. ಪತ್ರಕರ್ತ ಚನ್ನಬಸವ ಮೊಕ್ತೆದಾರ್, ನಾಗೇಶ್ ಚಿನ್ನಾರೆಡ್ಡಿ, ಆರ್‌ಎಸ್‌ಎಸ್ ವಿಭಾಗ ಸಂಘ ಚಾಲಕ ಹನುಮಂತರಾವ್ ಪಾಟೀಲ್, ವಿಭಾಗ ಪ್ರಚಾರಕ ವಿಜಯ್ ಮಹಾಂತೇಶ್ ಹಾಜರಿದ್ದರು. ಶಿವಕಾಂತ್ ಪಾಟೀಲ್ ನಿರೂಪಿಸಿದರು. ಸತೀಶ್ ಪಾಂಚಾಳ ಸ್ವಾಗತಿಸಿದರು. ಸಮಿತಿಯ ಕಾರ್ಯದರ್ಶಿ ಎನ್. ಕೃಷ್ಣಾರೆಡ್ಡಿ ವಂದಿಸಿದರು.

# ಪ್ರತಿಭೆ ಉತ್ತೇಜನಕ್ಕೆ ಪುರಸ್ಕಾರ ಅಗತ್ಯ: ಸಚಿವ ಬೋಸರಾಜು


ರಾಯಚೂರು ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಗಾಣಿಗ ಸಮಾಜದ ಜಿಲ್ಲಾ ಘಟಕ ಹಾಗೂ ತಾಲ್ಲೂಕು ಘಟಕದ ವತಿಯಿಂದ ಭಾನುವಾರ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ, ಪಿಯು ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ 3ನೇ ವರ್ಷದ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭವನ್ನು ಸಚಿವ ಎನ್.ಎಸ್.ಭೋಸರಾಜು ಅವರು ಉದ್ಘಾಟಿಸಿದರು. ಅಭಿನವ ರಾಚೋಟಿ ವೀರಶಿವಾಚಾರ್ಯ, ಕಿಲ್ಲೆ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ, ಗಾಣಿಗ ಸಮಾಜದ ಜಿಲ್ಲಾ ಘಟಕದ ಚನ್ನಪ್ಪ ಸಜ್ಜನ್ ಅವರಿದ್ದರು.

**ರಾಯಚೂರು, ಮೇ 18:** ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ, ಪ್ರೋತ್ಸಾಹಿಸಿ, ಉತ್ತಮ ಭವಿಷ್ಯ ನಿರ್ಮಾಣಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳು ಅಗತ್ಯ ಎಂದು ಸಚಿವ ಎನ್.ಎಸ್. ಬೋಸರಾಜು ಹೇಳಿದರು.

ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಗಾಣಿಗ ಸಮಾಜದ ಜಿಲ್ಲಾ ಘಟಕ ಹಾಗೂ ತಾಲ್ಲೂಕು ಘಟಕದ ವತಿಯಿಂದ ಭಾನುವಾರ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ, ಪಿಯು ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ 3ನೇ ವರ್ಷದ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪ್ರೋತ್ಸಾಹ ನೀಡುತ್ತಿರುವ ಗಾಣಿಗ ಸಮಾಜದ ಕಾರ್ಯ ಶ್ಲಾಘನೀಯ, ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಇನ್ನೂ ಪ್ರೋತ್ಸಾಹ ಅಗತ್ಯ. ಸಮಾಜದ ಸಂಘಟನೆಯಿಂದ ಮಾತ್ರ ಅಭಿವೃದ್ಧಿ ಕಾರ್ಯ ಸಾಧ್ಯ. ಸಮಾಜದ ಅಭಿವೃದ್ಧಿ ಕಾರ್ಯಗಳಿಗೆ ಸರ್ಕಾರ ಸದಾ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದರು.

ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ಇನ್ನಷ್ಟು ಪ್ರೋತ್ಸಾಹ ಅಗತ್ಯವಿದೆ. ಈ ನಿಟ್ಟಿನಲ್ಲಿ ಸಮಾಜ ಪ್ರಮುಖ ಪಾತ್ರ ವಹಿಸಬೇಕು. ವಿದ್ಯಾರ್ಥಿಗಳಿಗೆ ಶಿಕ್ಷಣ, ವಸತಿ, ವಿದ್ಯಾರ್ಥಿವೇತನ ಸೇರಿದಂತೆ ಎಲ್ಲ ರೀತಿಯ ನೆರವು ನೀಡುವ ಕೆಲಸವನ್ನು ಸಮಾಜ ಮತ್ತಷ್ಟು ವಿಸ್ತರಿಸಬೇಕು ಎಂದು ಹೇಳಿದರು.

ನಗರ ಶಾಸಕ ಡಾ. ಶಿವರಾಜ್ ಪಾಟೀಲ ಮಾತನಾಡಿ, ಗಾಣಿಗ ಸಮಾಜದ ಭವನ ನಿರ್ಮಾಣಕ್ಕಾಗಿ ಮುಂದಿನ ಒಂದು ವರ್ಷದೊಳಗೆ 25 ಲಕ್ಷ ಅನುದಾನ ನೀಡಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡಲು ಶಿಕ್ಷಣವೇ ಪ್ರಮುಖ ಸಾಧನವಾಗಿದ್ದು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉನ್ನತ ಶಿಕ್ಷಣ ಅತ್ಯಗತ್ಯ. ಇಂದು ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಮುಂದೆ ಬರುತ್ತಿದ್ದಾರೆ. ಆದರೆ ತಂತ್ರಜ್ಞಾನವು ವೇಗವಾಗಿ ಕಾಲಿಡುತ್ತಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಉದ್ಯೋಗಾವ ಕಾಶಗಳು ಕಡಿಮೆಯಾಗುತ್ತಿವೆ. ಶಿಕ್ಷಣದಲ್ಲಿ ಮುಂದಿದ್ದರೂ ತಂತ್ರಜ್ಞಾನದ ಯುಗದಲ್ಲಿ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸವಾಲಾಗಿ ಪರಿಣಮಿಸಿದೆ ಕೇವಲ ಅಂಕಗಳಿಸಿದರೆ ಸಾಲದು. ಬದಲಾಗುತ್ತಿರುವ ತಂತ್ರಜ್ಞಾನ ಯುಗಕ್ಕೆ ತಕ್ಕಂತೆ ಕೌಶಲ ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದರು.

ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಸೋಮವಾರ ಪೇಟೆಯ ಅಭಿನವ ರಾಚೋಟಿವೀರ ಶಿವಾಚಾರ್ಯ, ಕಿಲ್ಲೆ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ, ಗಾಣಿಗ ಸಮಾಜದ ಜಿಲ್ಲಾ ಘಟಕದ ಚನ್ನಪ್ಪ ಸಜ್ಜನ್, ಕೆಪಿಸಿಸಿ ಸದಸ್ಯ ಅಮರಗುಂಡಪ್ಪ ಮೇಟಿ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಉಪಕುಲಸಚಿವ ಜಿ.ಎಸ್. ಬಿರಾದಾರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೊಕ್ರಾಣಿ, ಬಸಪ್ಪ ಹಳ್ಳಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಚಿನ್ನ ಖರೀದಿ ಬೇಡ, ರಸಗೊಬ್ಬರ ಮಿತಬಳಕೆ ಅಚ್ಛೇದಿನಗಳಾ: ವಿ.ಎಸ್.ಉಗ್ರಪ್ಪ ಲೇವಡಿ



**ಚಾಮರಾಜನಗರ, ಮೇ 18:** ಧಾರ್ಮಿಕ ಆಚರಣೆಗಳಿಗೆ ಚಿನ್ನಾಭರಣಗಳು ಬೇಕೇ ಬೇಕು. ಚಿನ್ನ ಖರೀದಿಸದಿರಲು ಸಾಧ್ಯನಾ. ಪ್ರಧಾನಿ ನರೇಂದ್ರ ಮೋದಿ ಹತಾಶೆಯ ಹೇಳಿಕೆ ನೀಡುತ್ತಿದ್ದಾರೆ. ಚಿನ್ನ ಖರೀದಿ ಬೇಡ, ಇಂಧನ ಮಿತ ಬಳಕೆ ಮಾಡಿ ಎಂಬ ಮಾತಿನ ಮೂಲಕ ತಮ್ಮ ತಪ್ಪನ್ನು ಮುಚ್ಚಿಕೊಳ್ಳುವ ಯತ್ನವಾಗಿದೆ ಎಂದು ಮಾಜಿ ಸಂಸದ ವಿ.ಎಸ್. ಉಗ್ರಪ್ಪ ಟೀಕಿಸಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪ್ರಧಾನಿ ಮೋದಿ ಕೊಟ್ಟ ಮಾತಿನಂತೆ ನಡೆದು ಕೊಳ್ಳುತ್ತಿಲ್ಲ. ಚಿನ್ನ ಖರೀದಿಸಬೇಡಿ, ರಸಗೊಬ್ಬರ ಬಳಸಬೇಡಿ ಎನ್ನುವುದು ಅಚ್ಛೇ ದಿನಗಳಾ? ಮೋದಿ ಅಧಿಕಾರಕ್ಕೆ ಬಂದಾಗ ಇದ್ದ ದೇಶದ ಸಾಲ 52 ಲಕ್ಷ ಕೋಟಿ. ಇದೀಗ ಅದು 160 ಲಕ್ಷ ಕೋಟಿಗೆ ಏರಿಕೆ ಕಂಡಿದೆ ಎಂದಿದ್ದಾರೆ.

**ಹೈಕಮಾಂಡ್ ಹೇಳಿದಂತೆ ಕೇಳುತ್ತೇನೆ**

ಸಿಎಂ ಬದಲಾವಣೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಈಗಿರುವ ಗೊಂದಲಕ್ಕೆ ನಾನು ಮತ್ತೊಂದು ಗೊಂದಲ ಮಾಡಲು ಹೋಗಲ್ಲ. ಆ ವಿಚಾರದಲ್ಲಿ ನಾನು ಒಬ್ಬ ಸಣ್ಣ ಕಾರ್ಯಕರ್ತ. ಇದನ್ನು ತೀರ್ಮಾನ ಮಾಡುವವರು ಹೈಕಮಾಂಡ್ ಅಷ್ಟೇ. ಇರುವವರನ್ನು ಮುಂದುವರಿಸುತ್ತಾರೋ, ಮತ್ತೊಬ್ಬರನ್ನು ತರುತ್ತಾರೋ ಅದು ಅವರಿಗೆ ಬಿಟ್ಟ ವಿಚಾರ. ನಾವು ಹೈಕಮಾಂಡ್ ಹೇಳಿದಂಗೆ ಕೇಳುತ್ತೇವೆ ಅಷ್ಟೇ ಎಂದು ಹೇಳಿದ್ದಾರೆ.

# ಚೀನಾ ಶೃಂಗಸಭೆಯಲ್ಲಿ ಟ್ರಂಪ್ 17 ಶತಕೋಟಿ ಡಾಲರ್ ವಾರ್ಷಿಕ ಕೃಷಿ ಪ್ರತಿಜ್ಞೆ, ಬೋಯಿಂಗ್ ಒಪ್ಪಂದ

**ವಾಷಿಂಗ್ಟನ್, ಮೇ 18:** ಅಕ್ಟೋಬರ್ 2025 ರಲ್ಲಿ ಮಾಡಿದ ಹಿಂದಿನ ಸೋಯಾಬೀನ್ ಬದ್ಧತೆಗಳ ಜೊತೆಗೆ, ಮುಂದಿನ ಮೂರು ವರ್ಷಗಳಲ್ಲಿ ಚೀನಾ ವಾರ್ಷಿಕವಾಗಿ ಕನಿಷ್ಠ 17 ಶತಕೋಟಿ ಡಾಲರ್ ಮೌಲ್ಯದ ಅಮೆರಿಕದ ಕೃಷಿ ಉತ್ಪನ್ನಗಳನ್ನು ಖರೀದಿಸಲು ಬದ್ಧವಾಗಿರುವ ಒಪ್ಪಂದವನ್ನು ಟ್ರಂಪ್ ಆಡಳಿತ ಪಡೆದಿದೆ.

ವ್ಯಾಪಾರದ ಹೊರತಾಗಿ, ಒಪ್ಪಂದವು ಎರಡು ಹೊಸ ದ್ವಿಪಕ್ಷೀಯ ಕಾರ್ಯವಿಧಾನಗಳನ್ನು ಸ್ಥಾಪಿಸುತ್ತದೆ, ಅಮೆರಿಕ–ಚೀನಾ ವ್ಯಾಪಾರ ಮಂಡಳಿ ಮತ್ತು ಅಮೆರಿಕ–ಚೀನಾ ಹೂಡಿಕೆ ಮಂಡಳಿ, ಅಧ್ಯಕ್ಷ ಟ್ರಂಪ್ ಚೀನಾಕ್ಕೆ ನೀಡಿದ ಹೆಗ್ಗುರುತು ಭೇಟಿಯ ನಂತರ ಆರ್ಥಿಕ ಸಮನ್ವಯವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಇರಾನ್, ಉತ್ತರ ಕೊರಿಯಾ ಮತ್ತು ಹಾರ್ಮುಜ್ ಜಲಸಂಧಿ ಸೇರಿದಂತೆ ಪ್ರಮುಖ ಭೌಗೋಳಿಕ ರಾಜಕೀಯ ವಿಷಯಗಳ ಬಗ್ಗೆ ಎರಡೂ ಕಡೆಯವರು ಹೊಂದಾಣಿಕೆಯನ್ನು ಮತ್ತಷ್ಟು ಸೂಚಿಸಿದರು.

ದ್ವಿಪಕ್ಷೀಯ ಸಂಬಂಧಗಳನ್ನು ಸ್ಥಿರಗೊಳಿಸುವ ವಿಶಾಲ ಪ್ರಯತ್ನದ ಭಾಗವಾಗಿ ಮಂಡಿಸಲಾದ ಒಪ್ಪಂದವು 200 ಬೋಯಿಂಗ್ ವಿಮಾನಗಳಿಗೆ ಚೀನಾದ ಆರಂಭಿಕ ಆದೇಶವನ್ನು ಸಹ ಒಳಗೊಂಡಿದೆ, ಇದು 2017 ರಿಂದ ಬೀಜಿಂಗ್ನ ಮೊದಲ ಬದ್ಧತೆಯನ್ನು ಗುರುತಿಸುತ್ತದೆ. ಈ ಒಪ್ಪಂದವು ಉನ್ನತ ಕೌಶಲ್ಯ ಹೊಂದಿರುವ ಗಖ ಉತ್ಪಾದನಾ ಉದ್ಯೋಗಗಳನ್ನು ಬೆಂಬಲಿಸುತ್ತದೆ ಮತ್ತು ದೀರ್ಘಾವಧಿಯ ವಾಣಿಜ್ಯ ವಾಯುಯಾನ ಸಂಪರ್ಕಗಳನ್ನು ವಿಸ್ತರಿಸುತ್ತದೆ ಎಂದು ಶ್ವೇತಭವನ ಹೇಳಿದೆ. ವ್ಯಾಪಾರ ಮತ್ತು ಹೂಡಿಕೆ ಸಹಕಾರವನ್ನು ಬಲಪಡಿಸುವ ಮತ್ತು ಜಾಗತಿಕ ಆರ್ಥಿಕ ಸ್ಥಿರತೆಯನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ಕ್ರಮಗಳ ಕುರಿತು ಇಬ್ಬರೂ ನಾಯಕರು ಒಪ್ಪಿಕೊಂಡ ಮಾತುಕತೆಗಳ ನಂತರ ಈ ಘೋಷಣೆ ನಡೆಯಿತು. ವಾಷಿಂಗ್ಟನ್ ಈ ಚರ್ಚೆಗಳು ಹಲವಾರು ಕಾರ್ಯತಂತ್ರದ ಮತ್ತು ಆರ್ಥಿಕ ಸಮಸ್ಯೆಗಳನ್ನು ಒಳಗೊಂಡಿವೆ ಎಂದು ವಿವರಿಸಿದೆ. 2017 ರ ನಂತರದ ಅತ್ಯಂತ ಪರಿಣಾಮಕಾರಿ ಅಮೆರಿಕ–ಚೀನಾ ಒಪ್ಪಂದವನ್ನು ಶ್ವೇತಭವನ ಎಂದು ಕರೆಯುತ್ತದೆ.

ಈ ಐತಿಹಾಸಿಕ ಒಪ್ಪಂದದ ಮೂಲಾಧಾರವಾಗಿ,



ಅಧ್ಯಕ್ಷ ಟ್ರಂಪ್ ಮತ್ತು ಅಧ್ಯಕ್ಷ ಕ್ಸಿ ದ್ವಿಪಕ್ಷೀಯ ಆರ್ಥಿಕ ಸಂಬಂಧವನ್ನು ಅತ್ಯುತ್ತಮವಾಗಿಸಲು **ಎರಡು ಹೊಸ ಸಂಸ್ಥೆಗಳನ್ನು ಚಾರ್ಟರ್ ಮಾಡಿದರು:** ಅಮೆರಿಕ –ಚೀನಾ ವಾಣಿಜ್ಯ ಮಂಡಳಿ ಮತ್ತು ಅಮೆರಿಕ–ಚೀನಾ ಹೂಡಿಕೆ ಮಂಡಳಿ, ಸೂಕ್ಷ್ಮವಲ್ಲದ ಸರಕುಗಳಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು ನಿರ್ವಹಿಸಲು ಮತ್ತು ಹೂಡಿಕೆ–ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಲು ಸಾಂಸ್ಥಿಕ ಚೌಕಟ್ಟುಗಳನ್ನು ಒದಗಿಸುವ ಉದ್ದೇಶವನ್ನು ಹೊಂದಿವೆ. ಯಟ್ರಿಯಮ್, ಸ್ಕ್ಯಾಂಡಿಯಂ, ನಿಯೋಡೈಮಿಯಮ್ ಮತ್ತು ಇಂಡಿಯಂನಂತಹ ವಸ್ತುಗಳು ಸೇರಿದಂತೆ ಅಪರೂಪದ ಭೂಮಿಯ ಪೂರೈಕೆ ಸರಪಳಿಗಳ ಕುರಿತು ಅಮೆರಿಕದ ಕಳವಳಗಳನ್ನು ಪರಿಹರಿಸಲು ಮತ್ತು ಉತ್ಪಾದನೆ ಮತ್ತು ಸಂಸ್ಕರಣಾ ಉಪಕರಣಗಳು ಮತ್ತು ತಂತ್ರಜ್ಞಾನಗಳ ಮೇಲಿನ ನಿರ್ಬಂಧಗಳನ್ನು ಸಡಿಲಿಸಲು ಚೀನಾ ಬದ್ಧವಾಗಿದೆ ಎಂದು ಶ್ವೇತಭವನ ಹೇಳಿದೆ. ಅಪರೂಪದ ಭೂಮಿಯ ಉತ್ಪಾದನೆ ಮತ್ತು ಸಂಸ್ಕರಣಾ ಉಪಕರಣಗಳು ಮತ್ತು ತಂತ್ರಜ್ಞಾನಗಳ ಮಾರಾಟದ ಮೇಲಿನ ನಿಷೇಧಗಳು ಅಥವಾ ನಿರ್ಬಂಧಗಳ ಕುರಿತು ಅಮೆರಿಕದ ಕಳವಳಗಳನ್ನು ಚೀನಾ ಸಹ ಪರಿಹರಿಸುತ್ತದೆ. ಕೃಷಿ ಕ್ಷೇತ್ರದಲ್ಲಿ, ಚೀನಾವು ಅಮೆರಿಕದ 400 ಕ್ಕೂ ಹೆಚ್ಚು ಗೋಮಾಂಸ ಸೌಲಭ್ಯಗಳ ಅವಧಿ ಮೀರಿದ ಪಟ್ಟಿಗಳನ್ನು ನವೀಕರಿಸುವ ಮೂಲಕ ಮತ್ತು ಹೊಸ ಅನುಮೋದನೆಗಳನ್ನು ಸೇರಿಸುವ ಮೂಲಕ ಅಮೆರಿಕದ ಗೋಮಾಂಸಕ್ಕೆ ಮಾರುಕಟ್ಟೆ ಪ್ರವೇಶವನ್ನು ಪುನಃಸ್ಥಾಪಿಸಲು ಒಪ್ಪಿಕೊಂಡಿತು, ಜೊತೆಗೆ ಅಮೆರಿಕದ ಕೃಷಿ ಇಲಾಖೆಯಿಂದ ಹೆಚ್ಚು ರೋಗಕಾರಕ ಪಕ್ಷಿ ಜ್ವರ ಮುಕ್ತವೆಂದು ಪ್ರಮಾಣೀಕರಿಸಲ್ಪಟ್ಟ ಅಮೆರಿಕದ ರಾಜ್ಯಗಳಿಂದ ಕೋಳಿ ಆಮದುಗಳನ್ನು ಪುನರಾರಂಭಿಸಿತು. ಶ್ವೇತಭವನದ ಪ್ರಕಾರ, ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯುವುದಕ್ಕೆ ವಿರೋಧ ಮತ್ತು ಉತ್ತರ ಕೊರಿಯಾದ ಪರಮಾಣು ಕರಣಕ್ಕೆ ಬೆಂಬಲ ಸೇರಿದಂತೆ ವಿಶಾಲ ಭೌಗೋಳಿಕ ರಾಜಕೀಯ ಕಾಳಜಿಗಳ ಕುರಿತು ಎರಡೂ ಕಡೆಯವರು ಸಹಕಾರವನ್ನು ಪುನರುಚ್ಚರಿಸಿದರು.

ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಲು ಸಾಧ್ಯವಿಲ್ಲ ಎಂದು ಇಬ್ಬರೂ ನಾಯಕರು ಒಪ್ಪಿಕೊಂಡರು, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಕರೆ ನೀಡಿದರು ಮತ್ತು ಯಾವುದೇ ದೇಶ ಅಥವಾ ಸಂಘಟನೆಗೆ ಸುಂಕ ವಿಧಿಸಲು ಅವಕಾಶ ನೀಡಲಾಗುವುದಿಲ್ಲ ಎಂದು ಒಪ್ಪಿಕೊಂಡರು. ಅಧ್ಯಕ್ಷ ಟ್ರಂಪ್ ಮತ್ತು ಅಧ್ಯಕ್ಷ ಕ್ಸಿ ಉತ್ತರ ಕೊರಿಯಾವನ್ನು ಪರಮಾಣು ಮುಕ್ತಗೊಳಿಸುವ ತಮ್ಮ ಹಂಚಿಕೆಯ ಗುರಿಯನ್ನು ದೃಢಪಡಿಸಿದರು. ಅಧ್ಯಕ್ಷ ಟ್ರಂಪ್ ಸೆಪ್ಟೆಂಬರ್ 24 ರಂದು ವಾಷಿಂಗ್ಟನ್‌ಗೆ ಭೇಟಿ ನೀಡುವಂತೆ ಅಧ್ಯಕ್ಷ ಕ್ಸಿ ಅವರನ್ನು ಆಹ್ವಾನಿಸಿದ್ದಾರೆ. ಈ ವರ್ಷದ ಕೊನೆಯಲ್ಲಿ ಜಿ 20 ಮತ್ತು ಎಪಿಇಸಿ ಶೃಂಗಸಭೆಗಳ ಆಯಾ ಆತಿಥೇಯರಾಗಿ ಎರಡೂ ದೇಶಗಳು ಪರಸ್ಪರ ಬೆಂಬಲಿಸುತ್ತವೆ.

# ಶಾಂತಿ ಒಪ್ಪಂದಕ್ಕೆ ಒಪ್ಪದಿದ್ದರೆ ಏನೂ ಉಳಿಯಲ್ಲ ಇರಾನ್‌ಗೆ ಅಮೆರಿಕ ಅಧ್ಯಕ್ಷ ಟ್ರಂಪ್ ಎಚ್ಚರಿಕೆ

**ನವದೆಹಲಿ, ಮೇ 18:** ಮಧ್ಯಪ್ರಾಚ್ಯದಲ್ಲಿ ಉಲ್ಬಣಗೊಂಡಿದ್ದ ಸಂಘರ್ಷ ಅಮೆರಿಕಾದ ಕದನ ವಿರಾಮದ ಬಳಿಕ ಕೊಂಚ ಮಟ್ಟಿಗೆ ತಣ್ಣಗಾಗಿತ್ತು.. ಆದರೆ ಸುದೀರ್ಘ ಒಂದು ತಿಂಗಳ ಅಂತರದ ಬಳಿಕ ಮತ್ತೆ ಅಮೇರೊಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯುದ್ಧದ ಮಾತುಗಳನ್ನಾಡಿದ್ದಾರೆ.. ನಮ್ಮ ಶಾಂತಿ ಒಪ್ಪಂದಕ್ಕೆ ಒಪ್ಪದಿದ್ದರೆ ಏನೂ ಉಳಿಯಲ್ಲ ಎಂದು ನೇರವಾಗಿ ಇರಾನ್‌ಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಟ್ರಂಪ್ ತಮ್ಮ ಸಾಮಾಜಿಕ ಜಾಲತಾಣ ಟ್ರೂತ್ ಸೋಶಿಯಲ್ ನಲ್ಲಿ ಈ ಹೇಳಿಕೆ ನೀಡಿದ್ದು, ಸಮಯ ವೇಗವಾಗಿ ಮುಗಿಯುತ್ತಿದೆ. ಅವರು ಬೇಗ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಅವರಿಂದ ಏನೂ ಉಳಿಯುವುದಿಲ್ಲ. ಸಮಯ ಅತ್ಯಂತ ಮಹತ್ವದ್ದು! ಎಂದು ಟ್ರಂಪ್ ತಮ್ಮ ಪೋಸ್ಟ್ನಲ್ಲಿ ಬರೆದಿದ್ದಾರೆ.

ಶಾಂತಿ ಮಾತುಕತೆಗೆ ಪ್ರಸ್ತಾಪ ಇಟ್ಟಿರುವ ಟ್ರಂಪ್ ಹೊಸ ಐದು ಕಂಡಿಷನ್ ಹಾಕಿದ್ದಾರೆ. ಇರಾನ್ ತನ್ನ ಬಳಿ ಇರುವ 400 ಕಿಲೋಗ್ರಾಂನಷ್ಟು ಪುಷ್ಟೀಕರಿಸಿದ ಯುರೇನಿಯಂ ಅನ್ನು ಅಮೆರಿಕಕ್ಕೆ ಒಪ್ಪಿಸಬೇಕು. ಇರಾನ್ನ ಹಲವು ಪರಮಾಣು ಕೇಂದ್ರಗಳ ಪೈಕಿ ಕೇವಲ ಒಂದೇ ಒಂದು ಸ್ಥಾವರ ಮಾತ್ರ ಕಾರ್ಯನಿರ್ವಹಿಸಲು ಅನುಮತಿ ನೀಡಲಾಗುವುದು. ಉಳಿದವುಗಳನ್ನು ಮುಚ್ಚಬೇಕು. ವಿದೇಶಗಳಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾಗಿರುವ ಇರಾನ್ನ ಒಟ್ಟು ಆಸ್ತಿಯಲ್ಲಿ ಕೇವಲ ಶೇ. 25 ರಷ್ಟನ್ನು ಬಿಡುಗಡೆ ಮಾಡಲು ಕೂಡ ಅಮೆರಿಕ ಒಪ್ಪಿಲ್ಲ ಈ ಹಿಂದಿನ ಯುದ್ಧ ಮತ್ತು ನಿರ್ಬಂಧಗಳಿಂದ ಇರಾನ್ ಅನುಭವಿಸಿದ ಆರ್ಥಿಕ ನಷ್ಟಕ್ಕೆ ಅಮೆರಿಕ ಯಾವುದೇ ಪರಿಹಾರ



ನೀಡುವುದಿಲ್ಲ, ಪ್ರಸ್ತುತ ವಿವಿಧ ರಂಗಗಳಲ್ಲಿ ನಡೆಯುತ್ತಿರುವ ಸಂಘರ್ಷಗಳ ಸಂಪೂರ್ಣ ಅಂತ್ಯವು, ಈಗ ನಡೆಯುತ್ತಿರುವ ಮಾತುಕತೆಯ ಯಶಸ್ವಿ ಮುಕ್ತಾಯದ ಮೇಲಷ್ಟೇ ನಿರ್ಧಾರವಾಗುತ್ತದೆ ಎಂದು ಅಮೇರಿಕಾ ಹೇಳಿದೆ.

ಅಮೆರಿಕದ ಈ ಷರತ್ತುಗಳಿಗೆ ಇರಾನ್ ಮಾಧ್ಯಮಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು ಯುದ್ಧದ ಮೂಲಕ ಪಡೆಯಲು ಸಾಧ್ಯವಾಗದ ಲಾಭವನ್ನು ಅಮೆರಿಕ ಈಗ ರಾಜತಾಂತ್ರಿಕತೆಯ ಹೆಸರಿನಲ್ಲಿ ಪಡೆಯಲು ಸಂಚು ರೂಪಿಸುತ್ತಿದೆ. ಇದು ಮಾತುಕತೆಯನ್ನು ಮತ್ತಷ್ಟು ಜಟಿಲಗೊಳಿಸಲಿದೆ' ಎಂದು 'ಮೆಹರ್' ಸುದ್ದಿ ಸಂಸ್ಥೆ ವರದಿ ಮಾಡಿದೆ. ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಾಕೇಯ್ ಅವರು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಅಮೆರಿಕದ ವಿರುದ್ಧ ವಾಗ್ದಾಳಿ ನಡೆಸಿದ್ದು, ಇದು ಜಾಗತಿಕ ಇಂಧನ ಮಾರುಕಟ್ಟೆಯನ್ನು ರಕ್ಷಿಸುವ ನೆಪದಲ್ಲಿ ಅಮೆರಿಕ ಮತ್ತು ಇಸ್ರೇಲ್ ಆಡುತ್ತಿರುವ ಸಿನಿಕತನದ ಆಟ. ಮೊದಲು ತಾವೇ ಬಿಕ್ಕಟ್ಟು ಮತ್ತು ಯುದ್ಧವನ್ನು ಸೃಷ್ಟಿಸುವುದು, ನಂತರ ಶಾಂತಿ ಸ್ಥಾಪನೆಯ ಹೆಸರಿನಲ್ಲಿ ಮತ್ತಷ್ಟು ದಾಳಿ ನಡೆಸುವುದು ಅವರ ಹಳೆಯ ಚಾಳಿಯಾಗಿದೆ. ಇಡೀ ಪ್ರದೇಶವನ್ನು ಸ್ಮಶಾನವಾಗಿಸಿ ಅದಕ್ಕೆ ಶಾಂತಿ ಎಂದು ಹೆಸರಿಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಇರಾನ್ ಮೇಲೆ ಮತ್ತೊಮ್ಮೆ ದಾಳಿ ನಡೆಸಲು ಅಮೆರಿಕ ಸಿದ್ಧತೆ ನಡೆಸುತ್ತಿದೆ ಎಂಬ ಬಲವಾದ ಸುದ್ದಿಗಳ ಬೆನ್ನಲ್ಲೇ ಡೊನಾಲ್ಡ್ ಟ್ರಂಪ್ ಅವರು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಿಗೆ ತುರ್ತು ಫೋನ್ ಕರೆ ಮಾಡಿ ಸುದೀರ್ಘವಾಗಿ ಚರ್ಚಿಸಿದ್ದಾರೆ. ಈ ಮಾತುಕತೆ ಬೆನ್ನಲೆ ಇಸ್ರೇಲ್ ಪ್ರಧಾನಿ ನೆತನ್ಯಾಹು ಭದ್ರತಾ ಸಭೆ ನಡೆಸಿರುವುದು ಹಲವು ಅನುಮಾನಕ್ಕೆ ಕಾರಣವಾಗಿದ್ದು ಹೊಅ ವೈಮಾನಿಕ ದಾಳಿಗೆ ಎರಡು ದೇಶಗಳು ಸಜ್ಜಾಗಿವೆಯಾ ಅನ್ನೊ ಅನುಮಾನ ಹುಟ್ಟಿಸಿದೆ.

ಚೀನಾ ಪ್ರವಾಸದಿಂದ ಮರಳಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಬಗ್ಗೆ ನಿರ್ಣಾಯಕ ನಿರ್ಧಾರವನ್ನು ತೆಗೆದುಕೊಳ್ಳಲಿದ್ದಾರೆ. ಇರಾನ್ ಜೊತೆಗಿನ ಮಾತುಕತೆ ಪ್ರಗತಿ ಕಾಣದಿರುವ ಹಿನ್ನೆಲೆಯಲ್ಲಿ ವಾಯುದಾಳಿಗಳನ್ನು ಪುನಾರಂಭಿಸಲು ಅವರ ಉನ್ನತ ಸಹಾಯಕರು ಯೋಜನೆಗಳನ್ನು ರೂಪಿಸುತ್ತಿದ್ದಾರೆಂದು ಎಂದು ಹೇಳಲಾಗುತ್ತಿದೆ. ಆಯಕಟ್ಟಿನ ಹಾರ್ಮುಝ್ ಜಲಸಂಧಿಯನ್ನು ಮರಳಿ ತೆರೆಯುವುದಕ್ಕೆ ಅವಕಾಶ ಮಾಡಿಕೊಡುವ ಸಂಧಾನಕ್ರಮವನ್ನು ರೂಪಿಸಲು ಇತರ ದೇಶಗಳು ಪ್ರಯತ್ನಿಸುತ್ತಿರುವ ನಡುವೆಯೇ ಟ್ರಂಪ್ ಮಿಲಿಟರಿ ಕಾರ್ಯಾಚರಣೆಯನ್ನು ಪುನಾರಂಭಿಸುವ ಬಗ್ಗೆ ಚಿಂತಿಸುತ್ತಿದ್ದು ಮುಂದಿನ 24 ಗಂಟೆಗಳಲ್ಲಿ ಹೊಸ ದಾಳಿ ಸಾಧ್ಯತೆ ನಿರೀಕ್ಷೆ ಮಾಡಲಾಗುತ್ತಿದೆ.

# ಇರಾನ್ ಸಂಘರ್ಷದ ಮಧ್ಯೆ ಸಾಲ, ಬಾಂಡ್ ಮಾರುಕಟ್ಟೆಯ ಪ್ರಕ್ಷುಬ್ಧತೆಯ ಬಗ್ಗೆ ಜಿ7 ಹಣಕಾಸು ಸಚಿವರ ಎಚ್ಚರಿಕೆ

**ಪ್ಯಾರಿಸ್, ಮೇ 18:** ಇರಾನ್ ಯುದ್ಧದ ನಂತರ ಇಂಧನ ಮತ್ತು ಪೂರೈಕೆ ಸರಪಳಿಗಳಲ್ಲಿನ ಅಡಚಣೆಯಿಂದಾಗಿ ಹೆಚ್ಚುತ್ತಿರುವ ಸಾರ್ವಜನಿಕ ಸಾಲ, ಅಸ್ಥಿರ ಬಾಂಡ್ ಮಾರುಕಟ್ಟೆಗಳು ಮತ್ತು ಜಾಗತಿಕ ಆರ್ಥಿಕ ಕುಸಿತದ ಕುರಿತು ಎರಡು ದಿನಗಳ ಚರ್ಚೆಗಾಗಿ ಜಿ7 ರಾಷ್ಟ್ರಗಳ ಹಣಕಾಸು ಮಂತ್ರಿಗಳು ಮತ್ತು ಕೇಂದ್ರ ಬ್ಯಾಂಕ್ ಮುಖ್ಯಸ್ಥರು ಸೋಮವಾರ ಫ್ರಾನ್ಸ್‌ನಲ್ಲಿ ಒಟ್ಟುಗೂಡಿದ್ದಾರೆ. ಎವಿಯನ್‌ನಲ್ಲಿ ಎರಡು ದಿನಗಳ ಜಿ7 ರ ದುಂಡುಮೇಜಿನ ಸಭೆ ಅಧ್ಯಕ್ಷತೆಯಲ್ಲಿ ನಡೆಯುತ್ತಿದ್ದು, ಹೆಚ್ಚಿನ ಇಂಧನ ಬೆಲೆಗಳು ಹಣದುಬ್ಬರವನ್ನು ಉತ್ತೇಜಿಸಬಹುದು ಮತ್ತು ಜಾಗತಿಕವಾಗಿ ಮತ್ತಷ್ಟು ಬಡ್ಡಿದರ ಏರಿಕೆಯನ್ನು ಪ್ರಚೋದಿಸಬಹುದು ಎಂದು ಹೂಡಿಕೆದಾರರು ಭಯಪಡುತ್ತಿರುವುದರಿಂದ ಇದು ಬಂದಿದೆ. ಭಯೋತ್ಪಾದನೆಗೆ ಹಣಕಾಸು ಒದಗಿಸುವಿಕೆ ಮತ್ತು ನಿರ್ಣಾಯಕ ಖನಿಜಗಳ ಪೂರೈಕೆಯನ್ನು ಸಹ ಶೃಂಗಸಭೆಯು ತಿಳಿಸುತ್ತದೆ ಎಂದು ಅಮೆರಿಕೆ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಹೇಳಿದರು.

"ಜಾಗತಿಕ ಆರ್ಥಿಕತೆ, ಜಾಗತಿಕ ಅಸಮತೋಲನ, ನಿರ್ಣಾಯಕ ಖನಿಜಗಳು ಮತ್ತು ಭಯೋತ್ಪಾದನೆಗೆ ಹಣಕಾಸು ಒದಗಿಸುವ ಬಗ್ಗೆ ಚರ್ಚಿಸಲು ನಾವು ಇಲ್ಲಿದ್ದೇವೆ" ಎಂದು ಬೆಸೆಂಟ್ ಸಭೆಯ ಮೊದಲು ಸುದ್ದಿಗಾರರಿಗೆ ತಿಳಿಸಿದರು. ಅಮೆರಿಕ, ಬ್ರಿಟನ್, ಕೆನಡಾ, ಫ್ರಾನ್ಸ್,



ಜರ್ಮನಿ, ಇಟಲಿ ಮತ್ತು ಜಪಾನ್ನ ಹಣಕಾಸು ಮಂತ್ರಿಗಳು ಮತ್ತು ಕೇಂದ್ರ ಬ್ಯಾಂಕ್ ಅಧಿಕಾರಿಗಳು ಎರಡು ದಿನಗಳ ಸಭೆಯಲ್ಲಿ ಭಾಗವಹಿಸುತ್ತಿದ್ದಾರೆ. ಚರ್ಚೆಗಳು ಜಾಗತಿಕ ಆರ್ಥಿಕತೆ ಎದುರಿಸುತ್ತಿರುವ ಸವಾಲುಗಳ ಕನಿಷ್ಠ ಸಾಮಾನ್ಯ ತಿಳಿವಳಿಕೆಯನ್ನು ಉಂಟುಮಾಡಬಹುದು ಎಂದು ಫ್ರಾನ್ಸ್ ಆಶಿಸಿದೆ. "ಕಳೆದ ದಶಕದಲ್ಲಿ ಜಾಗತಿಕ ಆರ್ಥಿಕತೆಯು ವಿಕಸನಗೊಂಡಿರುವ ರೀತಿ ಸ್ಪಷ್ಟವಾಗಿ ಸಮರ್ಥನೀಯವಲ್ಲ" ಎಂದು ಫ್ರೆಂಚ್ ಆರ್ಥಿಕತೆ ಮತ್ತು ಹಣಕಾಸು ಸಚಿವ ರೋಲ್ಯಾಂಡ್ ಲೆಸ್ಕ್ಯೂರ್ ಹೇಳಿದರು,

ಅಮೆರಿಕದ ದೊಡ್ಡ ಬಜೆಟ್ ಕೊರತೆ, ಯುರೋಪಿನ ದುರ್ಬಲ ನಾವೀನ್ಯತೆ ಕಾರ್ಯಕ್ಷಮತೆ ಮತ್ತು ಕೈಗಾರಿಕಾ ಅತಿಯಾದ ಸಾಮರ್ಥ್ಯದ ಜೊತೆಗೆ ಚೀನಾದ ಬಳಕೆ ನಿಧಾನವಾಗಿದೆ. ಈ ವರ್ಷದ ಆರಂಭದಲ್ಲಿ ವಾಷಿಂಗ್ಟನ್ ಹೊಸ 15 ಪ್ರತಿಶತ ಹೆಚ್ಚುವರಿ ಸುಂಕಗಳನ್ನು ವಿಧಿಸಿದ ನಂತರ ವ್ಯಾಪಾರ ಮತ್ತು ಸಾರ್ವಜನಿಕ ಸಾಲವು ಅತ್ಯಂತ ವಿವಾದಾತ್ಮಕ ವಿಷಯಗಳಲ್ಲಿ ಒಂದಾಗಿದೆ. ಡೊನಾಲ್ಡ್ ಟ್ರಂಪ್ ಬೀಜಿಂಗ್‌ಗೆ ಭೇಟಿ ನೀಡಿದ ಸ್ವಲ್ಪ ಸಮಯದ ನಂತರ ಮಾತುಕತೆಗಳು ನಡೆಯುತ್ತಿವೆ, 2017ರ ನಂತರ ಅಮೆರಿಕದ ಅಧ್ಯಕ್ಷರು ಬೀಜಿಂಗ್‌ಗೆ ಭೇಟಿ ನೀಡಿದ್ದು ಇದೇ ಮೊದಲು, ಬ್ಯಾಟರಿಗಳು, ಎಲೆಕ್ಟ್ರಾನಿಕ್ಸ್ ಮತ್ತು ರಕ್ಷಣಾ ವ್ಯವಸ್ಥೆಗಳಿಗೆ ಅಗತ್ಯವಾದ ಅಪರೂಪದ ಭೂಮಿಯು ಮತ್ತು ಇತರ ಕಾರ್ಯತಂತ್ರದ ಖನಿಜಗಳಿಗಾಗಿ ಚೀನಾವನ್ನು ಅವಲಂಬಿಸಿರುವ ಬಗ್ಗೆ ಪಾಶ್ಚಿಮಾತ್ಯ ರಾಜಧಾನಿಗಳಲ್ಲಿ ಹೆಚ್ಚುತ್ತಿರುವ ಕಳವಳಗಳ ನಡುವೆ.

ಲೆಸ್ಕ್ಯೂರ್ ಪ್ರಕಾರ, ಜಿ7 ದೇಶಗಳ ಮುಖ್ಯ ಉದ್ದೇಶವೆಂದರೆ, ಅಪರೂಪದ ಭೂಮಿಯ ಪೂರೈಕೆಗಾಗಿ ಯಾವುದೇ ಒಂದು ದೇಶವನ್ನು ಅವಲಂಬಿಸಿಲ್ಲ ಎಂದು ಖಚಿತಪಡಿಸಿಕೊಳ್ಳುವುದು, ಅಂತಹ ವಸ್ತುಗಳ ಹೊರತೆಗೆಯುವಿಕೆ ಮತ್ತು ಸಂಸ್ಕರಣೆಯಲ್ಲಿ ಪ್ರಾಬಲ್ಯ ಹೊಂದಿರುವ ಚೀನಾ, ಈ ಹಿಂದೆ ರಫ್ತುಗಳನ್ನು ನಿರ್ಬಂಧಿಸಿದೆ ಅಥವಾ ಬೆಲೆಗಳ ಮೇಲೆ ಪ್ರಭಾವ ಬೀರಲು ತನ್ನ ಮಾರುಕಟ್ಟೆ ಸ್ಥಾನವನ್ನು ಬಳಸಿಕೊಂಡಿದೆ ಎಂಬ ಅಂಶವನ್ನು ಪರಿಗಣಿಸಿ.



ಸ್ವೀಡನ್‌ನ ಗೋಥೆನ್‌ಬರ್ಗ್‌ನಲ್ಲಿ ಪ್ರಮುಖ ಸ್ವೀಡಿಷ್ ಸಿಇಒಗಳೊಂದಿಗೆ ಸಮೂಹ ಛಾಯಾಚಿತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಂಡರು.

# ದಡಾರದಂತಹ ರೋಗಲಕ್ಷಣ: 5 ಮಕ್ಕಳ ಸಾವು

**ಢಾಕಾ, ಮೇ 18:** ಬಾಂಗ್ಲಾದೇಶದಲ್ಲಿ ದಡಾರ ಹರಡುವಿಕೆ ಹದಗೆಡುತ್ತಲೇ ಇದೆ, ಕಳೆದ 24 ಗಂಟೆಗಳಲ್ಲಿ ಸೋಮವಾರ ಐದು ಮಕ್ಕಳು ರೋಗ ಸಂಬಂಧಿತ ರೋಗ ಲಕ್ಷಣಗಳಿಗೆ ಬಲಿಯಾಗಿರುವುದರಿಂದ ಸಾವಿನ ಸಂಖ್ಯೆ 464 ಕ್ಕೆ ತಲುಪಿದೆ ಎಂದು ಆರೋಗ್ಯ ಸೇವೆಗಳ ನಿರ್ದೇಶನಾಲಯ ತಿಳಿಸಿದೆ. ಇದೇ ಅವಧಿಯಲ್ಲಿ, ದಡಾರದಂತಹ ರೋಗಲಕ್ಷಣಗಳನ್ನು ಹೊಂದಿರುವ 1,405 ರೋಗಿಗಳನ್ನು ದೇಶಾದ್ಯಂತ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ, ಅದರಲ್ಲಿ 89 ಪ್ರಕರಣಗಳನ್ನು ಪ್ರಯೋಗಾಲಯದಲ್ಲಿ ದಡಾರ ಎಂದು ದೃಢಪಡಿಸಲಾಗಿದೆ. ಈ ರೋಗವು ಢಾಕಾ ವಿಭಾಗವನ್ನು ಹೆಚ್ಚು ಬಾಧಿಸಿದೆ. ಆದರೆ ರಾಜಶಾಹಿ, ಚಟ್ಟೋಗ್ರಾಮ್ ಮತ್ತು ಖುಲ್ನಾ ವಿಭಾಗಗಳಲ್ಲಿ ತೀವ್ರ ದ್ವಿತೀಯಕ ಕ್ಲಸ್ಟರ್ ಗಳನ್ನು ಗುರುತಿಸಲಾಗಿದೆ ಮತ್ತು ಒಟ್ಟಾರೆಯಾಗಿ ದೇಶದ 64 ಜಿಲ್ಲೆಗಳಲ್ಲಿ 61 ಜಿಲ್ಲೆಗಳನ್ನು ತಲುಪಿದೆ. ಇಲ್ಲಿಯವರೆಗೆ, 75 ಮಕ್ಕಳು ಈ ಕಾಯಿಲೆಯಿಂದ ಸಾವನ್ನಪ್ಪಿದ್ದಾರೆ



ಎಂದು ದೃಢಪಟ್ಟಿದೆ, ಆದರೆ 389 ಇತರರು ದಡಾರಕ್ಕೆ ಅನುಗುಣವಾದ ರೋಗ ಲಕ್ಷಣಗಳೊಂದಿಗೆ ಸಾವನ್ನಪ್ಪಿದ್ದಾರೆ, ಒಟ್ಟು ಸಾವಿನ ಸಂಖ್ಯೆ 464 ಕ್ಕೆ ತಲುಪಿದೆ. DGHS ಮಾಹಿತಿಯ ಪ್ರಕಾರ, ಮಾರ್ಚ್ 15 ಮತ್ತು ಮೇ 18 ರ ನಡುವೆ ಪ್ರಯೋಗಾಲಯ ಪರೀಕ್ಷೆಯ ಮೂಲಕ ಒಟ್ಟು 7,856 ದಡಾರ ಪ್ರಕರಣಗಳು ದೃಢಪಟ್ಟಿವೆ, ಇದರಲ್ಲಿ ಶಿಶುಗಳು ಮತ್ತು ಮಕ್ಕಳು ಅಸಮಾನವಾಗಿ ಪೀಡಿತ ಗುಂಪಾಗಿದ್ದು, ಒಟ್ಟು ಪ್ರಕರಣಗಳಲ್ಲಿ ಶೇ.80 ರಷ್ಟಿದೆ. ಇತ್ತೀಚಿನ ಆರೋಗ್ಯ ಮಾಹಿತಿ ಪ್ರಕಾರ, ದೇಶಾದ್ಯಂತ 54,911 ಶಂಕಿತ ದಡಾರ ಪ್ರಕರಣಗಳನ್ನು ಗುರುತಿಸಲಾಗಿದೆ, ಆದರೂ ಈ ಸಂಖ್ಯೆ ಹೆಚ್ಚಾಗಿರಬಹುದು ಎಂದು ಗಮನಿಸಲಾಗಿದೆ.

# ಅಮೆರಿಕ ಜೊತೆಗಿನ ಶಾಂತಿ ಒಪ್ಪಂದದ ಪರಿಷ್ಕೃತ ನಿಯಮ ನೀಡಲಾಗಿದೆ: ಇರಾನ್

**ಟೆಹ್ರಾನ್/ವಾಷಿಂಗ್ಟನ್, ಮೇ 18:** ಪಾಕಿಸ್ತಾನವು ಸುಗಮಗೊಳಿಸಿದ ವಾಷಿಂಗ್ಟನ್ನೊಂದಿಗಿನ ಪರೋಕ್ಷ ರಾಜತಾಂತ್ರಿಕತೆಯು "ನಿರಂತರ ಪ್ರಕ್ರಿಯೆ" ಎಂದು ಇರಾನ್ ಸರ್ಕಾರ ಸೋಮವಾರ ಹೇಳಿದೆ ಮತ್ತು ಎರಡೂ ಕಡೆಯವರು ಸಮಗ್ರ ಶಾಂತಿ ಒಪ್ಪಂದದ ನಿಯಮಗಳನ್ನು ಚರ್ಚಿಸುತ್ತಲೇ ಇರುವುದರಿಂದ ಟೆಹ್ರಾನ್ ತನ್ನ ಇತ್ತೀಚಿನ ನಿಲುವುಗಳನ್ನು ಅಮೆರಿಕಕ್ಕೆ ತಿಳಿಸುವಲ್ಲಿ ಯಶಸ್ವಿಯಾಗಿದೆ ಎಂದು ಹೇಳಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆಎಚ್ಚರಿಕೆ ನೀಡಿದ್ದರು, ಟೆಹ್ರಾನ್‌ಗೆ "ಗಡಿಯಾರವು ಟಿಕ್ ಟಿಕ್ ಆಗುತ್ತಿದೆ" ಮತ್ತು ಅದು ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಮತ್ತು ಈಗ 80 ನೇ ದಿನದಲ್ಲಿರುವ ಯುದ್ಧವನ್ನು ಕೊನೆಗೊಳಿಸುವ ಒಪ್ಪಂದವನ್ನು ಒಪ್ಪಿಕೊಳ್ಳಬೇಕು ಮತ್ತು ಯಾವುದೇ ನಿರ್ಣಯವಿಲ್ಲದೆ ಕಾಣಿಸಿಕೊಳ್ಳಬೇಕು. "ಮಾತುಕತೆಗಳು ಮತ್ತು ಮಾತುಕತೆಗಳು ನಿರಂತರ ಪ್ರಕ್ರಿಯೆ, ಮಧ್ಯಂತರವಲ್ಲ" ಎಂದು ಇರಾನಿನ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಸೋಮವಾರ ಹೇಳಿದರು. ವಾಷಿಂಗ್ಟನ್ ಟೆಹ್ರಾನ್‌ನ ಇತ್ತೀಚಿನ ಪ್ರಸ್ತಾಪವನ್ನು ತಿರಸ್ಕರಿಸಿದೆ ಎಂದು ಟ್ರಂಪ್ ಕಳೆದ ವಾರ ಸಾರ್ವಜನಿಕವಾಗಿ ಹೇಳಿಕೊಂಡಿದ್ದರೂ, ಟೆಹ್ರಾನ್ "ಪಾಕಿಸ್ತಾನದ ಮಧ್ಯವರ್ತಿಯಿಂದ ಅವರ ದೃಷ್ಟಿಕೋನದಿಂದ ಸರಿಪಡಿಸುವ ಟಿಪ್ಪಣಿಗಳು ಮತ್ತು ಅವಲೋಕನಗಳನ್ನು ಸ್ವೀಕರಿಸಿದೆ" ಎಂದು ಬಘೈ ಹೇಳಿದರು ಮತ್ತು ವಾರಾಂತ್ಯದಲ್ಲಿ ಅವರು ಹೇಳಿದರು, "ನಮ್ಮ ನಿಲುವುಗಳನ್ನು ಪ್ರತಿಯಾಗಿ ಅಮೆರಿಕದ ಕಡೆಗೂ ತಿಳಿಸಲಾಗಿದೆ." ಟೆಹ್ರಾನ್‌ನ ದೃಷ್ಟಿಕೋನದಿಂದ ಮಾತುಕತೆಗಳು "ಯುದ್ಧವನ್ನು ಕೊನೆಗೊಳಿಸುವುದರ ಮೇಲೆ" ಕೇಂದ್ರೀಕೃತವಾಗಿವೆ ಮತ್ತು ದೇಶವು ಅಂತರರಾಷ್ಟ್ರೀಯ ಪರಮಾಣು ಪ್ರಸರಣ ರಹಿತ ಒಪ್ಪಂದಕ್ಕೆ ಸಹಿ ಹಾಕಿರುವುದರಿಂದ ಅದರ ಪುಷ್ಟೀಕರಣದ ಹಕ್ಕನ್ನು ಗುರುತಿಸಲಾಗಿದೆ" ಎಂದು ಇರಾನಿನ ಅಧಿಕಾರಿ ಮತ್ತಷ್ಟು ಒತ್ತಾಯಿಸಿದರು. "ಪ್ರಸರಣ ರಹಿತ ಒಪ್ಪಂದದ ಅಡಿಯಲ್ಲಿ ನಮ್ಮ ಹಕ್ಕುಗಳನ್ನು ನಾವು ತ್ಯಜಿಸುವುದಿಲ್ಲ ಎಂದು ನಾವು ಒತ್ತಿ ಹೇಳಿದ್ದೇವೆ" ಎಂದು ಅವರು ಹೇಳಿದರು.

# ಋತುವಿನ ಕೊನೆಯಲ್ಲಿ ರಿಯಲ್ ಮ್ಯಾಡ್ರಿಡ್ ಫುಟ್ಬಾಲ್ ಕ್ಲಬ್‌ಗೆ ಅನುಭವಿ ಡ್ಯಾನಿ ಕಾರ್ವಾಜಲ್ ವಿದಾಯ

**ಮ್ಯಾಡ್ರಿಡ್, ಮೇ 18:** 34 ವರ್ಷ ವಯಸ್ಸಿನ ಡ್ಯಾನಿ ಕಾರ್ವಾಜಲ್ ಅವರ ಒಪ್ಪಂದವನ್ನು ವಿಸ್ತರಿಸದಿರಲು ನಿರ್ಧರಿಸಿದ ನಂತರ, ಅನುಭವಿ ರೈಟ್ ಬ್ಯಾಕ್ ಡ್ಯಾನಿ ಕಾರ್ವಾಜಲ್ ಋತುವಿನ ಕೊನೆಯಲ್ಲಿ ಕ್ಲಬ್ ತೊರೆಯಲಿದ್ದಾರೆ ಎಂದು ರಿಯಲ್ ಮ್ಯಾಡ್ರಿಡ್ ಸೋಮವಾರ ಘೋಷಿಸಿತು.

"ರಿಯಲ್ ಮ್ಯಾಡ್ರಿಡ್ ಫುಟ್ಬಾಲ್ ಕ್ಲಬ್ ಮತ್ತು ನಮ್ಮ ನಾಯಕ ಡ್ಯಾನಿ ಕಾರ್ವಾಜಲ್ ಪ್ರಸ್ತುತ ಋತುವಿನ ಕೊನೆಯಲ್ಲಿ ನಮ್ಮ ಕ್ಲಬ್‌ನ ಆಟಗಾರನಾಗಿ ಅದ್ಭುತ ಅಧ್ಯಾಯವನ್ನು ಕೊನೆಗೊಳಿಸಲು ಒಪ್ಪಿಕೊಂಡಿದ್ದಾರೆ" ಎಂದು ಕ್ಲಬ್ ಹೇಳಿಕೆಯಲ್ಲಿ ತಿಳಿಸಲಾಗಿದೆ. "ನಮ್ಮ ಕ್ಲಬ್ ಮತ್ತು ವಿಶ್ವ ಫುಟ್ಬಾಲ್‌ನ ಶ್ರೇಷ್ಠ ದಂತಕಥೆಗಳಲ್ಲಿ ಒಬ್ಬರಿಗೆ ರಿಯಲ್ ಮ್ಯಾಡ್ರಿಡ್ ತನ್ನ ಕೃತಜ್ಞತೆ ಮತ್ತು ಪ್ರೀತಿಯನ್ನು ವ್ಯಕ್ತಪಡಿಸಲು ಬಯಸುತ್ತದೆ" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ, ಆರು



ಯುರೋಪಿಯನ್ ಕಪ್ ಪ್ರಶಸ್ತಿಗಳನ್ನು ಗೆದ್ದ ಕೇವಲ ಐದು ಆಟಗಾರರಲ್ಲಿ ಕಾರ್ವಾಜಲ್ ಒಬ್ಬರು ಎಂದು ಗಮನಿಸಲಾಗಿದೆ.

ಕಾರ್ವಾಜಲ್ 10 ನೇ ವಯಸ್ಸಿನಲ್ಲಿ ರಿಯಲ್ ಮ್ಯಾಡ್ರಿಡ್‌ಗೆ ಸೇರಿದರು ಮತ್ತು ಆಲ್ಫ್ರೆಡೊ ಡಿ ಸ್ಟೆಫಾನೊ ಜೊತೆಗೆ ಕ್ಲಬ್‌ಗೆ ವಾಲ್ಡೆಬೆಬಾಸ್ ತರಬೇತಿ ಮೈದಾನದ ಮೊದಲ ಕಲ್ಲನ್ನು ವಿಧ್ಯುಕ್ತವಾಗಿ ಹಾಕಲು ಆಯ್ಕೆಯಾದರು. ಬೇಯರ್ ಲೆವರ್ಕುಸೆನ್‌ನಲ್ಲಿ ಒಂದು ಋತುವನ್ನು ಹೊರತುಪಡಿಸಿ, ನಂತರ ಮ್ಯಾಡ್ರಿಡ್ ಬೈ–ಬ್ಯಾಕ್ ಷರತ್ತನ್ನು ಸಕ್ರಿಯಗೊಳಿಸಿತು, ಅವರು ತಮ್ಮ ಸಂಪೂರ್ಣ ವೃತ್ತಿಜೀವನವನ್ನು ಕ್ಲಬ್‌ಗೆಲ್ಲಿ ಕಳೆದಿದ್ದಾರೆ, ಎಲ್ಲಾ ಸ್ಪರ್ಧೆಗಳಲ್ಲಿ 450 ಪಂದ್ಯಗಳನ್ನು ಆಡಿದ್ದಾರೆ ಮತ್ತು 14 ಗೋಲುಗಳನ್ನು ಗಳಿಸಿದ್ದಾರೆ. ರಿಯಲ್ ಮ್ಯಾಡ್ರಿಡ್ ಅಧ್ಯಕ್ಷ ಫ್ಲೋರೆಂಟಿನೊ ಪೆರೆಜ್ ಕಾರ್ವಾಜಲ್ ಅವರನ್ನು "ಒಬ್ಬ ದಂತಕಥೆ ಮತ್ತು ರಿಯಲ್ ಮ್ಯಾಡ್ರಿಡ್ ಮತ್ತು ಅದರ ಅಕಾಡೆಮಿಯ ಸಂಕೇತ" ಎಂದು ಬಣ್ಣಿಸಿದ್ದಾರೆ. ಕ್ಲಬ್‌ಗಾಗಿ ಅವರ ಕೊನೆಯ ಪ್ರದರ್ಶನವು ಮುಂದಿನ ವಾರಾಂತ್ಯದಲ್ಲಿ ಅಥ್ಲೆಟಿಕ್ ಕ್ಲಬ್ ವಿರುದ್ಧ ನಡೆಯಲಿದೆ ಎಂದು ನಿರೀಕ್ಷಿಸಲಾಗಿದೆ.

# ಸಿಎಸ್‌ಕೆ ಮಣಿಸಿ ಪ್ಲೇಆಫ್‌ಗೇರಿದ ಸನ್‌ರೈಸರ್ಸ್

**ಚೆನ್ನೈ, ಮೇ 18:** ಐಪಿಎಲ್ ಪ್ಲೇಆಫ್‌ನಲ್ಲಿ ಸ್ಥಾನ ಪಡೆಯುವಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ಯಶಸ್ವಿಯಾಗಿದೆ. ಸಿಎಸ್‌ಕೆಯ ತವರು ನೆಲವಾದ ಎಂಎ ಚಿದಂಬರಂ ಮೈದಾನದಲ್ಲಿ ನಡೆದ ಈ ಹೈವೋಲ್ಟೇಜ್ ಕದನಲ್ಲಿ ಸಿಎಸ್‌ಕೆ ತಂಡವನ್ನು 5 ವಿಕೆಟ್‌ಗಳಿಂದ ಸೋಲಿಸಿದ ಸನ್‌ರೈಸರ್ಸ್ ಈ ಆವೃತ್ತಿಯಲ್ಲಿ 8ನೇ ಗೆಲುವು ದಾಖಲಿಸುವ ಮೂಲಕ 16 ಅಂಕಗಳೊಂದಿಗೆ ಪ್ಲೇಆಫ್‌ಗೆ ಅರ್ಹತೆ ಪಡೆದುಕೊಂಡಿದೆ. ಇತ್ತ ಸನ್‌ರೈಸರ್ಸ್ ವಿರುದ್ಧ ಸೋತ ಸಿಎಸ್‌ಕೆ ಪ್ಲೇಆಫ್ ರೇಸ್‌ನಿಂದ ಭಾಗಶಃ ಹೊರಬಿದ್ದಿದೆ. ಸನ್‌ರೈಸರ್ಸ್ ತಂಡದ ಗೆಲುವಿನೊಂದಿಗೆ ಗುಜರಾತ್ ಕೂಡ ಪ್ಲೇಆಫ್‌ಗೆ ಅರ್ಹತೆ ಪಡೆದುಕೊಂಡಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಸಿಎಸ್‌ಕೆ 180 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಸನ್‌ರೈಸರ್ಸ್ ಕೊನೆಯ ಓವರ್‌ನಲ್ಲಿ ಗೆಲುವು ದಾಖಲಿಸುವ ಮೂಲಕ ಅಮೋಘ ಜಯ ದಾಖಲಿಸಿತು.



### ಸಿಎಸ್‌ಕೆ ತಂಡಕ್ಕೆ ಆರಂಭಿಕ ಆಘಾತ

ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಸಿಎಸ್‌ಕೆ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಅನುಭವಿ ಸಂಜು ಸ್ಯಾಮ್ಸನ್ 27 ರನ್‌ಗಳಿಗೆ ಔಟಾದರೆ, ನಾಯಕ ರುತುರಾಜ್ ಗಾಯಕ್ವಾಡ್ ಗೆಲ್ಲಲೇಬೇಕಾದ ಪಂದ್ಯದಲ್ಲಿ 15 ರನ್‌ಗಳಿಗೆ ಸುಸ್ತಾದರು. ಊರ್ವಿಲ್ ಪಟೇಲ್ ಇನ್ನಿಂಗ್ಸ್ ಕೂಡ 17 ರನ್‌ಗಳಿಗೆ ಅಂತ್ಯವಾಯಿತು. ಈ ಮಧ್ಯದಲ್ಲಿ, ಕಾರ್ತಿಕ್ ಶರ್ಮಾ 32 ರನ್‌ಗಳ ಇನ್ನಿಂಗ್ಸ್ ಆಡುವ ಮೂಲಕ ತಂಡದ ಇನ್ನಿಂಗ್ಸ್ ನಿಭಾಯಿಸಿದರು. ಡೆವಾಲ್ಡ್ ಬ್ರೆವಿಸ್ ಕೂಡ 44 ರನ್?ಗಳ ನಿರ್ಣಾಯಕ ಇನ್ನಿಂಗ್ಸ್ ಆಡುವ ಮೂಲಕ ತಂಡವನ್ನು 180 ರನ್‌ಗಳಿಗೆ ಕೊಂಡೊಯ್ದರು. ಇತ್ತ ಹೈದರಾಬಾದ್ ಪರ ನಾಯಕ ಪ್ಯಾಟ್ ಕಮ್ಮಿನ್ಸ್ ಗರಿಷ್ಠ ಮೂರು ವಿಕೆಟ್‌ಗಳನ್ನು ಪಡೆದರು.

### ನಾಯಕನ ಇನ್ನಿಂಗ್ಸ್ ಆಡಿದ ಕಿಶನ್

ಈ ಗುರಿ ಬೆನ್ನಟ್ಟಿದ ಸನ್‌ರೈಸರ್ಸ್‌ಗೂ ಆಘಾತ ಎದುರಾಯಿತು. ಎರಡನೇ ಓವರ್‌ನಲ್ಲಿ ಟ್ರಾವಿಸ್ ಹೆಡ್ ಔಟ್ ಆದರು. ಆದರೆ ಆ ನಂತರ ಬಂದ ಇಶಾನ್ ಕಿಶನ್ ಮತ್ತು ಅಭಿಷೇಕ್ ಶರ್ಮಾ ನಿಧಾನವಾಗಿ ಜೊತೆಯಾಟ ಕಟ್ಟಿದರು. ಆದಾಗ್ಯೂ ಅಭಿಷೇಕ್ ಶರ್ಮಾ ಎಂಟನೇ ಓವರ್‌ನಲ್ಲಿ 26 ರನ್ ಬಾರಿಸಿ ಔಟಾದರು. ಆಗ ತಂಡದ ಮೊತ್ತ ಕೇವಲ 56 ರನ್ ಆಗಿತ್ತು.

### ಕಿಶನ್– ಕ್ಲಾಸೆನ್ ಜೊತೆಯಾಟ

ಈ ವೇಳೆ ತಂಡಕ್ಕೆ ಆಸರೆಯಾದ ಹೆನ್ರಿಕ್ ಕ್ಲಾಸೆನ್ ನಾಯಕ ಇಶಾನ್ ಕಿಶನ್ ಜೊತೆ 75 ರನ್‌ಗಳ ಜೊತೆಯಾಟ ಕಟ್ಟಿದರು. 47 ರನ್ ಬಾರಿಸಿದ್ದ ಕ್ಲಾಸೆನ್ ಅವರ ವಿಕೆಟ್ ಪಡೆದ ನಂತರ ಚೆನ್ನೈ ತಂಡವು ಮತ್ತೆ ಗೆಲುವಿನ ಭರವಸೆ ಮೂಡಿಸಿತ್ತು. ಆದರೆ ಇಶಾನ್ ಕಿಶಾನ್ ಅದ್ಭುತ ಅರ್ಧಶತಕದ ಜೊತೆಗೆ 70 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿ ತಂಡವನ್ನು 5 ವಿಕೆಟ್‌ಗಳ ಗೆಲುವಿನತ್ತ ಕೊಂಡೊಯ್ದರು.